ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ


ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 92
25–9–2025 ಗುರುವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 92

## ಪದ್ಮಭೂಷಣ ಪುರಸ್ಕೃತ ಹಿರಿಯ ಸಾಹಿತಿ ಎಸ್.ಎಲ್. ಭೈರಪ್ಪ ಇನ್ನಿಲ್ಲ

**ಬೆಂಗಳೂರು,ಸೆ.24–** ಕನ್ನಡ ಸಾರಸತ್ವ ಲೋಕದ ಸರಸ್ವತಿ ಪುತ್ರನೆಂದೇ ಓದುಗರ ವಲಯದಲ್ಲಿ ಗುರುತಿಸಿಕೊಂಡಿದ್ದ, ಪ್ರತಿಷ್ಠಿತ ಪದ ಭೂಷಣ ಪ್ರಶಸ್ತಿ ಪುರಸ್ಕೃತ ಡಾ.ಎಸ್. ಎಲ್.ಭೈರಪ್ಪ ಅವರು ಇಂದು ವಿಧಿವಶರಾಗಿದ್ದಾರೆ. ಕಳೆದ ಹಲವು ದಿನಗಳಿಂದ ವಯೋಸಹಜ ಕಾಯಿಲೆಯಿಂದ ಬಳಲುತ್ತಿದ್ದ ಅವರು, ನಗರದ ರಾಜರಾಜೇಶ್ವರಿನಗರದಲ್ಲಿರುವ ರಾಷ್ಟ್ರೋತ್ಥಾನ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ಗುರುವಾರ ಮಧ್ಯಾಹ್ನ ಚಿಕಿತ್ಸೆ ಫಲಕಾರಿಯಾಗದೆ ನಿಧನರಾಗಿದ್ದಾರೆ.ಮೂರು ತಿಂಗಳ ಹಿಂದೆ ಮೈಸೂರಿನಿಂದ ಬೆಂಗಳೂರಿಗೆ ಆಗಮಿಸಿದ್ದ ಅವರು ಸಂಪಾದಕರೊಬ್ಬರ ನಿವಾಸದಲ್ಲಿ ವಾಸವ್ಯವಿದ್ದರು. ಕೆಲ ದಿನಗಳ ಹಿಂದೆ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಾಗಿದ್ದರು.



ನಗರದ ರವೀಂದ್ರ ಕಲಾಕ್ಷೇತ್ರದಲ್ಲಿ ನಾಳೆ ಬೆಳಗ್ಗೆಯಿಂದ ಮಧ್ಯಾಹ್ನದವರೆಗೆ ಭೈರಪ್ಪ ಅವರ ಪಾರ್ಥೀವ ಶರೀರದ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗುತ್ತದೆ. ಬಳಿಕ ಮೈಸೂರಿನಲ್ಲಿ ಗುರುವಾರ ಸಂಜೆ ಸಕಲ ಸರ್ಕಾರಿ ಗೌರವಗಳೊಂದಿಗೆ ಅಂತ್ಯಕ್ರಿಯೆ ನೆರವೇರಲಿದೆ ಎಂದು ಅವರ ಆಪ್ತ ಮೂಲಗಳು ತಿಳಿಸಿವೆ.

ಹಾಸನ ಜಿಲ್ಲೆಯ ಚೆನ್ನರಾಯಪಟ್ಟಣದ ಸಂತೇಶಿವರದಲ್ಲಿ 1934ರ ಜುಲೈ 26ರಂದು ಜನಿಸಿದ್ದ ಅವರು, ರಾಷ್ಟ್ರಕವಿ ಕುವೆಂಪು ಅವರ ನಂತರ ಸಾಹಿತ್ಯ ವಲಯದಲ್ಲಿ ಬಹುದೊಡ್ಡ ಓದುಗರನ್ನು ಹೊಂದಿದ್ದ ಅಪರೂಪದ ಸಾಹಿತಿಯಾಗಿದ್ದರು.

ದೇಶದ 3ನೇ ಅತ್ಯುನ್ನತ ನಾಗರಿಕ ಪ್ರಶಸ್ತಿ ಎನಿಸಿದ ಪದಭೂಷಣ ಪ್ರಶಸ್ತಿಗೂ ಭಾಜನರಾಗಿದ್ದ ಅವರಿಗೆ ಪ್ರತಿಷ್ಠಿತ ಜ್ಞಾನಪೀಠ ಪ್ರಶಸ್ತಿ ಒಂದಿಲ್ಲೊಂದು ದಿನ ಸಿಕ್ಕೇ ಸಿಗುತ್ತದೆ ಎಂಬ ಓದುಗರ ನಿರೀಕ್ಷೆ ಕೊನೆಗೂ ಈಡೇರಲಿಲ್ಲ. ಅವರು ರಚಿಸಿದ್ದ ಅನೇಕ ಕೃತಿಗಳು ಇಂಗ್ಲಿಷ್‌ಗೆ ತರ್ಜುಮೆಗೊಂಡು ಪ್ರತಿಷ್ಠಿತ ಬೂಕರ್ ಪ್ರಶಸ್ತಿಯೂ ಅವರಿಗೆ ಸಿಗಲಿದೆ ಎಂದು ನಿರೀಕ್ಷೆ ಮಾಡಲಾಗಿತ್ತು. ಅದು ಕೂಡ ಅವರ ಜೀವಿತಾವಧಿಯಲ್ಲಿ ಸಾಧ್ಯವಾಗಲೇ ಇಲ್ಲ.

ಸರಸ್ವತಿ ಸಮಾನ್ ಪ್ರಶಸ್ತಿಗೆ ಭಾಜರಾಗಿದ್ದ ಭೈರಪ್ಪ ಅವರು, ಭೀಮಕಾಯ, ಬೆಳಕು ಮೂಡಿತು, ಧರ್ಮಶ್ರೀ, ದೂರ ಸರಿದರು, ಮತದಾನ, ಜಲಪಾತ, ನೆಲೆ, ಸಾಕ್ಷಿ, ಅಂಚು, ತಂತು, ಆವರಣ, ಯಾನ, ನಾಯಿ ನೆರಳು, ಗ್ರಹಣ, ದಾಟು, ಸಂಸ್ಕಾರ, ಪರ್ವ, ಗೃಹಭಂಗ, ಕವಲು, ವಂಶವೃಕ್ಷ, ನಿರಾಕರಣ, ಸಾರ್ಥ, ಅನ್ವೇಷಣ, ಉತ್ತರಕಾಂಡ ಮೊದಲಾದ ಕೃತಿಗಳ ಮೂಲಕ ಸಾಹಿತ್ಯ ಲೋಕವನ್ನು ಶ್ರೀಮಂತಗೊಳಿಸಿದ್ದರು.

■ ಜಾತಿ ಆಧಾರದ ಮೇಲೆ ಮೀಸಲಾತಿ ಬೇಡ, ಬಸವ ತತ್ವದವರು ಮೀಸಲು ತ್ಯಜಿಸಬೇಕು.

■ ಐದು ಗ್ಯಾರಂಟಿಗಳು ಜಾತಿ ರಹಿತವಾಗಿ ನೀಡಲಾಗಿದೆ. ಆಗಿಯೇ ಎಲ್ಲ ಜಾತಿಯಲ್ಲಿಯೂ ಬಡವರಿದ್ದಾರೆ. ಇನ್ನೂ ಗುಡಿಸಲಲ್ಲಿ ವಾಸ ಮಾಡುತ್ತಿದ್ದಾರೆ. ಇಂಥವರನ್ನು ಸಮೀಕ್ಷೆಯಲ್ಲಿ ಗುರುತಿಸಿ ಸರ್ಕಾರಿ ಸೌಲಭ್ಯ ನೀಡಬೇಕು.

# ಬಡತನ ಆಧರಿಸಿ ಮೀಸಲು ಸೌಲಭ್ಯ ಕಲ್ಪಿಸಿ, ಬಸವ ಪಂಥಿಯರು ಮೀಸಲು ಕೇಳಬಾರದು

## ಸಿರಿಗೆರೆ ಬೃಹನ್ಮಠದ ಶ್ರೀ ಡಾ. ಶಿವಮೂರ್ತಿ ಶಿವಾಚಾರ್ಯ ಸ್ವಾಮೀಜಿ ಸಲಹೆ

**ದಾವಣಗೆರೆ:** ಬಸವ ತತ್ವ ಪಾಲಕರು ಮೀಸಲು ತ್ಯಜಿಸಬೇಕು ಎಂದು ಗುಡುಗಿರುವ ಸಿರಿಗೆರೆ ತರಳುಬಾಳು ಮಠದ ಶ್ರೀ ಡಾ. ಶಿವಮೂರ್ತಿ ಶಿವಾಚಾರ್ಯ ಸ್ವಾಮೀಜಿಗಳು, ಜಾತಿ ರಹಿತ ನೆಲೆಯಲ್ಲಿ ಸರ್ಕಾರಿ ಸೌಲಭ್ಯ ಕಲ್ಪಿಸಲು ಸರ್ಕಾರ್ ಮುಂದಾಗಬೇಕು ಎಂದು ಸಲಹೆ ಮಾಡಿದ್ದಾರೆ.

ಚಿತ್ರದುರ್ಗ ತಾಲ್ಲೂಕು ಸಿರಿಗೆರೆ ಬೃಹನ್ಮಠದಲ್ಲಿ ಬುಧವಾರ ಆಯೋಜಿಸಿದ್ದ ಲಿಂ. ಶಿವಕುಮಾರ ಶಿವಾಚಾರ್ಯ ಮಹಾ ಸ್ವಾಮೀಜಿಗಳ 34ನೇಯ ಶ್ರದ್ಧಾಂಜಲಿ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ರಾಜ್ಯ ಸರ್ಕಾರದ ಸಮೀಕ್ಷೆಯ ಗುರಿ ಬಡತನ ಗುರುತಿಸುವ ಕಡೆ ಇರಬೇಕು. ಸರ್ಕಾರ ಜಾತಿ ಗುರುತಿಸುವ ಕಡೆ ಹೋಗಬಾರದು. ಜಾತಿ, ಉಪ ಜಾತಿ ಗಣತಿ ಮಾಡುವುದು ಜನರ ಮಾನಸಿಕ ಆರೋಗ್ಯಕ್ಕೆ ಕುಟರಾಘಾತ ನೀಡಿದಂತಾಗಿದೆ. ಇದು ಮುಂದೆ ಜಾತಿ ಸಂಘರ್ಷಕ್ಕೆ ಕಾರಣವಾಗಬಹುದು ಎಂದು ಆತಂಕ ವ್ಯಕ್ತಪಡಿಸಿದರು.

ಬಸವಣ್ಣನಿಗೆ ಸಾಮಾಜಿಕವಾಗಿ ಕೆಳಸ್ತರದಲ್ಲಿ ಬಿದ್ದವರ ಬಗ್ಗೆ ಕಾಳಜಿ ಇತ್ತು. ಹೀಗಾಗಿ ಬಸವ ಮಂಠಪದಲ್ಲಿ ಜಾತಿ ಕೇಳುತ್ತಿರಲಿಲ್ಲ. ಬಸವಣ್ಣನ ಭಾವಚಿತ್ರ ಹಾಕಿದರಷ್ಟೇ ಸಾಲದು. ಅವರ ತತ್ವ ಪಾಲನೆ ಮಾಡಬೇಕು. ಜಾತಿ ಜಾತಿ ಎಂದು ಗುರುತಿಸಿ ಸಂಘರ್ಷ ಉಂಟು ಮಾಡಿದರೆ ಆ ದೇವರು ಸಹ ಕ್ಷಮಿಸುವುದಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.



ಕಾನೂನು ಕಾರಣಕ್ಕೆ ನಾವು ಕೂಡ ಜಾತಿ ಹೆಸರು ಬರೆಸಲು ಮನಸ್ಸಿಲ್ಲದೆ ಮನಸ್ಸಿನಿಂದ ಹೇಳಬೇಕಾಯಿತು. ಮೀಸಲಾತಿ ಸೌಲಭ್ಯ ಇಲ್ಲದಿದ್ದರೆ ಯಾರೂ ಕೂಡ ಧರ್ಮದ ಕಾಲಂನಲ್ಲಿ ಏನು ಬರೆಸಬೇಕೆಂದು ತಲೆ ಕೆಡಿಸಿಕೊಳ್ಳುತ್ತಿರಲಿಲ್ಲ. ಮೀಸಲು ಪಡೆಯಬೇಕೆಂಬ ಆಸೆಯಿಂದ ಸಂಘರ್ಷ ಉಂಟಾಗುತ್ತಿದೆ.

ಬಸವಣ್ಣ ಕೆಳಸ್ತರದ ವರಿಗೆ ಸಮಾನತೆ ಕೊಡಿಸಲು ಯತ್ನಿಸಿದ್ದು, ಕಾಳಜಿಯಿಂದ ಮಾತ್ರ ಓಟು ಪಡೆಯಲು ಅಲ್ಲ ಎಂದು ಹೇಳಿದರು.

ಬಸವ ಪಂಥಿಯರು ಮೀಸಲು ಕೇಳಬಾರದು. ನಿಮಗೆ ಕಾಳಜಿ ಇದ್ದರೆ ಕೆಳ ವರ್ಗದ ಜನರಿಗೆ ನಿಮ್ಮ ಮೀಸಲು ಕೊಡುವಂತೆ ಸರ್ಕಾರಕ್ಕೆ ಹೇಳಬೇಕಾಗಿತ್ತು. ಬಸವಣ್ಣನ ಲಿಂಗಾಯತ ಧರ್ಮ ಈಗ ಜಾತಿ ಆಗುತ್ತಿದೆ ಎಂದು ವಿಷಾಧಿಸಿದ ಶ್ರೀಗಳು, ಸಮೀಕ್ಷೆ ಮಾಡಬೇಕಾಗಿರುವುದು ಜಾತಿ ಸಮೀಕ್ಷೆ ಅಲ್ಲ. ಪ್ರತಿಯೊಂದು ಜಾತಿಯಲ್ಲಿಯೂ ಬಡವರಿದ್ದಾರೆ. ಗ್ಯಾರಂಟಿ ಯೋಜನೆ ಬಸವ ತತ್ವಕ್ಕೆ ಅನುಗುಣವಾಗಿದೆ. ಇದೇ ರೀತಿ ಜಾತಿ ಹೊರತುಪಡಿಸಿ ಸಮೀಕ್ಷೆ ನಡೆಯಬೇಕು ಎಂದು ಪ್ರತಿಪಾದಿಸಿದರು.

ಜಾತಿ ಬಿಟ್ಟು ವರ್ಗ ಮಾಡಿ. ಎಬಿಸಿಡಿ ಮಾಡಿ. ಪರಿಶಿಷ ಜಾತಿ, ಪಂಗಡಕ್ಕೆ ಸಂವಿಧಾನ ದತ್ತವಾದ ಮೀಸಲು ಕೊಡಿ. ಉಳಿದವರನ್ನು ಎಬಿಸಿಡಿ ಎಂದು ವರ್ಗ ಮಾಡಿ ಅವರಿಗೆ ಮೀಸಲು ಕೊಟ್ಟರೆ ನಿಜವಾದ ಬಸವ ತತ್ವ ಪಾಲನೆ ಆಗಬೇಕು. ಆದಾಯ, ಬಡತನ ಆಧಾರದ ಮೇಲೆ ವರ್ಗಗಳನ್ನಾಗಿ ವಿಂಗಡಿಸಿ ಎಂದು ಅಭಿಪ್ರಾಯಪಟ್ಟರು.

ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಮಾತನಾಡಿ, ಸಂಘರ್ಷಮಯ ಜೀವನದಲ್ಲಿ ಸುಳ್ಳಿಗೆ ಬಹಳಷ್ಟು ಗೆಳೆಯರಿದ್ದಾರೆ. ಸತ್ಯಕ್ಕೆ ಸ್ನೇಹಿತರಿಲ್ಲ. ಆದರೆ, ಮಹಾತ್ಮರು ಎಂಥ ವಿರೋಧ ಬಂದರೂ ಸತ್ಯದ ಜೊತೆಯಲ್ಲಿಯೇ ನಡೆದಿದ್ದಾರೆ. ಸತ್ಯ–ಸುಳ್ಳಿನ ಸಂಘರ್ಷದಲ್ಲಿ ಜನ ಜೀವನ ಸಾಗಿಸುವಂತಾಗಿದೆ ಎಂದರು.

ವ್ಯಕ್ತಿತ್ವ ಎನ್ನುವುದು ಜಾತಿ, ಉಪ ಜಾತಿ ಆಧಾರದ ಮೇಲೆ ಚೂರಾಗುತ್ತಿದೆ. ಮಾನವೀಯತೆ ತಳಹದಿಯ ಬಸವ ತತ್ವ ನಂಬಿ ಎಲ್ಲರೂ ಮಾನವರು ಎಂಬುದೇ ಇದಕ್ಕೆ ಪರಿಹಾರ. ಆಗ ಮಾತ್ರ ವ್ಯವಸ್ಥೆ ಬದಲಾಗಲು ಸಾಧ್ಯ ಎಂದರು.

ಮಾಜಿ ಸಚಿವ ಎಚ್. ಆಂಜನೇಯ ಮಾತನಾಡಿ, ಬರಡು ಭೂಮಿಗೆ ನೀರುಣಿಸುವ ಮೂಲಕ ಬಡ ರೈತರ ಬಾಳಿಗೆ ಚೈತನ್ಯ ತಂದಿದ್ದಾರೆ. ಮಠದ ಭಕ್ತರಲ್ಲಿ ಶಿಸ್ತು ಮೂಡಲು ಇಲ್ಲಿನ ಹಿರಿಯ ಶ್ರೀಗಳು ಕಾರಣ. ಮಠದ ಭಿನ್ನಾಭಿಪ್ರಾಯ ನಿವಾರಣೆ ಶೀಘ್ರ ಆಗಲಿ ಎಂದು ಹೇಳಿದರು.

ಶಾಸಕ ಎಂ. ಚಂದ್ರಪ್ಪ ಮಾತನಾಡಿ, ಧೀರ ಸನ್ಯಾಸಿಯಾಗಿದ್ದ ಶಿವಕುಮಾರ ಸ್ವಾಮೀಜಿಗಳು ಸಮಾಜಲ್ಲಿದ್ದ ಮೂಢನಂಬಿಕೆ, ಕಂದಾಚಾರ ದೂರ ಮಾಡಿದರು. ಮಾನವ ಪ್ರೇಮಿಯಾಗಿದ್ದ ಹಿರಿಯ ಶ್ರೀಗಳು ಜನರ ಕಷ್ಟಗಳಿಗೆ ಸ್ಪಂದಿಸುತ್ತಿದ್ದರು ಎಂದು ಸ್ಮರಿಸಿದರು.

ಡಾ. ಎಚ್. ತಿಪ್ಪೇರುದ್ರಸ್ವಾಮಿ ಅವರ ಕರ್ಪೂರ ಕಮ್ಮಠ ಕೃತಿಯನ್ನು ಹಿಂದಿಗೆ ಅನುವಾದಿಸಿದ ನಿವೃತ್ತ ಉಪನ್ಯಾಸಕಿ ಬಿ.ಟಿ. ಶಶಿಕಲಾದೇವಿ ಪುಸ್ತಕವನ್ನು ಬಿಡುಗಡೆ ಮಾಡಲಾಯಿತು.

ಸಾಧು ಸದ್ಧರ್ಮ ಸಮಾಜದ ಅಧ್ಯಕ್ಷ ಬಿ.ಆರ್. ಬಸವರಾಜಪ್ಪ ಅಧ್ಯಕ್ಷತೆ ವಹಿಸಿದ್ದರು. ವಿಧಾನ ಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ, ಕೇಂದ್ರ ಮಾಜಿ ಸಚಿವ ಜಿ.ಎಂ. ಸಿದ್ದೇಶ್ವರ್, ಶಾಸಕರಾದ ಎಂ. ಚಂದ್ರಪ್ಪ, ಯು.ಬಿ. ಬಣಕಾರ್, ಶಿವಗಂಗ ಬಸವರಾಜ್, ಟಿ.ಆರ್. ರಘುಮೂರ್ತಿ, ಎಚ್.ಡಿ. ತಮ್ಮಯ್ಯ ಮತ್ತಿತರರು ಇದ್ದರು. ನಿವೃತ್ತ ಅಧ್ಯಾಪಕ ನಾ. ಲೋಕೇಶ ಒಡೆಯರ್ ಉಪನ್ಯಾಸ ನೀಡಿದರು.

## ನ್ಯಾಯಾಲಯದಲ್ಲಿ ಸೆ.26 ರಂದು ಗ್ರಾಹಕರ ನ್ಯಾಯಶಾಸ್ತ್ರ ಕಾರ್ಯಕ್ರಮ

**ದಾವಣಗೆರೆ :** ನಗರದ ದೇವರಾಜ್ ಅರಸ್ ಬಡಾವಣೆಯಲ್ಲಿನ ಜಿಲ್ಲಾ ವಕೀಲರ ಸಾಂಸ್ಕೃತಿಕ ಸಭಾ ಭವನದಲ್ಲಿ ಸೆಪ್ಟೆಂಬರ್ 26ರಂದು ಮಧ್ಯಾಹ್ನ 2 ಗಂಟೆಗೆ ಗ್ರಾಹಕರ ನ್ಯಾಯಾಶಾಸ್ತ್ರ ಕಾರ್ಯಕ್ರಮ ಆಯೋಜಿಸಲಾಗಿದೆ.

ಕರ್ನಾಟಕ ಉಚ್ಚನ್ಯಾಯಾಲಯ ನ್ಯಾಯಮೂರ್ತಿ ಹಾಗೂ ದಾವಣಗೆರೆ ಜಿಲ್ಲಾ ಆಡಳಿತಾತ್ಮಕ ನ್ಯಾಯಮೂರ್ತಿ ರವಿ ವಿ. ಹೊಸಮನಿ ಉದ್ಘಾಟಿಸುವರು. ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಟಿ.ಆರ್.ಗುರುಬಸವರಾಜ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ವೇಲಾ ಡಿ.ಕೆ, ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಹಾಗೂ ಸಂಪನ್ಮೂಲ ವ್ಯಕ್ತಿಗಳಾಗಿ ಧಾರವಾಡದ ನ್ಯಾಯವಾದಿ ಬಸವಪ್ರಭು ಹೊಸಕೇರಿ ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

# ಸರ್ಕಾರಿ ಜಮೀನು ಒತ್ತುವರಿ ಮಾಡಿದರೆ ಸೂಕ್ತ ಕ್ರಮ

**ದಾವಣಗೆರೆ :** ಜಿಲ್ಲೆಯಲ್ಲಿ ಸರ್ಕಾರಿ ಜಮೀನುಗಳನ್ನು ಒತ್ತುವರಿ ಮಾಡಿದರೆ ಅವರ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಅವರು ತಿಳಿಸಿದರು.

ಅವರು ಸೆ.24 ರಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿಯ ಮೂರನೇ ತ್ರೈ ಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಗಳೂರು ತಾಲ್ಲೂಕು ಚಿದರುವಳ್ಳಿ ಗ್ರಾಮದ 13 ಎಕರೆ ಜಮೀನಿನಲ್ಲಿ ಈಗಾಗಲೇ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ–ಕ್ಕೆ ಸೇರಿದ ಅನೇಕ ಬಡ ಕುಟುಂಬದವರು ಮನೆಗಳನ್ನು ನಿರ್ಮಿಸಿಕೊಂಡಿರುತ್ತಾರೆ. ಆ ಪ್ರದೇಶವನ್ನು ಕಂದಾಯ ಗ್ರಾಮವನ್ನಾಗಿಸಲು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. ಕಂದಾಯ ಗ್ರಾಮವಾಗಿ ಘೋಷಣೆಯಾದ ನಂತರ ಅಧಿಕೃತವಾಗಿ ಹಕ್ಕುಪತ್ರ ಸಹ ವಿತರಿಸಲಾಗುವುದು. ಆ ಪ್ರದೇಶದಲ್ಲಿ ಪ್ರಸ್ತುತ ಯಾವುದೇ ನಿರ್ಮಾಣ ಕಾರ್ಯಗಳನ್ನು ಕೈಗೊಳ್ಳುವಂತಿಲ್ಲ. ಒಂದೇ ವೇಳೆ ಕಾನೂನು ಬಾಹಿರವಾಗಿ ನಿರ್ಮಾಣ ಕಾರ್ಯಗಳನ್ನು ಕೈಗೊಂಡಲ್ಲಿ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು ಎಂದು ತಿಳಿಸಿದರು.



2025ರ ಜನವರಿ 01 ರಿಂದ ಸೆಪ್ಟೆಂಬರ್ 24 ರವರೆಗೆ 2 ಕೊಲೆ ಪ್ರಕರಣ, 4 ಪೋಕ್ಸೋ ಮತ್ತು 45 ಇತರೆ ದೌರ್ಜನ್ಯ ಪ್ರಕರಣ ಸೇರಿ ಒಟ್ಟು 51 ಪ್ರಕರಣ ದಾಖಲಾಗಿವೆ. ಇದರಲ್ಲಿ 20 ಪ್ರಕರಣಗಳಲ್ಲಿ ಚಾರ್ಜ್‌ಶೀಟ್ ಸಲ್ಲಿಕೆಯಾಗಿವೆ. ದೌರ್ಜನ್ಯಕ್ಕೊಳಗಾದ ಪರಿಶಿಷ್ಟ ಜಾತಿಯ 93, ಪರಿಶಿಷ್ಟ ಪಂಗಡದ 43 ಸಂತ್ರಸ್ಥರನ್ನು ಒಳಗೊಂಡಂತೆ ಒಟ್ಟು 136 ಪ್ರಕರಣಗಳಲ್ಲಿ ರೂ.102.50 ಲಕ್ಷ ಪರಿಹಾರ ವಿತರಿಸಲಾಗಿದೆ.

2025 ನೇ ವರ್ಷದಲ್ಲಿ ಜನವರಿ ಮಾಹೆಯಿಂದ ಇಲ್ಲಿಯವರೆಗೆ ಎರಡು ಕೊಲೆ ಪ್ರಕರಣಗಳಲ್ಲಿ ಮೃತರ ಅವಲಂಭಿತರಿಗೆ ಸರ್ಕಾರಿ ನೌಕರಿ ನೀಡಲು ದಾಖಲೆಗಳನ್ನು ಸಲ್ಲಿಸಲು ಸಂತ್ರಸ್ಥರಿಗೆ ಮಾಹಿತಿ ನೀಡಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು ಸಭೆಗೆ ತಿಳಿಸಿದರು.

ನ್ಯಾಯಾಲಯದಲ್ಲಿ ಇತ್ಯರ್ಥಕ್ಕೆ 2025 ರ ಸೆಪ್ಟೆಂಬರ್ ಅಂತ್ಯಕ್ಕೆ ಒಟ್ಟು 146 ಪ್ರಕರಣಗಳು ಬಾಕಿ ಇರುವುದಾಗಿ ಸರ್ಕಾರಿ ಅಭಿಯೋಜಕರು ಸಭೆಗೆ ತಿಳಿಸಿದರು. ಅಗತ್ಯ ದಾಖಲಾತಿಗಳನ್ನು ನೀಡಿ ಆದಷ್ಟು ಶೀಘ್ರ ಪ್ರಕರಣಗಳನ್ನು ಇತ್ಯರ್ಥಪಡಿಸಲು ಜಿಲ್ಲಾಧಿಕಾರಿಗಳು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪಂಗಡಕ್ಕೆ ಸೇರಿದ ವಸತಿ ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇದ್ದಲ್ಲಿ ಅದನ್ನು ಪರಿಶೀಲಿಸಿ ಸೂಕ್ತ ಕ್ರಮವಹಿಸುವಂತೆ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಿಗೆ ಸೂಚನೆ ನೀಡಿದರು. ನೆರೆ ಜಿಲ್ಲೆಗಳಿಂದ ಹೆಚ್ಚು ವಿದ್ಯಾರ್ಥಿಗಳು ಜಿಲ್ಲೆಗೆ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ವಿದ್ಯಾರ್ಥಿನಿಲಯಗಳ ಬೇಡಿಕೆ ಹೆಚ್ಚಿದೆ.

## ಇಂದು ಜಿಎಫ್ ಜಿ ಸಿ ಕಾಲೇಜಲ್ಲಿ ಶೈಕ್ಷಣಿಕ ಕಾರ್ಯಕ್ರಮ

**ದಾವಣಗೆರೆ:** ದಾವಣಗೆರೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮತ್ತು ಸಂಜೆ ಕಾಲೇಜಿನಲ್ಲಿ 2025–26ನೇ ಶೈಕ್ಷಣಿಕ ಸಾಲಿನ ಸಾಂಸ್ಕೃತಿಕ ಕ್ರೀಡೆ, ಎನ್‌ಎಸ್‌ಎಸ್, ಎನ್‌ಸಿಸಿ ರೋವರ್ಸ್ ಮತ್ತು ರೇಂಜರ್ಸ್ ಚಟುವಟಿಕೆಗಳ ಉದ್ಘಾಟನಾ ಸಮಾರಂಭವು ಸೆ.25ರ ಇಂದು ಬೆಳಗ್ಗೆ 10.30ಕ್ಕೆ ಕಾಲೇಜಿನ ಆವರಣದಲ್ಲಿ ಜರುಗಲಿದೆ.

ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್ ಮಲ್ಲಿಕಾರ್ಜುನ್ ಉಪಸ್ಥಿತಿಯಲ್ಲಿ ನಡೆಯುವ ಕಾರ್ಯಕ್ರಮದ ಉದ್ಘಾಟನೆಯನ್ನು ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ನೆರವೇರಿಸಲಿದ್ದು, ಮುಖ್ಯ ಅತಿಥಿಗಳಾಗಿ ಕರ್ನಾಟಕ ಜಾನಪದ ಅಕಾಡೆಮಿ ಮಾಜಿ ಅಧ್ಯಕ್ಷೆ ಪದ್ಮಶ್ರೀ ಮಂಜಮ್ಮ ಜೋಗತಿ ಪಾಲ್ಗೊಳ್ಳಲಿದ್ದಾರೆ.

ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ಬಸವರಾಜ ಸಿ. ತಹಸಿಲ್ದಾರ್ ಅಧ್ಯಕ್ಷತೆಯಲ್ಲಿ ಸಂಜೆ ಕಾಲೇಜಿನ ಪ್ರಾಂಶುಪಾಲರಾದ ಕೆ.ಬಿ ಸುನಿತಾ, ಐಕ್ಯೂಎಸಿ ಸಂಚಾಲಕ ಡಾ. ಜೆ.ಪಿ ಗುರುರಾಜ್ ಅಧೀಕ್ಷಕರಾದ ಎಸ್ ಪ್ರತಿಭಾ ಭಾಗವಹಿಸಲಿದ್ದಾರೆ.

### ನಿಧಿ ಆಪ್ಕೆ ನಿಕಾಟ್ 2.0 ಕಾರ್ಯಕ್ರಮ

**ದಾವಣಗೆರೆ :** ಪ್ರತಿ ಜಿಲ್ಲೆಯಲ್ಲಿ ಪ್ರತಿ ತಿಂಗಳ 27 ರಂದು ನಿಧಿ ಆಪ್ಕೆ ನಿಕಾಟ್ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ತೋಷನಿ ಅರ್ಬನ್, #48/1, ಎವಿಕೆ ಕಾಲೇಜು ರಸ್ತೆ, ಪಿ.ಜೆ ಬಡಾವಣೆ ತೋಷನಿ ಎಂಪೋರಿಯಾ ದಾವಣಗೆರೆ–577002 ಇಲ್ಲಿ ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಉದ್ಯೋಗದಾತರು ಮತ್ತು ಉದ್ಯೋಗಿಗಳಿಗೆ, ಪಿಂಚಣಿದಾರರಿಗೆ ಮಧ್ಯಾಹ್ನ 2.30 ರಿಂದ 4 ಗಂಟೆಯವರೆಗೆ ಕಾರ್ಯಕ್ರಮವನ್ನು ನಡೆಸಲಾಗುವುದು ಎಂದು ಪ್ರಾದೇಶಿಕ ಭವಿಷ್ಯ ನಿಧಿ ಕಮೀಷನರ್ ತಿಳಿಸಿದ್ದಾರೆ.

# ಪ್ರತಿಯೊಬ್ಬರೂ ಗೌರವಯುತವಾಗಿ ಎಲ್ಲಾ ಸವಲತ್ತುಗಳನ್ನು ಹೊಂದಿ ಸಂತೋಷವಾಗಿ ಬಾಳುವುದೇ ಭಾರತ ಸಂವಿಧಾನದ ಆಶಯ

## ಉಪಲೋಕಾಯುಕ್ತ ನ್ಯಾ. ಕೆ.ಎನ್.ಫಣೀಂದ್ರ

**ಚಿಕ್ಕಮಗಳೂರು, ಸೆ.24:** ಸಂವಿಧಾನದ ಆಶಯದಂತೆ ಜನಸಾಮಾನ್ಯರಿಗೆ ನ್ಯಾಯಯುತವಾದ ಜೀವನವನ್ನು ಒದಗಿಸುವುದು ಸರ್ಕಾರದ ಮುಖ್ಯ ಗುರಿಯಾಗಿದೆ ಎಂದು ಗೌರವಾನ್ವಿತ ನ್ಯಾಯಮೂರ್ತಿ ಉಪಲೋಕಾಯುಕ್ತರಾದ ಕೆ.ಎನ್.ಫಣೀಂದ್ರ ಹೇಳಿದರು.

ಇಂದು ನಗರದ ಕುವೆಂಪು ಕಲಾಮಂದಿರದಲ್ಲಿ ಸಾರ್ವಜನಿಕ ಕುಂದುಕೊರತೆಗಳ ಅಹವಾಲು ಸ್ವೀಕಾರ ಹಾಗೂ ವಿಚಾರಣೆ ಸಭೆಯ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ಸರ್ಕಾರ ಮೂಲಭೂತ ಸವಲತ್ತುಗಳ ಜೊತೆಗೆ ಹಕ್ಕು ಬಾಧ್ಯತೆಯನ್ನು ನೀಡಿ ಅವರ ಹಕ್ಕುಗಳ ಬಗ್ಗೆ ಅರಿವು ಮೂಡಿಸಿ ಆ ಹಕ್ಕುಗಳಿಂದ ಸಿಗುವ ಮೂಲಭೂತ ಸವಲತ್ತುಗಳನ್ನು ಪಡೆದುಕೊಳ್ಳಲು ಸರ್ಕಾರ ಶ್ರಮವಹಿಸಿ ಕಾನೂನುಗಳನ್ನು ರಚನೆ ಮಾಡಿದೆ ಎಂದು ಹೇಳಿದ ಅವರು ಸರ್ವರಿಗೂ ಸಮಪಾಲು,



ಸಮಬಾಳು ಎಂಬ ಸಂವಿಧಾನದ ಆಶೋತ್ತರದ ಅಡಿಯಲ್ಲಿ ಲೋಕಾಯುಕ್ತ ಸಂಸ್ಥೆ ಕಾರ್ಯನಿರ್ವಹಿಸುತ್ತಿದೆ. ಸರ್ಕಾರವು ರೂಪಿಸಿದ ಯೋಜನೆಗಳು ಹಾಗೂ ಇತರೆ ಸೌಲಭ್ಯಗಳನ್ನು ಎಲ್ಲರಿಗೂ ದೊರಕಿಸುವ ಕಾರ್ಯವನ್ನು ಲೋಕಾಯುಕ್ತ ಸಂಸ್ಥೆ ಮಾಡುತ್ತಿದೆ ಸಮಾಜದಲ್ಲಿರುವ ಪ್ರತಿಯೊಬ್ಬರು ಗೌರವಯುತವಾಗಿ ಎಲ್ಲಾ ಸವಲತ್ತುಗಳನ್ನು ಹೊಂದಿ ಸಂತೋಷವಾಗಿ ಬಾಳುವುದೇ ಭಾರತ ಸಂವಿಧಾನದ ಅಶೋತ್ತರ ಜೀವನ ಎಂದು ಹೇಳಿದರು. ಭಾರತ ಸಂವಿಧಾನದ ಮಹತ್ವ ಶಾಸಕಾಂಗ, ಕಾರ್ಯಾಂಗ ಹಾಗೂ ನ್ಯಾಯಾಂಗದ ಕಾರ್ಯ ಪ್ರಕ್ರಿಯೆಗಳನ್ನು ಮನಮುಟ್ಟುವಂತೆ ಸವಿಸ್ತಾರವಾಗಿ ತಿಳಿಸಿಕೊಟ್ಟರು.

## ಸ್ವಚ್ಛತಾ ಹೀ ಸೇವಾ ಅಭಿಯಾನ

**ದಾವಣಗೆರೆ:** ಜಿಲ್ಲಾಡಳಿತ ಹಾಗೂ ಜಿಲ್ಲಾ ಮಟ್ಟದ ಇಲಾಖೆಗಳು ಹಾಗೂ ದಾವಣಗೆರೆ ಮಹಾನಗರಪಾಲಿಕೆಯ ಸಂಯುಕ್ತಾಶ್ರಯದಲ್ಲಿ ಸೆಪ್ಟೆಂಬರ್ 25 ರಂದು ಬೆಳಿಗ್ಗೆ 6.30 ರಿಂದ 9 ಗಂಟೆಯವರೆಗೆ ಕುಂದುವಾಡ ಕೆರೆ ಆವರಣದಲ್ಲಿ ಸ್ವಚ್ಛ ಭಾರತ ಮಿಷನ್ ಯೋಜನೆಯ 11ನೇ ವಾರ್ಷಿಕೋತ್ಸವದ ಹಿನ್ನೆಲೆಯಲ್ಲಿ ಸೆಪ್ಟೆಂಬರ್ ದ್ವಿತೀಯ ಪಾಕ್ಷಿಕದಲ್ಲಿ ಸ್ವಚ್ಛೋತ್ಸವ ಘೋಷ ವಾಕ್ಯದೊಂದಿಗೆ ಸ್ವಚ್ಛತಾ ಹೀ ಸೇವಾ" ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ.

ಈ ದಿನದಂದು ಬೆಳಿಗ್ಗೆ 6.30 ಗಂಟೆಗೆ ಕುಂದುವಾಡ ಕೆರೆ ಪ್ರವೇಶ ದ್ವಾರದ ಬಳಿ ಸ್ವಚ್ಛತಾ ಪ್ರತಿಜ್ಞಾವಿಧಿ ಸ್ವೀಕರಿಸುವ ಮೂಲಕ ಸ್ವಚ್ಛತಾ ಕಾರ್ಯಗಳನ್ನು ಆರಂಭಿಸಲಾಗುವುದು. ಪ್ರಯುಕ್ತ, ನಗರದ ಎಲ್ಲಾ ಸಂಘ ಸಂಸ್ಥೆಗಳು, ಸಾರ್ವಜನಿಕರು ಸ್ವಯಂ ಪ್ರೇರಿತರಾಗಿ ಕುಂದವಾಡ ಕೆರೆ ಆವರಣದಲ್ಲಿ ಆಯೋಜಿಸಲಾಗಿರುವ ಸ್ವಚ್ಛತಾ ಹೀ ಸೇವಾ ಕಾರ್ಯಕ್ರಮದಲ್ಲಿ ಭಾಗವಹಿಸಿ ನಮ್ಮ ನಗರವನ್ನು ಸ್ವಚ್ಛ ಹಾಗೂ ಸುಂದರ ನಗರವನ್ನಾಗಿ ರೂಪಿಸಲು ಮಹಾನಗರಪಾಲಿಕೆ ಯೊಂದಿಗೆ ಕೈ ಜೋಡಿಸುವಂತೆ ಪಾಲಿಕೆ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

# ಚನ್ನಗಿರಿಯಲ್ಲಿ ಗಣಪತಿ ವಿಸರ್ಜನೆ: ಅದ್ದೂರಿ ಶೋಭಾಯಾತ್ರೆಗೆ ಚಾಲನೆ

**ಚನ್ನಗಿರಿ :** ರಾಜ್ಯದಲ್ಲಿಯೇ ಸಾಕಷ್ಟು ಹೆಸರು ಮಾಡಿದ್ದ ಚನ್ನಗಿರಿಯ ವಿಶ್ವ ಹಿಂದೂಪರಿಷತ್ ಭಜರಂಗದಳದ ಗಣಪನ ಶೋಭಾಯಾತ್ರೆಗೆ ಅದ್ದೂರಿಯ ಚಾಲನೆ ದೊರೆತಿದ್ದು ಶೋಭಯಾತ್ರೆಗೆ ಚನ್ನಗಿರಿ ಹಾಲಸ್ವಾಮಿ ವಿರಕ್ತ ಮಠದ ಡಾ.ಬಸವಜಯಚಂದ್ರ ಸ್ವಾಮಿಗಳು, ಚನ್ನಗಿರಿ ಹಿರೇಮಠದ ಕೇದಾರಲಿಂಗಶಿವಶಾಂತ ವೀರಸ್ವಾಮಿಗಳ ನೇತ್ರತ್ವದಲ್ಲಿ ಮಾಜಿ ಶಾಸಕ ಮಾಡಾಳ್ ವಿರೂಪಾಕ್ಷಪ್ಪ, ಮೈಸೂರಿನ ಮಾಜಿ ಸಂಸದ ಪ್ರತಾಪ್ ಸಿಂಹ, ತುಮ್‌ಕೋಸ್ ಅಧ್ಯಕ್ಷ ಎಚ್.ಎಸ್.ಶಿವಕುಮಾರ್, ಬಿಜೆಪಿ ಮುಖಂಡ ಮಾಡಾಳ್ ಮಲ್ಲಿಕಾರ್ಜುನ್ ಸೇರಿದಂತೆ ಸಂಘಟನೆಯ ಕಾರ್ಯಕರ್ತರು ಚಾಲನೆ ನೀಡಿದರು.

ಶೋಭಯಾತ್ರೆಗೆ ಜಿಲ್ಲಾ ವರಿಷ್ಠಾಧಿಕಾರಿ ಉಮಾಪ್ರಶಾಂತ್ ಮಾರ್ಗದರ್ಶನದಲ್ಲಿ ಎ.ಎಸ್.ಪಿ. ಸ್ಯಾಮ್ ವರ್ಗಿಸ್ ನೇತ್ರತ್ವದಲ್ಲಿ ಸುಮಾರು 600 ಕ್ಕೂ ಹೆಚ್ಚು ಬಿಗಿ ಪೋಲಿಸ್ ಬಂದೋಬಸ್ತ್‌ನಲ್ಲಿ ಡಿ.ಜೆ.ಬಳಕೆಯನ್ನು ಸಂಪೂರ್ಣ ನಿಷೇಧ ಮಾಡಿದ್ದು ಮಹಾರಾಷ್ಟ್ರದ ನಾಸಿಕ್ ಡೋಲ್, ಮಂಗಳೂರಿನ ಚಂಡೆವಾದ್ಯ, ದಾವಣಗೆರೆಯ ವೀರಗಾಸೆ, ಚನ್ನಗಿರಿಯ





ಡೊಳ್ಳು, ಮತ್ತು ವಿವಿಧ ಕಲಾ ತಂಡಗಳು ಮತ್ತು ಶ್ರೀ ರಾಮನ ಬೃಹತ್ ಮೂರ್ತಿಯೊಂದಿಗೆ ಲೇಸರ್ ಲೈಟ್‌ಗಳನ್ನು ಅಳವಡಿಸಿದ ಟ್ರ್ಯಾಕ್ಟರ್‌ಗಳು ಶೋಭಾಯಾತ್ರೆ ಮೆರವಣಿಗೆಯಲ್ಲಿ ಬಾಗವಹಿಸಿ ಮೆರವಣಿಗೆಗೆ ಮೆರಗು ನೀಡಿದವು.

ಶೋಭಯಾತ್ರೆಯ ಅಂಗವಾಗಿ ಇಡೀ ಚನ್ನಗಿರಿ ಪಟ್ಟಣವನ್ನು ಕೇಸರಿಮಯ ಮಾಡಲಾಗಿದ್ದು ಪಟ್ಟಣದ ಪ್ರಮುಖ ಬಸ್‌ನಿಲ್ದಾಣ ಸೇರಿದಂತೆ ಕೇಸರಿಯ ಬಾವುಟಗಳು ಮತ್ತು ಬಂಟಿಂಗ್ಸ್‌ಗಳು ರಸ್ತೆಯ ತುಂಬಾ ರಾರಾಜಿಸುತ್ತಿದ್ದವು. ಮಧ್ಯಾಹ್ನ 12 ಕ್ಕೆ ಪ್ರಾರಂಭವಾದ ಶೋಭಾಯಾತ್ರೆಯು ಪಟ್ಟಣದ ಪ್ರಮುಖ ಬೀದಿಯಲ್ಲಿ ಅದ್ದೂರಿಯಾಗಿ ಸಂಚರಿಸುತ್ತಿದ್ದು ಪಟ್ಟಣದ ಮಹಿಳೆಯರು ಸಹ ಮೆರವಣಿಗೆಯಲ್ಲಿ ಹೆಜ್ಜೆ ಹಾಕಿದರು. ವಿಸರ್ಜನಾ ಮೆರವಣಿಗೆ ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದ ಹಾಲಸ್ವಾಮಿ ವಿರಕ್ತ ಮಠದ ಡಾ.ಬಸವಜಯಚಂದ್ರ ಸ್ವಾಮಿಗಳು ಮಾತನಾಡಿ ಸನಾತನ ಹಿಂದೂ ಸಂಸ್ಕೃತಿಯಲ್ಲಿ ಗೌರಿ ಗಣೇಶನ ಹಬ್ಬವು ಒಂದು ವಿಶೇಷವಾದ ಹಬ್ಬವಾಗಿದ್ದು ಹಬ್ಬದ ಆಚರಣೆಗಳಿಂದ ನಮ್ಮಲ್ಲಿ ಸಂಘಟನಾ ಶಕ್ತಿ ಮತ್ತು ಬಂದುತ್ವ ಬೆಳೆಯುತ್ತದೆ. ಯುವಕರು ಸಾಂಪ್ರಾಯಿಕ ಹಬ್ಬಗಳಿಗೆ ಹೆಚ್ಚಿನ ಆದ್ಯತೆ ನೀಡುವಂತೆ ತಿಳಿಸಿದರು.

ಮಾಜಿ ಶಾಸಕ ಮಾಡಾಳ್ ವಿರೂಪಾಕ್ಷಪ್ಪ ಮಾತನಾಡಿ ವಿಶ್ವಹಿಂದೂಪರಿಷತ್ ಮತ್ತು ಬಜರಂಗದಳದ ವತಿಯಿಂದ ಪ್ರತಿವರ್ಷವೂ ಪ್ರತಿಷ್ಠಾಪನೆ ಮಾಡಲಾಗುವಂತಹ ಗಣಪ ಒಂದು ವಿಶೇಷವಾದ ಗಣಪನಾಗಿದೆ. ಹಿಂದೂ ಯುವಕರು ಸಂಘಟನಾತ್ಮಕವಾಗಲು ಆಗತ್ಯವಾಗಿದೆ. ಗಣಪನ ಹಬ್ಬ ಆಚರಣೆಗಳು ಭಯಭಕ್ತಿ ಗೌರವದಿಂದ ಆಚರಣೆ ಮಾಡಬೇಕಿದೆ. ವಿಸರ್ಜನಾ ಮೆರವಣಿಗೆಯಲ್ಲಿ ಯಾವುದೇ ತೊಂದರೆಗಳು ಉಂಟಾಗದಂತೆ ಕಾರ್ಯಕರ್ತರು ಹೆಚ್ಚಿನ ಜವಾಬ್ದಾರಿ ವಹಿಸಬೇಕು ಎಂದರು.

ಮೈಸೂರಿನ ಮಾಜಿ ಸಂಸದ ಪ್ರತಾಪ್ ಸಿಂಹ ಮಾತನಾಡಿ ಶಿವಮೊಗ್ಗ, ಚಿತ್ರದುರ್ಗ, ದಾವಣಗೆರೆಯ ಬಾಗಗಳಲ್ಲಿ ನಡೆಯುವಂತಹ ಗಣೇಶೋತ್ಸವ ನಮ್ಮ ಹಳೆಯ ಮೈಸೂರು ಬಾಗದವರಿಗೆ ಮಾದರಿಯಾಗಿತ್ತು. ಆದರಲ್ಲಿಯೂ ದಾವಣಗೆರೆ, ಚನ್ನಗಿರಿಯಲ್ಲಿ ಪ್ರತಿ ವರ್ಷವೂ ಸಾಕಷ್ಟು ಬಾಜಾ ಭಜಂತ್ರಿಯೊಂದಿಗೆ ನಡೆ–ಯುತ್ತಿತ್ತು. ಆದರೆ ದಾವಣಗೆರೆ ಜಿಲ್ಲೆಯಲ್ಲಿ ಅಘೋಷಿತವಾದ ನಿರ್ಭಂಧ ಹಾಕಲಾಗಿದೆ. ಉಸ್ತುವಾರಿ ಸಚಿವರಾದ ಮಲ್ಲಿಕಾರ್ಜುನ್, ಸಂಸದರಾದ ಪ್ರಭಾ ಮಲ್ಲಿಕಾರ್ಜುನ್ ಗಣೇಶನ ಹಬ್ಬದಆಚರಣೆಗೆ ಸಾಕಷ್ಟು ಕಾನೂನು ತೊಡಕುಗಳನ್ನು ಮಾಡುತ್ತಿದ್ದಾರೆ. ಇದನ್ನು ಕಾರ್ಯಕರ್ತರು ಅರಿತುಕೊಳ್ಳುವ ಮೂಲಕ ಮುಂದಿನ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸಬೇಕು. ಕನ್ನಡದ ಬಗ್ಗೆ ಭುವನೇಶ್ವರಿ ಬಗ್ಗೆ ತಾತ್ಸಾರದ ಮಾತುಗಳನ್ನು ಆಡಿದ್ದರಿಂದ ನಾವು ವಿರೋಧವ್ಯಕ್ತಪಡಿಸಿದ್ದವು. ಆಕೆ ಕನಿಷ್ಟ ಕ್ಷಮೆಯನ್ನು ಕೇಳಲಿಲ್ಲ ವಿರೋಧದ ನಂತರ ಮುಡಿಗೆ ಹೂವನ್ನು ಮುಡಿದು ಅರಿಶಿನ ಬಣ್ಣದ ಸೀರೆ ಉಟ್ಟು ವಿಗ್ರಹ ರೂಪದ ಚಾಮುಂಡೇಶ್ವರಿಗೆ ಪೂಜೆ ಸಲ್ಲಿಸಿದ್ದಾರೆ. ಹಣೆಗೆ ಕುಂಕುಮ ಇಟ್ಟಿದ್ದರೆ ಕನ್ನಡದ ಮಹಿಳೆಯಾಗಿ ಕಾಣಿಸುತ್ತಿದ್ದರು ಎಂದರು. ಮುಖ್ಯಮಂತ್ರಿಗಳ ಸ್ಥಾನಕ್ಕೆ ಘನತೆ ಇರುತ್ತದೆ. ಅದನ್ನು ಕಾಪಾಡುವಂತೆ ಇರಬೇಕು. ಅವರು ರಾಜಕಾರಣದಲ್ಲಿ ಹಿರಿಯರು ನಾನು ಕಿರಿಯ ಬೇರೆಯವರ ಬಗ್ಗೆ ಮಾತನಾಡುವಾಗ ಎಲ್ಲೆಯನ್ನು ಮೀರಿದಂತೆ ಶಬ್ದಗಳನ್ನು ಬಳಸಿ ಎಂದರು.

# ಅಕ್ಟೋಬರ್ 3 ರಂದು ಬೇವೂರು ತಿಮ್ಮಪ್ಪಸ್ವಾಮಿ ಬ್ರಹ್ಮರಥೋತ್ಸವ



**ಚನ್ನಪಟ್ಟಣ:** ತಾಲೂಕಿನ ಬೇವೂರು ಗ್ರಾಮದಲ್ಲಿ ಅಕ್ಟೋಬರ್ 3 ರಂದು ಇತಿಹಾಸ ಪ್ರಸಿದ್ಧ ತಿಮ್ಮಪ್ಪನ ಬ್ರಹ್ಮರಥೋತ್ಸವ ನಡೆಯಲಿದೆ.

ಸೆ. 22 ರಿಂದ ನವರಾತ್ರಿ ಪೂಜಾ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದ್ದು, ಅ. 1 ರಂದು ಆಯುಧಪೂಜೆ ನಡೆಯಲಿದೆ.

ಅ. 2 ರಂದು ವಿಜಯದಶಮಿ ಪ್ರಯುಕ್ತ ಮುಂಜಾನೆಯಿಂದ ಸಂಜೆವರೆಗೆ ವಿವಿಧ ಪೂಜಾ ಕೈಂಕರ್ಯಗಳು ನಡೆಯಲಿದ್ದು ಸಂಜೆ 7 ಗಂಟೆಗೆ ದೇವರ ಉತ್ಸವ ನಡೆಯಲಿದೆ, ರಾತ್ರಿ 8 ಗಂಟೆಗೆ ಅನ್ನಸಂತರ್ಪಣೆ ಹಾಗೂ ಹರಿಕಥೆ ಆಯೋಜಿಸಲಾಗಿದೆ.

ಬ್ರಹ್ಮರಥೋತ್ಸವ: ಅ.3 ಶುಕ್ರವಾರದಂದು ಬೆಳಿಗ್ಗೆ 9.30 ರಿಂದ 10.30ರ ವರೆಗೆ ರಥಶಾಂತಿ ಪೂಜೆ ನಡೆಯಲಿದ್ದು, ತಮಟೆ, ನಗಾರಿ ವಾದ್ಯ ಪೂಜಾಕುಣಿತ, ವೀರಗಾಸೆ, ಗಾರುಡಿ ಗೊಂಬೆ ಕುಣಿತ, ರಥಕ್ಕೆ ಹೂವಿನ ಅಲಂಕಾರ, ಜಂಡೆ ಕುಣಿತದ ಸೇವೆಯೊಂದಿಗೆ ಮಧ್ಯಾಹ್ನ 12.30 ರಿಂದ 1.40 ರ ಶುಭ ಧನಸ್ಸು ಲಗ್ನದಲ್ಲಿ ಸರ್ಕಾರಿ ಸೇವೆಯಲ್ಲಿ ಬ್ರಹ್ಮರಥೋತ್ಸವ ನಡೆಯಲಿದೆ.

ಮಧ್ಯಾಹ್ನ 2 ಗಂಟೆಗೆ ಗಜೋತ್ಸವ, 3 ಗಂಟೆಗೆ ಗರಡೋತ್ಸವ, ಸಂಜೆ 6.30 ಗಂಟೆಗೆ ಬೆಳ್ಳಿ ಪಲ್ಲಕ್ಕಿ ಉತ್ಸವ ನಡೆಯಲಿದ್ದು,ಬೇವೂರು ಗ್ರಾಮದ ಸಮಸ್ತ ಕುಂಬಾರ್ ಶೆಟ್ಟರುಗಳಿಂದ ಅನ್ನಸಂತರ್ಪಣೆ ಹಾಗೂ ಆರ್ಕೆಸ್ಟ್ರಾ ಕಾರ್ಯಕ್ರಮ ಆಯೋಜಿಸಲಾಗಿದೆ. ಜೊತೆಗೆ ಸಿಡಿಮದ್ದು ಸೇವೆ, ಶಯನೋತ್ಸವ, ತೋಮಾಲೆ ಸೇವೆ ನಡೆಯಲಿದೆ.

ಈ ಭಾಗದ ಜನರಿಗೆ ಈ ಬ್ರಹ್ಮರಥೋತ್ಸವವು ಏಕದಶಿಯಲ್ಲಿ ನಡೆಯುವುದರಿಂದ ಮಿನಿ ದಸರಾ ಎಂದೇ ಖ್ಯಾತಿ ಪಡೆದಿದೆ.

ಸಮಾರಂಭದಲ್ಲಿ ಬೇವೂರು ಮಠದ ಶ್ರೀ ಮೃತ್ಯುಂಜಯ ಶಿವಾಚಾರ್ಯ ಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಲಿದ್ದಾರೆ. ಕಾರ್ಯಕ್ರಮದ ಉದ್ಘಾಟನೆಯನ್ನು ಉಪವ್ುುಖ್ಯವ್ುಂತ್ರಿಗ್ಳಾದ್ ಡಿ.ಕೆ್.ಶಿವ್ಕ್ುವ್ುಾರ್ ಅವ್ರ್ು ನೆರವೇರಿಸಲಿದ್ದು, ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕರಾದ ಸಿ.ಪಿ.ಯೋಗೇಶ್ವರ್ ಅವರು ವಹಿಸಲಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವರಾದ ರಾಮಲಿಂಗಾರೆಡ್ಡಿ ಅವರು ಘನ ಉಪಸ್ಥಿತಿ ಇರಲಿದ್ದು, ಮುಖ್ಯಅತಿಥಿಗಳಾಗಿ ಸಂಸದ ಡಾ. ಸಿ.ಎನ್. ಮಂಜುನಾಥ್, ಮಾಗಡಿ ಶಾಸಕ ಹೆಚ್.ಸಿ. ಬಾಲಕೃಷ್ಣ, ವಿಧಾನ ಪರಿಷತ್ ಸದಸ್ಯರುಗಳಾದ ಪುಟ್ಟಣ್ಣ, ಎಸ್. ರವಿ, ಸುದಾಮ್‌ದಾಸ್, ರಾಮೋಜಿಗೌಡ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ರಾಜ್ಯಾಧ್ಯಕ್ಷ ಹೆಚ್.ಎಂ. ರೇವಣ್ಣ, ಬಿಎಂಐಸಿಎಪಿಎ ಅಧ್ಯಕ್ಷ ರಘುನಂದನ್ ರಾಮಣ್ಣ, ಬಮೂಲ್ ನಿರ್ದೇಶಕ ಎಸ್. ಲಿಂಗೇಶ್‌ಕುಮಾರ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ತಾಲೂಕು ಅಧ್ಯಕ್ಷ ಬೋರ್‌ವೆಲ್ ರಂಗನಾಥ್, ಕಸಾಪ ಜಿಲ್ಲಾಧ್ಯಕ್ಷ ಬಿ.ಟಿ. ನಾಗೇಶ್, ಯೋಜನಾ ಪ್ರಾಧಿಕಾರದ ಅಧ್ಯಕ್ಷ ಎಸ್.ಆರ್. ಪ್ರಮೋದ್, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಗೋವಿಂದಹಳ್ಳಿ ನಾಗರಾಜು, ಚನ್ನಪಟ್ಟಣ ಡಿವೈಎಸ್ಪಿ ಗಿರಿ, ಗ್ರಾಮಾಂತರ ವೃತ್ತ ನಿರೀಕ್ಷಕ ಪ್ರಕಾಶ್, ಎಂಕೆ.ದೊಡ್ಡಿ ಪೊಲೀಸ್ ಪಿಎಸ್‌ಐ ಸಹನಾ ಪಾಟೀಲ್, ಸಮಾಜ ಸೇವಕರಗಳಾದ ಎಚ್ ಎಂ ನಾಗೇಶ್, ಹಾಪ್ ಕಾಮ್ಸ್ ದೇವರಾಜ್, ಕರುಣ್ ಎಂ ಎ ಆನಂದ್, ಜಗದೀಶ್, ಪ್ರಸನ್ನ ಪಿ ಗೌಡ, ಪವಿತ್ರ ಪ್ರಭಾಕರ್ ರೆಡ್ಡಿ, ಶಾರದ ಚಂದ್ರಶೇಖರ್ ಸೇರಿದಂತೆ ಹಲವರು ಭಾಗವಹಿಸಲಿದ್ದಾರೆ.ಸರ್ಕಾರಿ ಸೇವೆಯಲ್ಲಿ ಜಿಲ್ಲಾಧಿಕಾರಿಗಳಾದ ಯಶವಂತ್ ವಿ. ಗುರುಕರ್, ಜಿಲ್ಲಾ ಉಪವಿಭಾಗಾಧಿಕಾರಿ ಬಿನೋಯ್, ಅಪರ ಜಿಲ್ಲಾಧಿಕಾರಿ ಚಂದ್ರಯ್ಯ, ತಹಸೀಲ್ದಾರ್ ಬಿ.ಎನ್. ಗಿರೀಶ್, ರೆವಿನ್ಯೂ ಇನ್ಸ್ಪೆಕ್ಟರ್ ಸೋಮಶೇಖರ್, ಗ್ರಾಮ ಲೆಕ್ಕಾಧಿಕಾರಿ ಧರ್ಮಣ್ಣ, ಆಗಮಿಕರಾದ ಟಿ.ಜೆ. ದಯಾನಿಧಿ, ಪವನ್‌ಕುಮಾರ್, ಹಾಗೂ ಅರ್ಚಕರಾದ ಸಂತೋಷ್, ಪ್ರಧಾನ ಅರ್ಚಕರಾದ ಬಿ.ಟಿ. ವೆಂಕಟೇಶ್ ಉಪಸ್ಥಿತರಿರಲಿದ್ದಾರೆ. ಎಂದು ಮೇಲ್ವಿಚಾರಕರಾದ ಬಿಸಿ ಪುಟ್ಟಸ್ವಾಮಿಅವರು ತಿಳಿಸಿದ್ದಾರೆ.

ಪ್ರಸಿದ್ಧ ಬೇವೂರು ತಿಮ್ಮಪ್ಪ ದೇವಸ್ಥಾನಕ್ಕೆ ಬಹಳ ವರ್ಷಗಳ ಐತಿಹಾಸಿಕ ಮಹತ್ವವಿದ್ದು ರಾಜ್ಯದ ನಾನಾ ಮೂಲೆಗಳಿಂದ ಭಕ್ತಾಧಿಗಳು ಪ್ರತಿವರ್ಷದಂತೆ ನೆರೆಯುತ್ತಾರೆ ಎಂಬ ಆಶಯವಿದೆ. ದೇವರ ದರ್ಶನಕ್ಕೆ ಬರುವ ಭಕ್ತಾಧಿಗಳಿಗೆ ಊಟದ ವ್ಯವಸ್ಥೆಯನ್ನು ಏರ್ಪಡಿಸಲಾಗಿದೆ.

ಗ್ರಾಮದಲ್ಲಿ ವಾರ್ಷಿಕ ಜಾತ್ರೆ ಮತ್ತು ಹಬ್ಬವನ್ನು ವಿಜಯದಶಮಿ ದಿನದಂದು ಪ್ರತಿ ವರ್ಷವೂ ದಸರಾ ಹಬ್ಬದ ವಾತಾವರಣದಂತೆ ಆಚರಿಸಲಾಗುತ್ತದೆ ತಿಮ್ಮಪ್ಪನ ಜಾತ್ರೆಯಲ್ಲಿ ಸುತ್ತ ಮುತ್ತಲಿನ ಗ್ರಾಮಗಳಿಂದ ಸುಮಾರು 1 ಲಕ್ಷಕ್ಕೂ ಹೆಚ್ಚು ಭಕ್ತರು ಸೇರುವ ಭರವಸೆ ಇದೆ ಎನ್ನಲಾಗಿದೆ.ಇತಿಹಾಸ: ಚನ್ನಪಟ್ಟಣದಿಂದ 11 ಕಿ.ಮೀ ಅಂತರದಲ್ಲಿರುವ ಬೇವೂರು ತಿಮ್ಮಪ್ಪನ ಬೆಟ್ಟ ಧಾರ್ಮಿಕ ನೆಲೆಗಳಲ್ಲಿ ಒಂದಾಗಿದೆ. ಈ ಗ್ರಾಮ ಒಂದಾನೊಂದು ಕಾಲದಲ್ಲಿ ಜೈನರ ಪ್ರಮುಖ ಕೇಂದ್ರವಾಗಿತ್ತು. ಬೇವೂರು ಗ್ರಾಮ ಅವುಗಳೇ ಸಿದ್ದರಾಮೇಶ್ವರ ಬೆಟ್ಟ ಮತ್ತು ತಿಮ್ಮಪ್ಪ ಬೆಟ್ಟಗಳ ನಡುವಿನ ಪಾದದಡಿಯಲ್ಲಿ ನೆಲೆ ನಿಂತಿದೆ.

ಸುತ್ತಲಿನ ಸುಂದರ ಹಸಿರು ವಾತಾವರಣದ ಈ ಬೆಟ್ಟಕ್ಕೆ ರಮಣೀಯತೆ ತಂದುಕೊಡುತ್ತದೆ. ಹತ್ತಿರದಲ್ಲಿರುವ ಕಣ್ವ ನದಿಪಾತ್ರ ಈ ಸುಂದರ ವಾತಾವರಣಕ್ಕೆ ಕಾರಣ ಇಲ್ಲಿನ ಶುದ್ಧ ಗಾಳಿ ಬರುವ ಯಾತ್ರಿಕರಿಗಂತೂ ಹೊಸ ಅನುಭವವನ್ನೇ ತಂದು ಕೊಡುತ್ತದೆ

## ರಾಶಿ ಭವಿಷ್ಯ

### ಮೇಷ ರಾಶಿ

ನಿಮ್ಮ ಒರಟು ವರ್ತನೆ ನಿಮ್ಮ ಪತ್ನಿಯೊಂದಿಗಿನ ಸಂಬಂಧವನ್ನು ಹಾಳು ಮಾಡಬಹುದು. ಏನಾದರೂ ಬಾಲಿಶವಾದದ್ದನ್ನು ಮಾಡುವ ಮೊದಲು ನಿಮ್ಮ ವರ್ತನೆಯ ಪರಿಣಾಮದ ಬಗ್ಗೆ ಆಲೋಚಿಸಿ. ಸಾಧ್ಯವಾದಲ್ಲಿ ದೂರ ಹೋಗಿ ನಿಮ್ಮ ಮನಸ್ಥಿತಿಯನ್ನು ಬದಲಾಯಿಸಿ. ಇಂದು ಯಾವುದೇ ವಿರುದ್ಧ ಲಿಂಗದ ಸಹಾಯದಿಂದ ನೀವು ವ್ಯಾಪರ ಅಥವಾ ಉದ್ಯೋಗದಲ್ಲಿ ಆರ್ಥಿಕ ಲಾಭವನ್ನು ಪಡೆಯುವ ಸಾಧ್ಯತೆ ಇದೆ.

### ವೃಷಭ ರಾಶಿ

ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ನಿಮ್ಮ ಖರ್ಚುಗಳಲ್ಲಿ ಅನಿರೀಕ್ಷಿತ ಏರಿಕೆ ನಿಮ್ಮ ಮನಸ್ಸಿನ ಶಾಂತಿಗೆ ಭಂಗ ತರುತ್ತದೆ. ಯುವಕರನ್ನು ಹೊಂದಿರುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಒಳ್ಳೆಯ ಸಮಯ. ಪ್ರೇಮ ಜೀವನ ಭರವಸೆ ತರುತ್ತದೆ ಇಂದು, ನೀವು ಮತ್ತು ನಿಮ್ಮ ಪ್ರೀತಿ ಸಂಗಾತಿ ಪ್ರೀತಿಯ ಸಾಗರದಲ್ಲಿ ತೇಲುತ್ತೀರಿ ಮತ್ತು ಪ್ರೀತಿಯ ಔನ್ನತ್ಯವನ್ನು ಅನುಭವಿಸುತ್ತೀರಿ.

### ಮಿಥುನ ರಾಶಿ

ನೀವು ಇಂದು ಆರಾಮವಾಗಿ ವಿಶ್ರಾಂತಿ ಪಡೆಯಬೇಕು ನೀವು ಆನಂದಿಸುವ ಮತ್ತು ಆಸಕ್ತಿಗಳು ಮತ್ತು ವಿಷಯಗಳಲ್ಲಿ ತೊಡಗಿಕೊಳ್ಳಿ. ಹಣಕಾಸು ಸ್ಥಿತಿ ಊಹಾಪೋಹ ಅಥವಾ ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ. ಹಳೆಯ ಸಂಪರ್ಕಗಳು ಮತ್ತು ಸಂಬಂಧಗಳ ಪುನಶ್ಚೇತನಕ್ಕೆ ಒಳ್ಳೆಯ ದಿನ. ಇಂದು ನೀವು ನಿಮ್ಮ ಜೀವನದಲ್ಲಿ ನಿಜವಾದ ಪ್ರೀತಿಯ ಅನುಪಸ್ಥಿತಿಯನ್ನು ಅನುಭವಿಸುತ್ತೀರಿ.

### ಕರ್ಕ ರಾಶಿ

ಸಂತಸದ ಪ್ರಯಾಣ ಮತ್ತು ಸಾಮಾಜಿಕ ಕಾರ್ಯಕ್ರಮಗಳು ನಿಮಗೆ ಆರಾಮ ಮತ್ತು ಸಂತೋಷ ತರುತ್ತದೆ. ಇಂದಿನ ದಿನ, ನಿಮ್ಮ ಬಳಿ ಸಾಲವನ್ನು ಕೇಳುವ ಮತ್ತು ಅದನ್ನು ಹಿಂತಿರುಗಿಸದೆ ಇರುವಂತಹ ಸ್ನೇಹಿತರಿಂದ ನೀವು ನಿಮ್ಮನ್ನು ತಪ್ಪಿಸುವ ಅಗತ್ಯವಿದೆ. ನಿಮ್ಮ ನಡೆಯಲ್ಲಿ ಉದಾರ ಮನೋಭಾವ ಹೊಂದಿರಿ ಮತ್ತು ನಿಮ್ಮ ಕುಟುಂಬದ ಸದಸ್ಯರ ಜೊತೆಗೆ ಉತ್ತಮವಾದ ಪ್ರೀತಿಯ ಕ್ಷಣಗಳನ್ನು ಕಳೆಯಿರಿ.

### ಸಿಂಹ ರಾಶಿ

ಗಾಯಗೊಳ್ಳುವುದನ್ನು ತಪ್ಪಿಸಲು ಕುಳಿತುಕೊಳ್ಳುವಾಗ ವಿಶೇಷ ಕಾಳಜಿ ವಹಿಸಿ. ಅಲ್ಲದೇ ಒಳ್ಳೆಯ ನಿಲುವು ಕೇವಲ ನಿಮ್ಮ ವ್ಯಕ್ತಿತ್ವವನ್ನು ವೃದ್ಧಿಸುವುದಷ್ಟೇ ಅಲ್ಲದೇ ಆರೋಗ್ಯ ಮತ್ತು ವಿಶ್ವಾಸಾರ್ಹತೆಯನ್ನು ಅಭಿವೃದ್ಧಿಪಡಿಸುವಲ್ಲೂ ಪ್ರಮುಖ ಪಾತ್ರ ವಹಿಸುತ್ತದೆ. ದೀರ್ಘಕಾಲದ ದೃಷ್ಟಿಕೋನದಿಂದ ಹೂಡಿಕೆ ಮಾಡಬೇಕು. ಜೀವನ ಮತ್ತು ಕೆಲಸದೆಡೆಗೆ ಪ್ರತಿಭಾಶಾಲಿಗಳೂ ಮತ್ತು ಪರಿಪೂರ್ಣರೂ ಆಗಿರಿ.

### ಕನ್ಯಾ ರಾಶಿ

ವಿಧಿಯನ್ನು ಆಧರಿಸದಿರಿ ಮತ್ತು ನಿಮ್ಮ ಆರೋಗ್ಯ ಸುಧಾರಿಸಲು ಪ್ರಯತ್ನಿಸಿ ಏಕೆಂದರೆ ಅದೃಷ್ಟವು ಒಂದು ಸೋಮಾರಿ ದೇವತೆಯಾಗಿದ್ದು ಇದು ಎಂದಿಗೂ ತಾನಾಗಿಯೇ ನಿಮ್ಮ ಬಳಿ ಬರುವುದಿಲ್ಲ. ನಿಮ್ಮ ತೂಕವನ್ನು ನಿಯಂತ್ರಿಸಲು ಮತ್ತು ನಿಮ್ಮ ಆರೋಗ್ಯವನ್ನು ಪುನಃ ಪಡೆಯಲು ವ್ಯಾಯಾಮ ಮಾಡಲು ಇದು ಒಳ್ಳೆಯ ಸಮಯ. ಕುಟುಂಬದ ಯಾವುದೇ ಸದಸ್ಯರ ಕಾಯಿಲೆ ಬೀಳುವ ಕಾರಣದಿಂದಾಗಿ ನೀವು ಆರ್ಥಿಕ ತೊಂದರೆಗೊಳಗಾಗಬಹುದು.

### ತುಲಾ ರಾಶಿ

ಅಭದ್ರತೆ / ದಿಗ್ಭ್ರಮೆಯ ಭಾವನೆ ತಲೆತಿರುಗುವಿಕೆಯನ್ನು ಉಂಟುಮಾಡಬಹುದು. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು, ಅದು ನಿಮಗೆ ಲಾಭದಾಯಕವಾಗಲಿದೆ. ಒಂದು ಹಳೆಯ ಸಂಪರ್ಕ ನಿಮಗೆ ಕೆಲವು ಸಮಸ್ಯೆಗಳನ್ನು ಸೃಷ್ಟಿಸಬಹುದು ನಿಮ್ಮ ಸಂಗಾತಿ ನಿಮ್ಮ ಸ್ಥಾನವನ್ನು ತಿಳಿದುಕೊಳ್ಳುವಂತೆ ಮಾಡಲು ನೀವು ತೊಂದರೆ ಹೊಂದಿರುತ್ತೀರಿ.

### ವೃಶ್ಚಿಕ ರಾಶಿ

ನಿಮ್ಮ ದೇಹದ ಪುನಃಶ್ಚೇತನಕ್ಕಾಗಿ ಸಂಪೂರ್ಣ ವಿಶ್ರಾಂತಿ ತೆಗೆದುಕೊಳ್ಳದಿದ್ದರೆ ನೀವು ಆಯಾಸ ಹಾಗೂ ನಿರಾಸೆಯಲ್ಲಿ ಸಿಲುಕುತ್ತೀರಿ. ಆವತ್ತಿಗಾಗಿ ಮಾತ್ರ ಬದುಕುವ ಮತ್ತು ಮನೋರಂಜನೆಗಾಗಿ ಹೆಚ್ಚು ಸಮಯ ಮತ್ತು ಹಣ ಖರ್ಚು ಮಾಡುವ ನಿಮ್ಮ ಪ್ರವೃತ್ತಿಯನ್ನು ನಿಯಂತ್ರಿಸಿ. ಜನರು ಮತ್ತು ಅವರ ಉದ್ದೇಶಗಳ ಬಗ್ಗೆ ಅವಸರದ ತೀರ್ಮಾನ ಕೈಗೊಳ್ಳಬೇಡಿ -ಅವರು ಒತ್ತಡದಲ್ಲಿರಬಹುದು ಮತ್ತು ಅವರಿಗೆ ನಿಮ್ಮ ಸಹಾನುಭೂತಿ ಮತ್ತು ತಿಳುವಳಿಕೆಯ ಅಗತ್ಯವಿರುತ್ತದೆ.

### ಧನು ರಾಶಿ

ಮನೋಬಲದ ನಿಮ್ಮ ಕೊರತೆ ನಿಮ್ಮನ್ನು ಭಾವನಾತ್ಮಕ ಮತ್ತು ಮಾನಸಿಕ ವರ್ತನೆಯ ಬಲಿಪಶುವಾಗಿ ಮಾಡಬಹುದು. ನೀವು ವಿಪರೀತವಾಗಿ ಖರ್ಚು ಮಾಡುವುದನ್ನು ನಿಲ್ಲಿಸಿದಾಗ ಮಾತ್ರ ನಿಮ್ಮ ಹಣವು ನಿಮ್ಮ ಕೆಲಸಕ್ಕೆ ಬರುತ್ತದೆ, ಇಂದು ನೀವು ಈ ವಿಷಯವನ್ನು ಚೆನ್ನಾಗಿ ಅರ್ಥಮಾಡಿಕೊಳ್ಳಬಹುದು. ಪತ್ನಿಯ ವ್ಯವಹಾರಗಳಲ್ಲಿ ನಿಮ್ಮ ಹಸ್ತಕ್ಷೇಪ ಅವಳಿಗೆ ಕಿರಿಕಿರಿ ಮಾಡಬಹುದು.

### ಮಕರ ರಾಶಿ

ಇಂದು ನಿಮ್ಮ ವ್ಯಕ್ತಿತ್ವ ಒಂದು ಸುಗಂಧದಂತೆ ಕೆಲಸ ಮಾಡುತ್ತದೆ. ಇಂದು ಸಾಲಗಾರನು ನಿಮಗೆ ಹೇಳದೆ ನಿಮ್ಮ ಖಾತೆಗೆ ಹಣವನ್ನು ಸೇರಿಸಬಹುದು. ಇದರ ಬಗ್ಗೆ ತಿಳಿದು ನೀವು ಆಶ್ಚರ್ಯಚಕಿತರಾಗಬಹು ಮತ್ತು ಸಂತೋಷವು ಪಡೆಯಬಹುದು. ಕುಟುಂಬದ ಸದಸ್ಯರು ಅಥವಾ ಸಂಗಾತಿ ಕೆಲವು ಆತಂಕಗಳನ್ನು ಉಂಟುಮಾಡುತ್ತಾರೆ.

### ಕುಂಭ ರಾಶಿ

ಕೆಲವು ಅನಿವಾರ್ಯ ಸಂದರ್ಭಗಳು ನಿಮಗೆ ಅಹಿತಕರವೆನಿಸಬಹುದು. ಆದರೆ ನೀವು ನಿಮ್ಮ ಸಮತೋಲನ ಕಾಯ್ದುಕೊಳ್ಳಬೇಕು ಮತ್ತು ಪರಿಸ್ಥಿತಿಯನ್ನು ನಿಭಾಯಿಸಲು ತಕ್ಷಣವೇ ಪ್ರತಿಕ್ರಿಯಿಸಬಾರದು. ಇಂದು ಹೂಡಿಕೆಗಳನ್ನು ಮಾಡಬಾರದು. ಮನೆಯಲ್ಲಿನ ಕೆಲವು ಬದಲಾವಣೆಗಳು ನಿಮ್ಮನ್ನು ಭಾವುಕರನ್ನಾಗಿಸಬಹುದು- ಆದರೆ ನಿಮಗೆ ಮುಖ್ಯವಾದವರಿಗೆ ನೀವು ನಿಮ್ಮ ಭಾವನೆಗಳನ್ನು ಪರಿಣಾಮಕಾರಿಯಾಗಿ ಹೇಳಲು ಸಾಧ್ಯವಾಗುತ್ತದೆ.

### ಮೀನ ರಾಶಿ

ಲಕ್ಕವಿಲ್ಲದಷ್ಟು ಗಾಬರಿಗಳು ನಿಮ್ಮ ಪ್ರತಿರೋಧಕತೆ ಮತ್ತು ಆಲೋಚನಾ ಶಕ್ತಿಯನ್ನು ದುರ್ಬಲಗೊಳಿಸಬಹುದು. ಸಕಾರಾತ್ಮಕ ಚಿಂತನೆಯ ಜೊತೆ ಈ ರೋಗದ ವಿರುದ್ಧ ಹೋರಾಡಲು ಪ್ರಯತ್ನಿಸಿ. ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯ ನ್ಯಾಯಾಲಯ ಪ್ರಕರಣದಲ್ಲಿ ಸಿಲುಕಿಕೊಂಡಿದ್ದರೆ, ಇಂದು ನೀವು ಅದರಲ್ಲಿ ವಿಜಯವನ್ನು ಪಡೆಯಬಹುದು ಮತ್ತು ನೀವು ಹಣದ ಲಾಭವನ್ನು ಪಡೆಯಬಹುದು.

# ಜಿಲ್ಲಾ ಮಟ್ಟಕ್ಕೆ ಆಯ್ಕೆ



**ಗದಗ:** ಇತ್ತಿಚೆಗೆ ತಾಲೂಕಿನ ಹೊಸಳ್ಳಿ ಗ್ರಾಮದಲ್ಲಿ ನಡೆದ ಪದವಿ ಪೂರ್ವ ಕಾಲೇಜುಗಳ ತಾಲೂಕು ಮಟ್ಟದ ಕ್ರೀಡಾಕೂಟದಲ್ಲಿ ನಗರದ ಮೈಲಾರಪ್ಪ ಮೆಣಸಗಿ ವಿಜ್ಞಾನ ಕಾಲೇಜಿನ ವಿದ್ಯಾರ್ಥಿಗಳು ಉತ್ತಮ ಸಾಧನೆ ತೋರಿದ್ದಾರೆ.

ಆದಿಯೋಗಿ ಎಜುಕೇಷನಲ್ ಟ್ರಸ್ಟ್ ನ ಸಹ ಸಂಸ್ಥೆಯಾದ ಇನ್ಸೈಟ್ ಅಕಾಡೆಮಿಯ ತರಬೇತಿಯಲ್ಲಿ ಮೈಲಾರಪ್ಪ ಮೆಣಸಗಿ ಪಿಯು ಕಾಲೇಜಿನ ವಿದ್ಯಾರ್ಥಿಗಳು ಗದಗ ಬಿ ವಲಯದ ತಾಲೂಕು ಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಿ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಬಾಲಕರ ಮತ್ತು ಬಾಲಕೀಯರ ಶೆಟಲ್ ಬ್ಯಾಟ್ ಮಿಟನ್ ಮತ್ತು ಬಾಲಕೀಯರ ಥ್ರೋ ಬಾಲ್ ಹಾಗೂ ಚೆಸ್ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆ ಯಾಗಿದ್ದಾರೆ. ಮೈಲಾರಪ್ಪ ಮೆಣಸಗಿ ಮೆಮೋರಿಯಲ್ ಟ್ರಸ್ಟ್ ಕಾರ್ಯಾಧ್ಯಕ್ಷ ಡಾ. ಜಯದೇವ ಮೆಣಸಗಿ ಹಾಗೂ ಆಡಳಿತ ಮಂಡಳಿಯವರು ವಿದ್ಯಾರ್ಥಿಗಳಿಗೆ ಮತ್ತು ಉತ್ತಮ ತರಬೇತಿ ನೀಡಿದ ಇನ್ಸೈಟ್ ಅಕಾಡೆಮಿ ಸದಸ್ಯರಿಗೆ, ಕಾಲೇಜು ಸಿಬ್ಬಂದಿಗಳಿಗೆ ಅಭಿನಂದನೆ ಸಲ್ಲಿಸಿದ್ದಾರೆ.

ಆದಿಯೋಗಿ ಎಜುಕೇಷನಲ್ ಟ್ರಸ್ಟ್ ನ ಅಧ್ಯಕ್ಷ ಶ್ರೀಕಾಂತಗೌಡ ಪಾಟೀಲ್, ಪವನ್ ಕುಮಾರ್ ಶೇಠ್, ಕುಮಾರ್ ರಾಥೋಡ್, ಎನ್.ಎಂ. ಮುಲ್ಲಾ, ಶರಣು ಮರಗುದ್ದಿ, ವಸೀಂ ರಾಜ್ ದೊಡ್ಡಮನಿ ಪ್ರಾಚಾರ್ಯ ಶರತ್ ಕುಮಾರ್ ವಿಜೇತ ವಿದ್ಯಾರ್ಥಿಗಳಿಗೆ ಅಭಿನಂದಿಸಿ ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಸಾಧನೆ ತೋರುವಂತೆ ಶುಭಕೋರಿದರು.

# ಅರೆ ಕಾಲಿಕ ಸ್ವಯಂ ಸೇವಕರುಗಳ ಆಯ್ಕೆಗೆ ಅರ್ಜಿ ಆಹ್ವಾನ

**ಗದಗ :** ರಾಜ್ಯಾದ್ಯಂತ ಎಲ್ಲ ಜಿಲ್ಲೆ ಹಾಗೂ ತಾಲೂಕುಗಳಲ್ಲಿನ ಕಾನೂನು ಸೇವಾ ಪ್ರಾಧಿಕಾರದಲ್ಲಿ ಕಾರ್ಯನಿರ್ವಹಿಸಲು ಅರೆ ಕಾಲಿಕ ಸ್ವಯಂ ಸೇವಕರುಗಳನ್ನು ಭರ್ತಿ ಮಾಡಲು ಅರ್ಜಿ ಆಹ್ವಾನಿಸಲಾಗಿದ್ದು ಅರ್ಜಿ ಸಲ್ಲಿಕೆಗೆ ಅಕ್ಟೋಬರ್ 20 ಕೊನೆಯ ದಿನವಾಗಿದೆ ಎಂದು ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ನ್ಯಾಯಮೂರ್ತಿ ಎಚ್.ಶಶಿಧರ್ ಶೆಟ್ಟಿ ಹೇಳಿದರು.

ಅವರು ಮಂಗಳವಾರ ಬೆಂಗಳೂರಿನಿಂದ ಎಲ್ಲ ಜಿಲ್ಲಾ ಕೇಂದ್ರಗಳ ಕಾನೂನು ಸೇವಾ ಪ್ರಾಧಿಕಾರದ ಮೂಲಕ ಪತ್ರಕರ್ತರೊಂದಿಗೆ ವಿಡಿಯೋ ಕಾನ್ಫರನ್ಸ್‌ಲ್ಲಿ ಜರುಗಿದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು

.ಸ್ವಪ್ರೇರಿತ ಕಾನೂನು ಸಹಾಯಕರು ಯಾವುದೇ ಶುಲ್ಕ, ಸಂಭಾವನೆ ಅಥವಾ ಸಂಬಳವನ್ನು ನಿರೀಕ್ಷಿಸದೆ ತಮ್ಮ ಸುತ್ತಮುತ್ತಲಿನ ಪ್ರದೇಶದಲ್ಲಿರುವ ಶೋಷಿತ ಹಾಗೂ ತುಳಿತಕ್ಕೊಳಗಾದ ಜನರ ಸೇವೆಗಳನ್ನು ಮಾಡಲು ಅರ್ಪಣಾ ಮನೋಭಾವದಿಂದ ಕಾರ್ಯನಿರ್ವಹಿಸಲು ಇಚ್ಛಿಸುವ ಕಾನೂನು ವಿದ್ಯಾರ್ಥಿಗಳು, ವೈದ್ಯಕೀಯ ಕ್ಷೇತ್ರದಲ್ಲಿ ಕೆಲಸ ಮಾಡುತ್ತಿರುವ ವ್ಯಕ್ತಿಗಳು, ಉನ್ನತ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳು, ಎಮ್.ಎಸ್. ಡಬ್ಲೂ ವಿದ್ಯಾರ್ಥಿಗಳು ಮತ್ತು ಶಿಕ್ಷಕರು, ಕಾನೂನು ವಿದ್ಯಾಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ನಿವೃತ್ತ ಸರ್ಕಾರಿ ನೌಕರರು, ಮಾಜಿ ಸೈನಿಕರು ಹಾಗೂ ಅವರ ಕುಟುಂಬದ ಸದಸ್ಯರು, ವಿವಿಧ ಸಂಘಟನೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಾಮಾಜಿಕ ಸೇವಾ ಮನೋಭಾವ ಹೊಂದಿರುವ ಪುರುಷ ಮತ್ತು ಮಹಿಳೆಯರು, ಮಂಗಳಮುಖಿಯರು, ಸನ್ನಡತೆ ಹೊಂದಿದ ಕಾರಾಗೃಹ ಬಂದಿಗಳು ಮತ್ತು ಸ್ವ-ಸಹಾಯ ಸಂಘಗಳ ಸದಸ್ಯರು, ಸಾಮಾಜಿಕ ಕಾರ್ಯಕರ್ತರು, ಪತ್ರಕರ್ತರು ಸೇವೆ ಸಲ್ಲಿಸಲು ಆಸಕ್ತಿ ಇರುವವರು ಅರ್ಜಿ ಸಲ್ಲಿಸಬಹುದು.

ಸಂದರ್ಶನದ ದಿನಾಂಕ ಹಾಗೂ ಸಮಯವನ್ನು ನಂತರ ತಿಳಿಸಲಾಗುವುದು ಎಂದರು.

ಆಯ್ಕೆಯಾದ ಅಭ್ಯರ್ಥಿಗಳಿಗೆ ಕಾನೂನು ಸೇವಾ ಪ್ರಾಧಿಕಾರದಿಂದ ಐಡಿ ಗುರುತಿನ ಚೀಟಿ ನೀಡುವುದರೊಂದಿಗೆ ಒಂದು ವರ್ಷದವರೆಗೆ ನೇಮಕ ಮಾಡಿಕೊಳ್ಳಲಾಗುವುದು. ಅವರು ತಮ್ಮ ವ್ಯಾಪ್ತಿಯಲ್ಲಿ ಇರುವ ವಿವಿಧ ರೀತಿಯ ಪ್ರಕರಣ ಸೇರಿದಂತೆ ಕಾನೂನು ಸೇವಾ ಪ್ರಾಧಿಕಾರ ವಹಿಸುವ ಕಾರ್ಯವನ್ನು ನಿರ್ವಹಿಸಬೇಕು. ಅವರ ಕಾರ್ಯ ತೃಪ್ತಿಕರವಾಗಿದ್ದಲ್ಲಿ ಮುಂದುವರೆಸಲಾಗುವುದು ನ್ಯಾಯಮೂರ್ತಿ ಎಚ್.ಶಶಿಧರ್ ಶೆಟ್ಟಿ ತಿಳಿಸಿದರು.

# ಸಂದೇಶ ನೀಡುವ ರಚನಾತ್ಮಕ ಚಲನಚಿತ್ರಗಳು ಮೂಡಿಬರಲಿ : ಮಧು ಎಸ್.ಬಂಗಾರಪ್ಪ



**ಶಿವಮೊಗ್ಗ :** ರಾಜಕಾರಣದಲ್ಲಿ ಯಾರಿಗೂ ತಿಳಿಯದಂತೆ ಜಾತಿ, ಧರ್ಮದ ಸೋಂಕು ತಗುಲಿದೆ. ಇಂತಹ ಕಳಂಕಗಳಿಗೆ ಚಿತ್ರರಂಗ ಹೊರಬಂದು ಮನೋರಂಜನೆಯ ಜೊತೆಗೆ ಸಾಮಾಜಿಕ ಹಿತದ ಸಂದೇಶ ನೀಡುವ ರಚನಾತ್ಮಕ ಚಿತ್ರಗಳು ನಿರ್ಮಾಣಗೊಳ್ಳಬೇಕು ಎಂದು ರಾಜ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಮಧು ಎಸ್.ಬಂಗಾರಪ್ಪ ಅವರು ಹೇಳಿದರು.

ಅವರು ಇಂದು ಶಿವಮೊಗ್ಗ ಮಹಾನಗರಪಾಲಿಕೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಶಿವಮೊಗ್ಗ ಬೆಳ್ಳಿಮಂಡಲ, ಸಿನಿಮೊಗೆ, ಶಿವಮೊಗ್ಗ ಚಿತ್ರಸಮಾಜ ಇವರುಗಳ ಸಂಯುಕ್ತಾಶ್ರಯದಲ್ಲಿ ನಗರದ ಡಾ॥ ಬಿ.ಆರ್. ಅಂಬೇಡ್ಕರ್‌ಭವನದಲ್ಲಿ ಏರ್ಪಡಿಸಲಾಗಿದ್ದ ದಸರಾ ಚಲನಚಿತ್ರೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಚಿತ್ರರಂಗದಲ್ಲಿ ಇಂದು ಸಾಕಷ್ಟು ಸಮಸ್ಯೆ-ಸವಾಲುಗಳ ನಡುವೆಯೂ ಹಲವು ತಜ್ಞರು, ಪರಿಣಿತರು ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿರುವುದರ ಕಾರಣದಿಂದಾಗಿ ರಾಜ್ಯದಲ್ಲಿ ಚಿತ್ರರಂಗ, ಚಿತ್ರಮಂದಿರಗಳು ಜೀವಂತವಾಗಿವೆ. ಇಲ್ಲದಿದ್ದಲ್ಲಿ ಪಳಿಯುಳಿಕೆಗಳಾಗಿ ನೋಡಬೇಕಾಗಿತ್ತು. ಇಂತಹ ಅನೇಕ ಕಾರಣಗಳಿಂದಾಗಿ ಅತ್ಯಾಧುನಿಕ ತಂತ್ರಜ್ಞಾನಾಧಾರಿತ ಚಿತ್ರರಂಗಕ್ಕೆ ಸಂಬಂಧಿಸಿದ ಯಂತ್ರೋಪಕರಣಗಳು ರಾಜ್ಯದಲ್ಲಿಯೇ ನೋಡುವಂತಾಗಿದೆ. ಇದಕ್ಕೂ ಮುನ್ನ ರಾಜ್ಯದ ಚಲನಚಿತ್ರದ ನಿರ್ಮಾಪಕರು ತಮ್ಮ ಅಗತ್ಯಗಳಿಗಾಗಿ ಮಡ್ರಾಸ್‌ಗೆ ಹೋಗಬರಬೇಕಾಗುತ್ತಿತ್ತು ಎಂದ ಅವರು, ಚಿತ್ರರಂಗದಲ್ಲಿ ನಿರ್ಮಾಪಕರಾಗಿ, ಅತ್ಯಾಧುನಿಕ ತಂತ್ರಜ್ಞಾನ ಹೊಂದಿದ್ದ ಆಕಾಶ್‌ಆಡಿಯೋ ಸ್ಥಾಪಿಸಿದ್ದ ಕ್ಷಣಗಳನ್ನು ನೆನಪಿಸಿಕೊಂಡರು.

ಪ್ರತಿ ವ್ಯಕ್ತಿಯೂ ತಾನು ತನ್ನ ಕಾರ್ಯಕ್ಷೇತ್ರದಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡು ಮಾಡುವ ಕಾರ್ಯದಿಂದ ಜನಮಾನಸದಲ್ಲಿ ಶಾಶ್ವತವಾಗಿ ಉಳಿದುಕೊಳ್ಳುತ್ತಾನೆ ಎಂಬುದಕ್ಕೆ ನಟರೇ ಸಾಕ್ಷಿ ಎಂದ ಅವರು, ಶಿವಮೊಗ್ಗ ಜಿಲ್ಲೆ ಕಲೆ, ಸಾಹಿತ್ಯ, ಸಂಗೀತ, ನೃತ್ಯ ಕ್ಷೇತ್ರಕ್ಕೆ ನೀಡಿದ ಕೊಡುಗೆ ಅಪಾರವಾಗಿದೆ. ಕವಿ-ಕಲಾವಿದರನ್ನು ಉಳಿಸಿ-ಬೆಳೆಸುವ, ಅನುಸರಿಸುವ ಹೊಣೆಗಾರಿಕೆ ಎಲ್ಲರದ್ದಾಗಿದೆ ಎಂದರು.

ದೇವಾಲಯಗಲ್ಲಿನ ಗಂಟೆ ಸದ್ದಿಗಿಂತ ಶಾಲೆಗಳಲ್ಲಿ ಮೊಳಗುವ ಗಂಟೆ ಸದ್ದು ದೇಶವನ್ನು ಕಟ್ಟುವ ಯುವ ವಿದ್ಯಾರ್ಥಿಗಳ ಭವಿಷ್ಯ ಉಜ್ವಲವಾಗಿ ರೂಪಿಸುತ್ತದೆ. ಅದು ಸಾಮಾಜಿಕವಾಗಿ ಸ್ಥಾನಮಾನ ಹೊಂದಲು ಶಿಕ್ಷಣ ಸಹಕಾರಿಯಾಗಿದೆ. ಎಂದ ಅವರು, ಶಿವಮೊಗ್ಗ ದಸರಾ ಅಂಗವಾಗಿ ಚಿತ್ರರಂಗದ ಹಲವು ಘಟನಾವಳಿಗಳನ್ನಾಧರಿಸಿದ ಅತ್ಯರೂಪದ ಛಾಯಾಚಿತ್ರಗಳನ್ನು ಒಳಗೊಂಡ ಛಾಯಾಚಿತ್ರ ಪ್ರದರ್ಶನ ಅತ್ಯಂತ ವಿಶೇಷವೆನಿಸಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಸಕ ಎಸ್.ಎನ್.ಚನ್ನಬಸಪ್ಪ ಅವರು ಮಾತನಾಡಿ, ರಾಜ್ಯ ಸರ್ಕಾರದ 50ಲಕ್ಷ ರೂ.ಗಳ ಆರ್ಥಿಕ ನೆರವಿನೊಂದಿಗೆ ಸುಮಾರು 2.50ಕೋಟಿ ರೂ.ಗಳ ವೆಚ್ಚದಲ್ಲಿ ಶಿವಮೊಗ್ಗ ದಸರಾವನ್ನು ಅತ್ಯಂತ ಸಂಭ್ರಮ-ಸಡಗರಗಳಿಂದ ಆಚರಿಸಲಾಗುತ್ತಿದೆ. ಈ ದಸರಾ ಅಂಗವಾಗಿ ಏರ್ಪಡಿಸಲಾಗುತ್ತಿರುವ ಅನೇಕ ವೇದಿಕೆಗಳಲ್ಲಿ ಸಹಸ್ರಾರು ಸಂಖ್ಯೆಯ ಕಲಾವಿದರಿಗೆ, ಪ್ರತಿಭಾವಂತರಿಗೆ, ಗಣ್ಯರಿಗೆ ವೇದಿಕೆ ದೊರೆಯಲಿದೆ ಎಂದರು.

ಹಲವು ಸಮಸ್ಯೆ-ಸವಾಲುಗಳಿಂದಾಗಿ ಬೆಳ್ಳಿ ತೆರೆ ತನ್ನ ಮಹತ್ವವನ್ನು ಕಳೆದುಕೊಂಡು ಸೊರಗುತ್ತಿರುವುದು ಅತ್ಯಂತ ನೋವಿನ ಸಂಗತಿ. ಕಲೆಯನ್ನು ಪ್ರೋತ್ಸಾಹಿಸುವ, ಕಲಾವಿದರನ್ನು ಪೋಷಿಸುವ ಮನಸ್ಸುಗಳ ತುರ್ತು ಅಗತ್ಯವಿದೆ. ಶರಣ್, ಹಾಸ್ಯನಟ. ವಿಶ್ವದ ಭೂಪಟದಲ್ಲಿ ಗುರುತಿಸಿಕೊಳ್ಳಬಹುದಾದ ಜಿಲ್ಲೆ ಶಿವಮೊಗ್ಗ. ಕಲೆ, ಸಾಹಿತ್ಯ, ಸಿನಿಮಾ, ರಂಗಭೂಮಿ, ರಾಜಕಾರಣ ಹೀಗೆ ಹಲವು ಕ್ಷೇತ್ರಗಳಿಗೆ ಶಿವಮೊಗ್ಗ ಜಿಲ್ಲೆಯ ಕೊಡುಗೆ ಅಪಾರ ಕಾರಣ್ಯರಾಮ್, ಚಲನಚಿತ್ರ ನಟಿ.

ಸಮಾರಂಭದಲ್ಲಿ ಸೂಡಾ ಅಧ್ಯಕ್ಷ ಎಸ್.ಹೆಚ್.ಸುಂದರೇಶ್, ಪಾಲಿಕೆ ಆಯುಕ್ತ ಮಾಯಣ್ಣಗೌಡ, ಶ್ರೀಮತಿ ರೇಖಾ ರಂಗನಾಥ್, ನಾಗರಾಜ ಕಂಕಾರಿ, ವಿಶ್ವಾಸ್, ಬಿಂಬಶ್ರೀ, ಫಾಲಾಕ್ಷಿ, ಕೃಪಾಕರ, ಅಚ್ಯುತ ನಾರಾಯಣ್‌ಮತ್ತಿತರರು ಉಪಸ್ಥಿತರಿದ್ದರು.

# ಬ್ರಾಹ್ಮಣ ಸಮುದಾಯದವರಿಗೆ ನೇರ ಸಾಲ ಯೋಜನೆಗಾಗಿ ಅರ್ಜಿ ಆಹ್ವಾನ

**ಗದಗ :** ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ವತಿಯಿಂದ ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದ ಸಾಮಾನ್ಯ ವರ್ಗದವರು ಸ್ವಯಂ ಉದ್ಯೋಗ ಕೈಗೊಳ್ಳಲು ನೇರಸಾಲ ಹಾಗೂ ಸಹಾಯಧನ ಮಂಜೂರು ಮಾಡಲು ಆನ್‌ಲೈನ್ ಅರ್ಜಿ ಆಹ್ವಾನಿಸಲಾಗಿದೆ. ಹಸು ಸಾಕಾಣಿಕೆ, ಗುಡಿ ಕೈಗಾರಿಕೆ, ಸಣ್ಣ ಕೈಗಾರಿಕೆ, ಹೋಟೆಲ್ ಉದ್ಯಮ, ಟ್ಯಾಕ್ಸಿ, ಇತ್ಯಾದಿ ವ್ಯಾಪಾರ-ವಹಿವಾಟುಗಳನ್ನು ಕೈಗೊಳ್ಳಲು ವಾರ್ಷಿಕ ಶೇ.4ರ ಬಡ್ಡಿ ದರದಲ್ಲಿ ಕನಿಷ್ಟ 1.00 ಲಕ್ಷ ಹಾಗೂ ಗರಿಷ್ಟ 2.00 ಲಕ್ಷ ರೂ.ಗಳ ವರೆಗೆ ಆರ್ಥಿಕ ನೆರವು ಒದಗಿಸಲಾಗುವುದು. ಅರ್ಜಿದಾರರು ಬ್ರಾಹ್ಮಣ ಸಮುದಾಯದ 18 ರಿಂದ 65 ವಯಸ್ಸಿನೊಳಗಿನ ಸಾಮಾನ್ಯ ವರ್ಗಕ್ಕೆ ಸೇರಿರಬೇಕು, ಚಾಲ್ತಿಯಲ್ಲಿರುವ ಆರ್ಥಿಕವಾಗಿ ಹಿಂದುಳಿದ ಪ್ರಮಾಣ ಪತ್ರ (ಇಫ಼ಖ ) ಹೊಂದಿರಬೇಕು, ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು, ಒಂದು ಕುಟುಂಬದಿಂದ ಒಬ್ಬರು ಮಾತ್ರ ಅರ್ಜಿ ಸಲ್ಲಿಸಬಹುದು.

## ನಿಧನ ಸುದ್ದಿಗಳು

### ಶ್ರೀಮತಿ ಶೈಲಜಾ ಜಂಬೂನಾಥ್ ನಿಧನ

**ದಾವಣಗೆರೆ :** ಸಿಟಿ, ಶಿವಕುಮಾರ ಸ್ವಾಮಿ ಬಡಾವಣೆ, ಮೋರ್ ಹಿಂಭಾಗ ಹದಡಿ ರೋಡ್ ವಾಸಿ, ಬಿಜೆಪಿ ಮುಖಂಡರಾದ ದಿ ಡಿ.ಎಸ್. ಜಂಬೂನಾಥ ರವರ ಧರ್ಮಪತ್ನಿಶ್ರೀಮತಿ ಶೈಲಜಾ ಜಂಬೂನಾಥ್‌ಅವರು ದಿನಾಂಕ : 23.09.2025ರ ಮಂಗಳವಾರ ಮಧ್ಯಾಹ್ನ 3.30 ಗಂಟೆಗೆ ನಿಧನರಾದರು. ಮೃತರಿಗೆ 57 ವರ್ಷ ವಯಸ್ಸಾಗಿತ್ತು.ಮೃತರ ಅಂತ್ಯಕ್ರಿಯೆಯು ದಿನಾಂಕ : 24.09.2025ರ ಬುಧವಾರ ಮಧ್ಯಾಹ್ನ 12.30 ಗಂಟೆಗೆ ಶಾಮನೂರು ಗ್ಲಾಸ್ ಹೌಸ್ ರುದ್ರಭೂಮಿಯಲ್ಲಿ ನೆರವೇರಿದೆ.

### ಜಯಲಕ್ಷ್ಮೀಬಾಯಿ ನಿಧನ

**ದಾವಣಗೆರೆ:** ವಿನೋಬನಗರ 1ನೇ ಮೇನ್, 15ನೇ ಕ್ರಾಸ್ ವಾಸಿ ಟಿ. ನಾರಾಯಣರಾವ್ ಚವ್ಹಾಣ್ ಇವರ ಪತ್ನಿ ಜಯಲಕ್ಷ್ಮಿ ಬಾಯಿ ಇವರು ದಿ : 23.9.2025ರ ಮಂಗಳವಾರ ಬೆಳಿಗ್ಗೆ 10.30ಕ್ಕೆ ನಿಧನರಾದರು. ಅವರಿಗೆ 70 ವರ್ಷ ವಯಸ್ಸಾಗಿತ್ತು. ಮೃತರ ಅಂತ್ಯಕ್ರಿಯೆಯು ದಿ 24.9.2025ರ ಬುಧವಾರ ಬೆಳಿಗ್ಗೆ 12 ಗಂಟೆಗೆ ನಗರದ ಪಿ.ಬಿ.ರಸ್ತೆಯಲ್ಲಿರುವ ವೈಕುಂಠಧಾಮದಲ್ಲಿ ನೆರವೇರಿದೆ.

### ಜವಳಿ ಎಂ. ಕರಿಬಸಪ್ಪ ನಿಧನ

**ದಾವಣಗೆರೆ :** ಕಾಯಿಪೇಟೆ ಶ್ರೀ ಬಸವೇಶ್ವರ ದೇವಸ್ಥಾನದ ಹತ್ತಿರದ ವಾಸಿ ಶ್ರೀ ಜವಳಿ ಎಂ. ಕರಿಬಸಪ್ಪ ಅವರು ದಿನಾಂಕ 23-09-20258 ಮಂಗಳವಾರ ಮಧ್ಯಾಹ್ನ 2.42 ಕ್ಕೆ ನಿಧನರಾದರು. ಪತ್ನಿ, ಇಬ್ಬರು ಪುತ್ರರು, ಒರ್ವ ಪುತ್ರಿ, ಅಳಿಯಂದಿರು, ಸೊಸೆಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧುಗಳನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯು ದಿನಾಂಕ 24-9-2025ರ ಬುಧವಾರ ಮಧ್ಯಾಹ್ನ 2 ಕ್ಕೆ ನಗರದ ಬೂದಾಳ್ ರಸ್ತೆಯ ವೀರಶೈವ ರುದ್ರಭೂಮಿಯಲ್ಲಿ ನೆರವೇರಿದೆ.

# ಶ್ರೀ ಚೌಡೇಶ್ವರಿ ಅಮ್ಮನವರಿಗೆ ಶ್ರೀ ಅನ್ನಪೂರ್ಣೇಶ್ವರಿ ಅಲಂಕಾರ




**ಶಿವಮೊಗ್ಗ :** ನಗರದ ಚಾಲುಕ್ಯನಗರದಲ್ಲಿರುವ ಶ್ರೀ ಚೌಡೇಶ್ವರಿ ಅಮ್ಮನವರ ದೇವಸ್ಥಾನದಲ್ಲಿ ಸೆ.24ರಂದು ಶ್ರೀಮತಿ ಮೈತ್ರಾ ಶ್ರೀ ನಾರಾಯಣಮೂರ್ತಿ ಕುಟುಂಬದವರಿಂದ ಅನ್ನಪೂರ್ಣೇಶ್ವರಿ ಅಲಂಕಾರ, ಶ್ರೀಮತಿ ದಿವ್ಯಾ ಡಾ॥ ಮೋಹನ್ ಮತ್ತು ಶ್ರೀಮತಿ ಮಧು ಶ್ರೀ ಪ್ರಸನ್ನ ಕುಟುಂಬದವರಿಂದ ಶ್ರೀ ಚಂಡಿಕಾಹೋಮ ನೇರವೇರಿಸಲಾಯಿತು.

ಸೆ. 25 ಶ್ರೀಮತಿ ಮೂಕಾಂಬಿಕಾ ಶ್ರೀ ಅಶೋಕ ಕುಮಾರ ಕುಟುಂಬದಿಂದ ದೇವಿಗೆ ಶಾಕಂಬರಿ ಅಲಂಕಾರ,

ಶ್ರೀಮತಿ ಡಾ. ಕಾವ್ಯ ಶ್ರೀ ಶ್ರೀ ಡಾ. ಅಪ್ರಮೇಯ ಕುಟುಂಬದವರಿಂದ ಬನಶಂಕರಿ ಹೋಮ ಏರ್ಪಡಿಸಲಾಗಿದೆ.

ಅದೇ ದಿನ ಸಂಜೆ 6.30 ರಿಂದ ಪೃಥ್ವಿ ಗೌಡ ಇವರಿಂದ ಭಕ್ತಿ ಗೀತೆ ಕಾರ್ಯಕ್ರಮ. ರಾತ್ರಿ 8.00 ರಿಂದ ಶ್ರೀಮತಿ ಪವಿತ್ರ ಶ್ರೀ ಹರಿಪ್ರಕಾಶ್ ಕುಟುಂಬದವರಿಂದ ಉಯ್ಯಾಲೇ ಸೇವೆ ಹಮ್ಮಿಕೊಳ್ಳಲಾಗಿದೆ. 8.30ಕ್ಕೆ ಮಹಾಮಂಗಳಾರತಿ ತೀರ್ಥ ಪ್ರಸಾದ ವಿನಿಯೋಗ ವಿರುತ್ತದೆ

ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ದೇವಿಯ ಕೃಪೆಗೆ ಪಾತ್ರರಾಗಬೇಕಾಗಿ ಆಡಳಿತ ಮಂಡಳಿ ಕೋರಿದ್ದಾರೆ

ಹೆಚ್ಚಿನ ಮಾಹಿತಿಗಾಗಿ : ಚೇತನಭಟ್ 9980247081, ಕೆ. ಶೇಖರ 9448888129 ಸಂಪರ್ಕಿಸಬಹುದು.

# ಅಸಂಘಟಿತ ಕಾರ್ಮಿಕರ ಸೌಲಭ್ಯ ಸದುಪಯೋಗಕ್ಕೆ ಸಚಿವ ಲಾಡ್ ಕರೆ

**ಚಿಕ್ಕಮಗಳೂರು :** ಅಸಂಘಟಿತ ಕಾರ್ಮಿಕರಿಗೆ ಸರ್ಕಾರದಿಂದ ಹಲವು ಯೋಜನೆಗಳನ್ನು ಜಾರಿಗೆ ತರಲಾಗಿದ್ದು, ಪ್ರತಿಯೊಬ್ಬ ಅಸಂಘಟಿತ ಕಾರ್ಮಿಕರು ಸರ್ಕಾರದ ಯೋಜನೆಗಳ ಸದುಪಯೋಗ ಪಡೆದುಕೊಳ್ಳುವಂತೆ ಎಂದು ಕಾರ್ಮಿಕ ಸಚಿವರಾದ ಶ್ರೀ ಸಂತೋಷ್ ಎಸ್.ಲಾಡ್ ತಿಳಿಸಿದರು.

ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ, ಸಾರಿಗೆ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ವತಿಯಿಂದ ಇಂದು ನಗರದ ವಿಜಯಪುರದ ಒಕ್ಕಲಿಗರ ಸಮುದಾಯ ಭವನದಲ್ಲಿ ಆಯೋಜಿಸಲಾಗಿದ್ದ ಲ್ಲೆಯ ವಿವಿಧ ವರ್ಗಗಳ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಹಾಗೂ ಅರಿವು ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ಅಸಂಘಟಿತ ಕಾರ್ಮಿಕರಿಗೆ ಸೂಕ್ತ ಭದ್ರತೆ ಒದಗಿಸುವುದು ಸರ್ಕಾರದ ಉದ್ದೇಶವಾಗಿದೆ. ಜೊತೆಗೆ ನಾಟಕ, ಸಾಂಸ್ಕೃತಿಕ ಕಾರ್ಯಕ್ರಮಗಳು, ಜನಪದ ಕಲೆ, ಹೀಗೆ ವಿವಿಧ ರೀತಿಯಲ್ಲಿ ತೊಡಗಿಸಿಕೊಂಡಿರುವ ಅಸಂಘಟಿತ ಕಾರ್ಮಿಕರಿಗೂ ಸೌಲಭ್ಯ ಜಾರಿಗೊಳಿಸಲಾಗಿದೆ ಎಂದು ಸಚಿವರು ವಿವರಿಸಿದರು.

ಆಟೋ ರಿಕ್ಷಾ ಚಾಲಕರು, ಪೇಯಿಂಟಿಂಗ್ ಮಾಡುವವರು ಸೇರಿದಂತೆ ಹಲವರಿಗೆ ಕಾರ್ಮಿಕ ಕಾಯ್ದೆ ಜಾರಿಗೊಳಿಸಲಾಗಿದ್ದು, ಅಸಂಘಟಿತ ಕಾರ್ಮಿಕರು ಅಪಘಾತದಲ್ಲಿ ಮೃತರಾದಲ್ಲಿ 5 ಲಕ್ಷ ರೂ.ವರೆಗೂ



ಪರಿಹಾರ ವಿತರಿಸಲಾಗುತ್ತದೆ ಎಂದ ಅವರು, ಸ್ವಿಗ್ಗಿ, ಜೊಮೆಟೋಗಳಂತಹ ಸಂಸ್ಥೆಯಲ್ಲಿ ಆಹಾರ ಸರಬರಾಜು ಮಾಡುವ ಹಾಗೂ ಇ-ಕಾಮರ್ಸ್ ಸಂಸ್ಥೆಗಳಾದ ಅಮೆಜಾನ್, ಫ್ಲಿಪ್‌ಕಾರ್ಟ್, ಪೋರ್ಟಲ್, ಫಾರ್ಮಸಿ, ಬ್ಲಿಂಕಿಟ್, ಬಿಗ್ ಬಾಸ್ಕೆಟ್, ಡೊಮಿನಾಜ್ ಮತ್ತಿತರ ಸಂಸ್ಥೆಗಳಲ್ಲಿ ಡೆಲಿವರಿ ವೃತ್ತಿಯಲ್ಲಿ ತೊಡಗಿಸಿಕೊಂಡವರೆಲ್ಲರೂ ಅಸಂಘಟಿತ ಕಾರ್ಮಿಕರಾಗಿದ್ದಾರೆ ಎಂದು ತಿಳಿಸಿದರು.

ದೇಶದಲ್ಲಿ ತಲಾ ಆದಾಯದಲ್ಲಿ ಕರ್ನಾಟಕವೇ ಮೊದಲ ಸ್ಥಾನದಲ್ಲಿದೆ. ಜಿಎಸ್‌ಟಿ ಸಂಗ್ರಹದಲ್ಲೂ ಮುಂಚೂಣಿಯಲ್ಲಿದ್ದೇವೆ. ಇದಕ್ಕೆ ಗ್ಯಾರಂಟಿ ಯೋಜನೆಗಳ ಯಶಸ್ಸು ಕಾರಣ. ಆಶಾ ದೀಪ ಕಾರ್ಯಕ್ರಮದಲ್ಲಿ ಎಸ್‌ಸಿ, ಎಸ್‌ಟಿ ವರ್ಗದವರಿಗೆ ಕೆಲಸ ನೀಡುವವರಿಗೆ ರೂ. 7500 ರವರೆಗೆ ನೆರವು ನೀಡಲಾಗುತ್ತಿದೆ. ಹೊರಗುತ್ತಿಗೆ ನೌಕರರು ಸೊಸೈಟಿ ಮೂಲಕ ಕಾರ್ಯ ನಿರ್ವಹಿಸಲಿದ್ದು, ಸಂಬಳ ಸಮಸ್ಯೆ ತಪ್ಪಲಿದೆ. ಮುಂದಿನ ದಿನಗಳಲ್ಲಿ ಮನೆ ಕೆಲಸ ಕಾರ್ಮಿಕರಿಗೆ ಕನಿಷ್ಠ ವೇತನ ಕಾನೂನು ಜಾರಿಗೆ ತರಲಾಗುವುದು ಎಂದು ಹೇಳಿದರು.

ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ ಕರ್ನಾಟಕ ರಾಜ್ಯ ಸರ್ಕಾರವು ಅಸಂಘಟಿತ ವರ್ಗಗಳಲ್ಲಿ ದುಡಿಯುತ್ತಿರುವ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸುವ ಉದ್ದೇಶದಿಂದ ಕರ್ನಾಟಕ ರಾಜ್ಯ ಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ ಮೂಲಕ "ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ"ಯನ್ನು ಅನು?ನಗೊಳಿಸಲಾಗುತ್ತಿದೆ ಎಂದರು.

ಪ್ರಾರಂಭಿಕವಾಗಿ 26 ವರ್ಗಗಳ ಅಸಂಘಟತ ಕಾರ್ಮಿಕರನ್ನು ನೋಂದಾಯಿಸಲಾಗುತ್ತಿತ್ತು. ಪ್ರಸ್ತುತ ಹೊಸದಾಗಿ ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಮತ್ತು 3ಬಿಗೆ ಸೇರಿದ ಪಾರಂಪರಿಕ ವೃತ್ತಿಯಲ್ಲಿ ತೊಡಗಿರುವ 38 ವರ್ಗಗಳು ಹಾಗೂ ಹಿಂದುಳಿದ ವರ್ಗಗಳ ಅಲೆಮಾರಿ ಹಾಗೂ ಅರೆಅಲೆಮಾರಿ ಪಂಗಡದ ಕುಲಕಸುಬಿನಲ್ಲಿ ತೊಡಗಿರುವ 27 ವರ್ಗಗಳ ಕಾರ್ಮಿಕರು ಸೇರಿದಂತೆ ಒಟ್ಟಾರೆ 91 ವರ್ಗಗಳ ಕಾರ್ಮಿಕರನ್ನು ಉಚಿತವಾಗಿ ನೋಂದಾಯಿಸಿ ಸೌಲಭ್ಯಗಳನ್ನೊಳಗೊಂಡ ಸ್ಮಾರ್ಟ್ ಕಾರ್ಡ್ ನೀಡಲಾಗುತ್ತಿದ್ದು, ರಾಜ್ಯದಲ್ಲಿ ಸುಮಾರು 35 ಲಕ್ಷ ಕಾರ್ಮಿಕರು ಇರುವುದಾಗಿ ಅಂದಾಜಿಸಲಾಗಿದೆ ಎಂದು ತಿಳಿಸಿದರು.

ಪ್ರತಿಯೊಬ್ಬ ಶ್ರಮಜೀವಿ ಕಾರ್ಮಿಕ ಇಲಾಖೆಯ ಅಧೀನದಲ್ಲಿ ಬರುತ್ತಾರೆ. ಕೆಲಸ ಮಾಡುವಂತಹ ಪ್ರತಿಯೊಬ್ಬರೂ ಅವರ ವೇತನ ಹೆಚ್ಚು ಕಡಿಮೆ ಇದ್ದರೂ ಕೂಡ ಶ್ರಮ ವಹಿಸುವವರು ಕಾರ್ಮಿಕ ಇಲಾಖೆಯ ವ್ಯಾಪ್ತಿಗೆ ಬರುತ್ತಾರೆ. ಅದು ಬಹುಶಃ ವೇತನ ಎನ್ನುವುದು ಉನ್ನತ ಹುದ್ದೆಯಿಂದ ಹಿಡಿದು ಕಟ್ಟ ಕಡೆಯ ಮನು?ನವರೆಗೂ ಪ್ರತಿಯೊಬ್ಬ ಶ್ರಮಜೀವಿ ಕಾರ್ಮಿಕ ಇಲಾಖೆಯ ವ್ಯಾಪ್ತಿಗೆ ಒಳಪಡಲಿದ್ದಾರೆ ಎಂದು ಹೇಳಿದರು.

ತರೀಕೆರೆ ಶಾಸಕ ಜಿ.ಹೆಚ್.ಶ್ರೀನಿವಾಸ್ ಮಾತನಾಡಿದರು. ಕಾರ್ಮಿಕ ಇಲಾಖೆಯ ಆಯುಕ್ತ ಹೆಚ್.ಎನ್.ಗೋಪಾಲಕೃಷ್ಣ ಸಂವಿಧಾನ ಪೀಠಿಕೆ ಬೋಧಿಸಿದರು. ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ.ಶ್ರೀನಿವಾಸ್, ಭದ್ರಾ ಕಾಡಾ ಅಧ್ಯಕ್ಷರಾದ ಡಾ.ಕೆ.ಪಿ.ಅಂಶುಮಂತ್, ಕ.ರಾ.ಕೃಷಿ ಉತ್ಪನ್ನ ಸಂಸ್ಕರಣೆ ಮತ್ತು ರಫ್ತು ನಿಗಮದ ಅಧ್ಯಕ್ಷರಾದ ಬಿ.ಹೆಚ್. ಹರೀಶ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ನಯಾಜ್ ಅಹಮ್ಮದ್, ಕಾರ್ಮಿಕ ಇಲಾಖೆಯ ಪ್ರಧಾನ ಕಾರ್ಯದರ್ಶಿ ಮೊಹಮ್ಮದ್ ಮೊಹಸಿನ್, ಜಿಲ್ಲಾಧಿಕಾರಿ ಸಿ.ಎನ್.ಮೀನಾ ನಾಗರಾಜ್, ಜಿ.ಪಂ. ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಹೆಚ್.ಎಸ್.ಕೀರ್ತನಾ, ಜಂಟಿ ಕಾರ್ಮಿಕ ಆಯುಕ್ತ ರವಿಕುಮಾರ್ ಮುಂತಾದವರು ಉಪಸ್ಥಿತರಿದ್ದರು.

## ಸ್ವಚ್ಛತಾ ಹೀ ಸೇವಾ ಸ್ವಚ್ಛತೆಯೇ ಸೇವೆ ಪಾಕ್ಷಿಕ-2025 ರ ಅಭಿಯಾನ

**ದಾವಣಗೆರೆ :** ಸ್ವಚ್ಛತಾ ಹೀ ಸೇವಾ ಪಾಕ್ಷಿಕ-2025 ರ ಅಭಿಯಾನದಡಿ ಸೆಪ್ಟೆಂಬರ್ 25 ರಂದು ಬೆಳಿಗ್ಗೆ 7 ಗಂಟೆಗೆ ಕುಂದುವಾಡ ಕೆರೆಯ ಮುಖ್ಯದ್ವಾರದಲ್ಲಿ ಒಂದು ದಿನ ಒಂದು ಗಂಟೆ (ಏಕ್ ದಿನ, ಏಕ್ ಘಂಟಾ, ಏಕ್ ಸಾಥ್) ಎಂಬ ಘೋಷವಾಕ್ಯದಡಿ ಎಲ್ಲರೂ ಒಟ್ಟಿಗೆ ಶ್ರಮದಾನ ಕಾರ್ಯವನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾಧವ್ ವಿಠ್ಠಲ್ ರಾವ್ ತಿಳಿಸಿದ್ದಾರೆ.

## ಈ ಬಾರಿಯ ಹಬ್ಬಗಳಲ್ಲಿನ ಶಾಂತಿ ಸೌಹಾರ್ದತೆ ಪ್ರತಿ ವರ್ಷ ಮುಂದುವರೆಯಲಿ: ಬಿ.ವೀರಣ್ಣ

**ದಾವಣಗೆರೆ:** ನಗರದಲ್ಲಿ ಈ ಬಾರಿಯ ಗೌರಿ ಗಣೇಶ ಮತ್ತು ಈದ್ ಮಿಲಾದ್ ಹಬ್ಬಗಳನ್ನು ಯಾವುದೇ ಕೋಮು ಗಲಭೆ ಇಲ್ಲದೇ ಶಾಂತಿ ಸೌಹಾರ್ದತೆಯಿಂದ ಆಚರಿಸಲಾಗಿದೆ. ಇದೇ ರೀತಿ ಮುಂಬರುವ ಪ್ರತಿವರ್ಷಗಳಲ್ಲೂ ಆಚರಣೆ ಮಾಡುವಂತಾಗಲಿ ಎಂದು ಕೆರೆಗರಡಿ ವಿನಾಯಕ ಸೇವಾ ಸಮಿತಿ ಅಧ್ಯಕ್ಷ ಬಿ.ವೀರಣ್ಣ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

ಜಿಲ್ಲೆಗೆ ಕಳಂಕ ಬಾರದ ರೀತಿಯಲ್ಲಿ ಶಾಂತಿ ಸೌಹಾರ್ದತೆಯಿಂದ ಎಲ್ಲ ಧರ್ಮೀಯರೂ ಕಾನೂನು ಸುವ್ಯವಸ್ಥೆ ಪಾಲಿಸಿ ಹಬ್ಬಗಳನ್ನು ಆಚರಣೆ ಮಾಡಿದ್ದಾರೆ. ಡಿಜೆಗೆ ಅವಕಾಶ ನೀಡುವ ಸಂದರ್ಭದಲ್ಲಿ ಸಾಕಷ್ಟು ಗೊಂದಲಗಳಾದರೂ ಅದನ್ನು ಸಮರ್ಪಕವಾಗಿ ನಿಭಾಯಿಸಿ ಹಬ್ಬಗಳ ಯಶಸ್ವಿಗೆ ಶ್ರಮಿಸಿದಂತಹ ಜಿಲ್ಲಾಡಳಿತದ ಕಾರ್ಯಕ್ಕೆ ಜಿಲ್ಲೆಯಾದ್ಯಂತ ಮೆಚ್ಚುಗೆ ವ್ಯಕ್ತವಾಗಿದೆ.

ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರ ಸ್ವಾಮಿ ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಅವರ ಕಾರ್ಯವೈಖರಿ ಮೆಚ್ಚುವಂತದ್ದು. ಅವರ ಕೈಗೊಂಡ ಕೆಲ ಕಠಿಣ ನಿರ್ಧಾರಗಳಿಂದ ಜಿಲ್ಲೆಯಲ್ಲಿ ಶಾಂತಿಯುತವಾಗಿ ಹಬ್ಬಗಳು ಆಚರಣೆಯಾಗಲು ಸಾಧ್ಯವಾಗಿದೆ ಎಂದು ಹೇಳಿದ್ದಾರೆ.

ಗಣೇಶೋತ್ಸವ ಮೆರವಣಿಗೆಗಳಲ್ಲಿ ಜಾನಪದ ಕಲಾತಂಡಗಳಿಗೆ, ಕಲಾವಿದರುಗಳಿಗೆ ಅವಕಾಶ ಸಿಕ್ಕಿದಂತಾಗಿದೆ. ಸಮಾಜದಲ್ಲಿ ಸಾಮರಸ್ಯಗಳು ಇಲ್ಲವಾದಾಗ ಶಾಂತಿಗೆ ಭಂಗವಾಗುವಂತಹ ಘಟನೆಗಳು ಸಂಭವಿಸುತ್ತವೆ. ಅಂತಹ ಘಟನೆಗಳಿಗೆ ನಾವು ಸಾಕ್ಷಿ ಆಗಬಾರದು ಸಮಾಜದಲ್ಲಿ ಶಾಂತಿ ನೆಲೆಸುವ ಮತ್ತು ಸರ್ವರಲ್ಲೂ ಸಾಮರಸ್ಯ ಬರುವ ನಿಟ್ಟಿನಲ್ಲಿ ನಡೆದುಕೊಳ್ಳಬೇಕಾಗುತ್ತದೆ. ಮುಂದಿನ ದಿನಗಳಲ್ಲಿ ಇಂತಹ ಆಚರಣೆಗೆ ನಾವೆಲ್ಲ ಮುಂದಾಗಬೇಕಾಗಿದೆ ಎಂದು ಬಿ.ವೀರಣ್ಣ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗಣೇಶಮೂರ್ತಿ ಶೋಭಾಯಾತ್ರೆಯೂ ಹಿಂದಿಗಿಂತಲೂ ಈ ಬಾರಿ ಅದ್ದೂರಿಯಾಗಿ ನಡೆದಿದೆ

**ದಾವಣಗೆರೆ:** ಸಾರ್ವಜನಿಕ ಹಿಂದೂ ಮಹಾಗಣಪತಿ ಟ್ರಸ್ಟಿನಿಂದ ಪ್ರತಿಷ್ಠಾಪಿಸಲಾಗಿದ್ದ ಗಣೇಶಮೂರ್ತಿ ಶೋಭಾಯಾತ್ರೆಯೂ ಈ ಬಾರಿ ಹಿಂದಿಗಿಂತಲೂ ಅದ್ದೂರಿಯಾಗಿ ನಡೆದಿದ್ದು, ಡಿಜೆ ಇಲ್ಲದಿದ್ದರೂ ಹಿಂದೂ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಸೇರುವ ಮುಖೇನ ಡಿಜೆಗೆ ಅನುಮತಿಸದ ಜಿಲ್ಲಾಡಳಿತ ಮತ್ತು ಜಿಲ್ಲಾ ಪೊಲೀಸ್ ಇಲಾಖೆಗೆ ತಕ್ಕ ಉತ್ತರ ನೀಡಿದ್ದಾರೆ. ನಮ್ಮೆಲ್ಲಾ ಹಿಂದುಗಳಿಗೆ ಕೃತಜ್ಞತೆ ಸಲ್ಲಿಸುತ್ತೇವೆ ಎಂದು ಟ್ರಸ್ಟಿನ ಅಧ್ಯಕ್ಷ ಜೊಳ್ಳಿ ಗುರು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಟ್ರಸ್ಟಿನಿಂದ ಎಂಟು ವರ್ಷಗಳಿಂದ ಹಿಂದೂ ಮಹಾಗಣಪತಿ ಪ್ರತಿಷ್ಠಾಪಿಸುತ್ತಾ ಬರಲಾಗುತ್ತಿದ್ದು, ಪ್ರತಿವರ್ಷವೂ ಲಕ್ಷಾಂತರ ಜನರು ಸೇರಿ ಶೋಭಾಯಾತ್ರೆಯನ್ನು ಯಶಸ್ವಿ ಮಾಡುತ್ತಾ ಬಂದಿದ್ದಾರೆ. ಈ ಸಲ ಡಿಜೆಗೆ ಜಿಲ್ಲಾಧಿಕಾರಿ ಮತ್ತು ಪೊಲೀಸ್ ಅಧಿಕಾರಿ ಅನುಮತಿ ನೀಡಲಿಲ್ಲ. ಹಾಗಿದ್ದರೂ ನಮ್ಮ ಒಂದು ಕರೆಗೆ ಲಕ್ಷಾಂತರ ಹಿಂದೂಗಳು ಪಾಲ್ಗೊಂಡು ಹಿಂದೂಗಳ ಶಕ್ತಿಯನ್ನು ಪ್ರದರ್ಶಿಸಿ ತಕ್ಕ ಉತ್ತರ ನೀಡಿದ್ದಾರೆ. ನಾವು ಯಾವಾಗಲು ಹಿಂದೂಗಳ ಬೆಂಬಲಕ್ಕೆ ನಿಲ್ಲುತ್ತೇವೆ ಎಂದು ತಿಳಿಸಿದರು.

ಹಿಂದೂ ಮುಖಂಡ ಶ್ರೀನಿವಾಸ ದಾಸಕರಿಯಪ್ಪ ಮಾತನಾಡಿ, ಈ ಬಾರಿ ಡಿಜೆ ಇಲ್ಲದಿದ್ದರೂ ಶೊಭಾಯಾತ್ರೆ ಯಶಸ್ವಿಯಾಗಿದೆ. ಡಿಜೆ ಇದ್ದಾಗಲೂ ಯಾವುದೇ ತೊಂದರೆಯಾಗದಂತೆ ಶೋಭಾಯಾತ್ರೆಯೂ ನಡೆದಿರುವ ಉದಾಹರಣೆಗಳು ಕಣ್ಣಮುಂದಿವೆ. ಈ ಬಾರಿ ಕಲಾತಂಡಗಳಿಗೆ ಉತ್ತೇಜನ ನೀಡಿರುವುದು ಸ್ವಾಗತಾರ್ಹ. ಹಿಂದೂಗಳ ಎಲ್ಲಾ ಹಬ್ಬಗಳಿಗೆ ಕಲಾತಂಡಗಳೊಂದಿಗೆ ಡಿಜೆಗೂ ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆ ಅವಕಾಶ ನೀಡಬೇಕೆಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಮಾಗಿ ಪ್ರಕಾಶ್, ಜರೀಕಟ್ಟೆ ಚಂದ್ರಣ್ಣ, ಮಂಜುನಾಥ್ ಮತ್ತಿತರರಿದ್ದರು.

## ಅರ್ಜಿ ಆಹ್ವಾನ

**ರಾಮನಗರ:** ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ ಬ್ಯೂಟಿ ಪಾರ್ಲರ್ ಕುರಿತು 35 ದಿನಗಳ ಉಚಿತ ತರಬೇತಿಯು ನವೆಂಬರ್ 04 ರಿಂದ ಪ್ರಾರಂಭವಾಗಲಿದ್ದು, ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವತಿಯರು ಅರ್ಜಿ ಸಲ್ಲಿಸಬಹುದಾಗಿದೆ.

ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಬಿಪಿಎಲ್ ಕಾರ್ಡ್ ಅಥವಾ ಜಾಬ್ ಕಾರ್ಡ್ ಹಾಗೂ ಆಧಾರ್ ಕಾರ್ಡ್ನ್ನು ಕಡ್ಡಾಯವಾಗಿ ಹೊಂದಿರುವ ಗ್ರಾಮೀಣ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು

.ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು.ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 9380162042, 9113880324, 8027728166 ಅನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕ ರವಿಕುಮಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೇರ ಸಂದರ್ಶನ

**ಚಿಕ್ಕಮಗಳೂರು:** ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಕಚೆರಿಯಲ್ಲಿ ಸೆಪ್ಟಂಬರ್ 25 ರಂದು ಬೆಳಿಗ್ಗೆ 10.30 ಗಂಟೆಗೆ ಖಾಸಗಿ ಕಂಪನಿಯಾದ ಎಸ್‌ಬಿಐ ಲೈಫ್ ಇನ್ಸೂರೆನ್ಸ್ ಸಂಸ್ಥೆಯು ಖಾಲಿ ಇರುವ ಹುದ್ದೆಗಳಿಗೆ ನೇರ ಸಂದರ್ಶನ ಏರ್ಪಡಿಸಿದೆ. ಪಿಯುಸಿ, ಡಿಪ್ಲೋಮಾ ಮತ್ತು ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರುವ 18 ರಿಂದ 35 ವಯೋಮಿತಿಯ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಸಂದರ್ಶನದಲ್ಲಿ ಭಾಗವಹಿಸಬಹುದು. ಉಚಿತ ಪ್ರವೇಶವಿದ್ದು ಅಭ್ಯರ್ಥಿಗಳು ಒಂದು ಸೆಟ್ ರೆಸ್ಯೂಮ್‌ನೊಂದಿಗೆ ಸಂದರ್ಶನಕ್ಕೆ ಹಾಜರಾಗಬಹುದು. ಹೆಚ್ಚಿನ ಮಾಹಿತಿಗೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ(ದೂರವಾಣಿ: 08262-295538)ವನ್ನು ಸಂಪರ್ಕಿಸಬಹುದು.

# ತರಬೇತಿ ಕಾರ್ಯಾಗಾರ



**ರಾಮನಗರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪಂಚಾಯತ್ ರಾಜ್ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಹಯೋಗದೊಂದಿಗೆ ಬೆಂಗಳೂರು ದಕ್ಷಿಣ ಜಿಲ್ಲೆಯ ಎಲ್ಲಾ ತಾಲ್ಲೂಕಿನ ಗ್ರಾಮ ಪಂಚಾಯಿತಿಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು/ಅಧ್ಯಕ್ಷರು ಹಾಗೂ ಓರ್ವ ಸದಸ್ಯರಿಗೆ ಬಾಲನ್ಯಾಯ (ಮಕ್ಕಳ ರಕ್ಷಣೆ-ಪೋಷಣೆ) ಕಾಯ್ದೆ-2015, ಪೋಕ್ಸೋ ಕಾಯ್ದೆ-2012, ಬಾಲ್ಯವಿವಾಹ ನಿಷೇಧ ಕಾಯ್ದೆ, ಬಾಲಕಾರ್ಮಿಕ ನಿಷೇಧ ಕಾಯ್ದೆ, ಕಾನೂನು ಬದ್ದ ದತ್ತು ಪ್ರಕ್ರಿಯೆ, ಪೋಷಕತ್ವ ಯೋಜನೆ, ಮಾನವ/ಮಕ್ಕಳ ಕಳ್ಳ ಸಾಗಾಣಿಕೆ, ಮಕ್ಕಳ ಸಹಾಯವಾಣಿ-1098,

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಕಾರ್ಯವೈಖರಿ ಹಾಗೂ ಪುನರ್ವಸತಿ ಯೋಜನೆ ಮತ್ತು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದಿಂದ ಸಿಗುವ ಸವಲತ್ತುಗಳ ಕುರಿತಂತೆ ಒಂದು ದಿನದ ತರಬೇತಿ ಕಾರ್ಯಾಗಾರವನ್ನು ಸೆ.24ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ.ಕಾರ್ಯಕ್ರಮವನ್ನು ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್ ಅವರು ಉದ್ಘಾಟಿಸುವರು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸವಿತಾ ಪಿ.ಆರ್. ಅವರು ಅಧ್ಯಕ್ಷತೆ ವಹಿಸುವರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅನ್ಮೋಲ್ ಜೈನ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀನಿವಾಸ್ ಗೌಡ, ಜಿಲ್ಲಾ ಪೊಲೀಸ್ ಭವನದ ಹಿರಿಯ ಮಕ್ಕಳ ಕಲ್ಯಾಣಾಧಿಕಾರಿ ಶ್ರೀನಿವಾಸ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ

ಇಲಾಖೆಯ ಉಪನಿರ್ದೇಶಕ ದಿನೇಶ್, ರಾಮನಗರ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಣಾಧಿಕಾರಿಗಳಾದ ಪೂರ್ಣಿಮಾ, ಚನ್ನಪಟ್ಟಣ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ

ಅಧಿಕಾರಿ ಸಂದೀಪ್ ಎಲ್., ಮಾಗಡಿ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿ ಜೈಪಾಲ್ ಡಿ., ಕನಕಪುರ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಣಾಧಿಕಾರಿ ಅವಿನಾಶ್, ಹಾರೋಹಳ್ಳಿ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಣಾಧಿಕಾರಿ ಅಪೂರ್ವ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಮಂಡ್ಯ ಜಿಲ್ಲೆಯ ಮಕ್ಕಳ ಹಕ್ಕುಗಳ ಅಭಿವೃದ್ಧಿ ಕಾರ್ಯಕರ್ತರಾದ ಲಕ್ಷ್ಮೀಪ್ರಸನ್ನ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸುವರು.

## ಸಹಕಾರ ಸಂಘದಿಂದ ಕಟ್ಟಡ ಕಾರ್ಮಿಕರಿಗೆ ಆರ್ಥಿಕ ನೆರವು ಶ್ಲಾಘನೀಯ: ಟಿ.ಆರ್.ಗುರುಬಸವರಾಜ್



**ದಾವಣಗೆರೆ:** ಕಟ್ಟಡ ನಿರ್ಮಾಣ ವಲಯದಲ್ಲಿ ಕೆಲಸ ಮಾಡುತ್ತಿರುವ ಕಟ್ಟಡ ಮತ್ತು ಕಲ್ಲು ಒಡೆಯುವ ಕ್ವಾರಿ ಕಾರ್ಮಿಕರ ವಿವಿಧೋದ್ದೇಶ ಸಹಕಾರ ಸಂಘದ ಕಾರ್ಯ ಶ್ಲಾಘನೀಯ ಎಂದು ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಟಿ.ಆರ್. ಗುರುಬಸವರಾಜ್ ಹೇಳಿದರು.

ನಗರದ ಆಶೋಕ ರಸ್ತೆಯಲ್ಲಿನ ಕಾಂ.ಪಂಪಾಪತಿ ಭವನದಲ್ಲಿ ಆಯೋಜಿಸಲಾಗಿದ್ದ ಸಹಕಾರ ಸಂಘದ ವಾರ್ಷಿಕ ಮಹಾಸಭೆಯನ್ನು ಉದ್ಘಾಟಿಸಿ ಮಾತನಾಡಿ, ಅಸಂಘಟಿತ ವಲಯದಲ್ಲಿ ಇರುವ ಕಾರ್ಮಿಕರನ್ನು ಸಂಘಟಿಸಿ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಇರುವ ಸೌಲಭ್ಯಗಳನ್ನು ಕೊಡಿಸುವ ಪ್ರಮುಖ ಪಾತ್ರವನ್ನು ವಹಿಸುವುದರ ಜೊತೆಗೆ ಅವರಿಗೆ ಆರ್ಥಿಕ ನೆರವನ್ನು ನೀಡಿ, ಕಾರ್ಮಿಕರನ್ನು ಸ್ವಾವಲಂಬಿಗಳನ್ನಾಗಿ ಮಾಡುತ್ತಿದೆ ಎಂದರು.

ಕಾರ್ಮಿಕ ಮುಖಂಡ ಎಂ.ಟಿ.ಸುಭಾಸ್‌ಚಂದ್ರ ಮಾತನಾಡಿ, ಕೇವಲ ಉಳ್ಳವರೇ ಸಹಕಾರ ಸಂಘಗಳನ್ನು ನಡೆಸುವಂತಹ ಕಾಲವೊಂದು ಇತ್ತು. ಇಂದು ಶ್ರಮಜೀವಿಗಳಾದ ಕಟ್ಟಡ ನಿರ್ಮಾಣ ಕಾರ್ಮಿಕರು ಭವಿಷ್ಯವನ್ನು ನಿರ್ಮಾಣ ಮಾಡಿಕೊಳ್ಳಬೇಕೆನ್ನುವ ಉದ್ದೇಶದಿಂದ ಇದು ಸಹಕಾರ ಸಂಘ ಸ್ಥಾಪಿಸಿಕೊಂಡು ಸೇವೆ ಮಾಡುತ್ತಿರುವುದು ಸಂತೋಷದ ವಿಚಾರ. ಹಾಗೆಯೇ ಕರ್ನಾಟಕ ಸರ್ಕಾರದ ಕಟ್ಟಡ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿನ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು. ತಾವೆಲ್ಲರೂ ಪ್ರಶ್ನಿಸದೆ ಇರುವುದರಿಂದ ಮಂಡಳಿಯಲ್ಲಿ ನಡೆಯುತ್ತಿರುವ ವ್ಯವಹಾರವನ್ನು ಬಯಲು ಮಾಡಲು ಹೋರಾಟಕ್ಕೆ ಮುಂದಾಗಬೇಕೆಂದು ಕರೆ ನೀಡಿದರು

ಸಹಕಾರ ಸಂಘದ ಪಿ.ಕೆ.ಲಿಂಗರಾಜು, ಭೀಮಾರೆಡ್ಡಿ, ವಿ.ಲಕ್ಷ್ಮಣ್, ಸಿಪಿಐನ ಅವರಗೆರೆ ಚಂದ್ರು, ಜಿ.ಯಲ್ಲಪ್ಪ ಮಾತನಾಡಿದರು.

ಅಧ್ಯಕ್ಷತೆ ವಹಿಸಿದ್ದ ಸಹಕಾರಿ ಸಂಘದ ಅಧ್ಯಕ್ಷ ಹೆಚ್.ಜಿ.ಉಮೇಶ್ ಅವರಗೆರೆ ಮಾತನಾಡಿ, ಸಹಕಾರಿ ಸಂಘ ನಮ್ಮದು ಎನ್ನುವ ಅಭಿಪ್ರಾಯ ನಮ್ಮ ಕಾರ್ಮಿಕರು ತಿಳಿದುಕೊಂಡಾಗ ಸೊಸೈಟಿ ಉನ್ನತ ಮಟ್ಟಕ್ಕೆ ಯಶಸ್ಸಿನ ಹಾದಿಯಲ್ಲಿ ಸಾಗಲಿದೆ ಎಂದರು.

ಈ ವೇಳೆ ಜಿ.ಆರ್.ನಾಗರಾಜ, ಮುತ್ತೇಶ್, ಎಸ್.ಎಂ.ಸಿದ್ದಲಿಂಗಪ್ಪ, ಶಿವಕುಮಾರ್ ಡಿ.ಶೆಟ್ಟರ್, ಸೈಯದ್‌ಗೌಸ್‌ಪೀರ್, ಡಿ.ಷಣ್ಮುಗಂ, ಕವಿತಾ, ನಂದಿನಿ, ರುದ್ರೇಶ್, ಸುರೇಶ್ ಇತರರು ಇದ್ದರು.

## ಎಲೆಚುಕ್ಕಿ, ಅಡಿಕೆ ಕೊಳೆ ರೋಗ ರೈತರ ಬದುಕನ್ನು ಕಸಿಯುತ್ತಿದೆ: ಗೋಪಾಲಕೃಷ್ಣ ಬೇಳೂರು

**ಶಿವಮೊಗ್ಗ:** ಎಲೆಚುಕ್ಕಿ ರೋಗ ಹಾಗೂ ಅಡಿಕೆ ಕೊಳೆ ರೋಗವು ಮಲೆನಾಡಿನ ರೈತರ ಜೀವನದ ಆರ್ಥಿಕತೆಯನ್ನು ಕಸಿಯುತ್ತಿದ್ದು, ಕೃಷಿ ವಿಜ್ಞಾನಿಗಳು ಇಂದಿನ ತಂತ್ರಜ್ಞಾನವನ್ನು ಬಳಸಿಕೊಂಡು ಇದನ್ನು ಗುಣಪಡಿಸುವ ಕಾರ್ಯ ಮಾಡಬೇಕು ಎಂದು ಸಾಗರ ಕ್ಷೇತ್ರದ ಶಾಸಕರಾದ ಗೋಪಾಲಕೃಷ್ಣ ಬೇಳೂರು ತಿಳಿಸಿದರು.

ಅವರು ಇಂದು ಇರುವಕ್ಕಿಯ ಕೆಳದಿ ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯದ ಆವರಣದಲ್ಲಿ ಆಯೋಜಿಸಿದ್ದ ವಿಶ್ವವಿದ್ಯಾಲಯದ 13 ನೇ ಸಂಸ್ಥಾಪನಾ ದಿನಾಚರಣೆಯ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಲೆನಾಡಿನ ಭಾಗದಲ್ಲಿ ಅಡಿಕೆ ಮರಕ್ಕೆ ಎಲೆಚುಕ್ಕಿ ರೋಗ ಹಾಗೂ ಹೆಚ್ಚಿನ ಮಳೆಯಿಂದಾಗಿ ಅಡಿಕೆ ಕೊಳೆ ರೋಗ ಉಂಟಾಗಿದ್ದು, ಇದರಿಂದ ರೈತರು ಆರ್ಥಿಕವಾಗಿ ಸಂಕಷ್ಟಕ್ಕೀಡಾಗುತ್ತಿದ್ದಾರೆ. ಎತ್ತರಕ್ಕೆ ಬೆಳೆಯಬೇಕಾದ ಮರಗಳು ಈ ರೋಗದಿಂದ ನೆಲಕಚ್ಚುತ್ತಿವೆ. ಹಾಗಾಗಿ ಕೃಷಿ ವಿಜ್ಞಾನಿಗಳು ಸ್ಥಳೀಯ ಹಾಗೂ ಅಂತರಾಷ್ಟ್ರೀಯ ವಿಜ್ಞಾನಿಗಳೊಂದಿಗೆ ಚರ್ಚಿಸಿ ಹೊಸ ತಂತ್ರಜ್ಞಾನವನ್ನು ಬಳಕೆ ಮಾಡಿ ಔಷಧಿಯನ್ನು ಕಂಡುಹಿಡಿಯಬೇಕು. ಇದರಿಂದ ರೈತರ ಬದುಕಿಗೆ ಅನುಕೂಲಕವಾಗುತ್ತದೆ ಎಂದು ಹೇಳಿದರು.

ರೈತರು ಪ್ರಗತಿಯಾದಾಗ ಮಾತ್ರ ಈ ದೇಶ ಪ್ರಗತಿಯಾಗುವುದು. ಆದ್ದರಿಂದ ರೈತರ ಉತ್ಪಾದನೆಗೆ ಹೆಚ್ಚಿನ ಮಹತ್ವ ನೀಡಬೇಕು. ಅದರಿಂದ ಅವರ ಆದಾಯವೂ ಕೂಡ ಹೆಚ್ಚಾಗುತ್ತದೆ. ಆದರೆ ಇತ್ತೀಚಿಗೆ ಕೃಷಿ ವಲಯವು ಸಾಕಷ್ಟು ನಷ್ಟಕ್ಕೀಡಾಗಿದ್ದು, ಉತ್ಪಾದನೆಯಲ್ಲಿ ಹಿನ್ನಡೆ ಅನುಭವಿಸುತ್ತಿದೆ. ಹಾಗಾಗಿ ರೈತರು ಕೃಷಿಯಲ್ಲಿ ಹೊಸ ತಂತ್ರಜ್ಞಾನಗಳನ್ನು ಅವಳಡಿಸಿಕೊಳ್ಳಬೇಕು.

ಕೃಷಿ, ತೋಟಗಾರಿಕೆ ಇಲಾಖೆಗಳು ವಿಶ್ವವಿದ್ಯಾಲಯದ ಮೂಲಕ ಹಲವಾರು ಯೋಜನೆಗಳನ್ನು ರೈತರಿಗೆ ತಲುಪಿಸುವಂತಹ ಕಾರ್ಯ ಮಾಡುತ್ತಿದೆ. ರೈತರು ಇದರ ಸದುಪಯೋಗ ಪಡೆದು, ಯಾವುದೇ ನಷ್ಟ ಅನುಭವಿಸದೆ ಕೃಷಿ




ಉತ್ಪನ್ನಗಳನ್ನು ಬೆಳೆಯಬೇಕು. ಆ ಮೂಲಕ ಆರ್ಥಿಕವಾಗಿ ಸಬಲರಾಗಬೇಕು. ರೈತರು ಇಂತಹ ಕಾರ್ಯಸಾಧನೆ ಮಾಡಲು ವಿಶ್ವವಿದ್ಯಾಲಯಗಳು, ಇಲ್ಲಿನ ವಿಜ್ಞಾನಿಗಳು ಕೂಡ ಸಹಕಾರ ನೀಡಬೇಕು ಎಂದರು.

ಸಂಸ್ಥಾಪನಾ ದಿನದ ಉಪನ್ಯಾಸ ನೀಡಿದ ಸಹ್ಯಾದ್ರಿ ವಿಜ್ಞಾನ ಕಾಲೇಜಿನ ನಿವೃತ್ತ ಪ್ರಾಂಶುಪಾಲರಾದ ಡಾ.ಟಿ.ಎಸ್.ಹೂವಯ್ಯ ಗೌಡ ಮಾತನಾಡಿ, ಒಂದು ಸಂಸ್ಥೆಯ ಪ್ರಾರಂಭ, ಅದರ ಬೆಳವಣಿಗೆ, ಅದು ಸಮಾಜಕ್ಕೆ ನೀಡಿದ ಕೊಡುಗೆ ಕುರಿತು ತಿಳಿಸಲು ಇಂತಹ ಸಂಸ್ಥಾಪನಾ ದಿನ ಆಚರಣೆ ಮಾಡಲಾಗುತ್ತದೆ. ಅದರಂತೆ ಕೆಳದಿ ಶಿವಪ್ಪನಾಯಕರ ಹೆಸರು ಪಡೆದಿರುವ ವಿಶ್ವವಿದ್ಯಾಲಯವು ತನ್ನದೇ ಆದ ಅನೇಕ ಸಾಧನೆಗಳನ್ನು ಜನರಿಗೆ ತಿಳಿಸುವ ದಿಸೆಯಲ್ಲಿ ಈ ಆಚರಣೆ ಮಾಡಿಕೊಳ್ಳುತ್ತಿದೆ.

ಶಿಸ್ತಿಗೆ ಇನ್ನೊಂದು ಹೆಸರೇ ಶಿವಪ್ಪನಾಯಕ. ಅವರ ಆಡಳಿತ ಅವಧಿಯಲ್ಲಿ ಅವರು ವಿಧಿಸಿದ ಕಂದಾಯ ತೆರಿಗೆ ವೈಜ್ಞಾನಿಕತೆಯಿಂದ ಕೂಡಿತ್ತು. ಹಾಗಾಗಿ ಈಗಲೂ ಶಿವಪ್ಪನಾಯಕರ ತೆರಿಗೆ ನೀತಿ ರಾಜ್ಯಕ್ಕೆ ಮಾದರಿಯಾಗಿದೆ ಎಂದು ತಿಳಿಸಿದರು.

ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯಗಳನ್ನು ರಾಜ್ಯದಲ್ಲಿ ಸ್ಥಾಪಿಸುವ ಮೂಲಕ ಸರ್ಕಾರಗಳು ಶಿಕ್ಷಣ ಕ್ಷೇತ್ರಕ್ಕೆ ಉತ್ತಮ ಕೊಡುಗೆ ನೀಡುತ್ತಿದ್ದು, ವಿಜ್ಞಾನದ ವಿದ್ಯಾರ್ಥಿಗಳು ಸರಿಯಾಗಿ ಬಳಕೆ ಮಾಡಿಕೊಳ್ಳಬೇಕು. ಹಿಂದಿನ ಕಾಲದಲ್ಲಿ ಸ್ವಾಮಿನಾಥನ್, ವರ್ಗೀಸ್‌ರಂತಹ ವಿಜ್ಞಾನಿಗಳ ಆಹಾರ ಕ್ರಾಂತಿ, ಹಸಿರು ಕ್ರಾಂತಿಗಳ ಮೂಲಕ ರೈತರಿಗೆ ಸಹಕಾರಿಯಾಗಿದ್ದಾರೆ. ನೀವುಗಳು ಇಂತಹ ಮಾರ್ಗದಲ್ಲಿ ಸಾಗಬೇಕು. ವಿಜ್ಞಾನದಲ್ಲಿ ಮಿತಿಯಿಲ್ಲದಷ್ಟು ಅವಕಾಶಗಳಿದ್ದು, ಅದನ್ನು ಬಳಸಿಕೊಳ್ಳಬೇಕು. ರೈತರಿಗೆ ಅನುಕೂಲವಾಗುವಂತಹ ಯೋಜನೆಗಳನ್ನು ತರಬೇಕು ಎಂದರು.

ಕಾರ್ಯಕ್ರಮದಲ್ಲಿ ಕೆಳದಿ ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಕುಲಪತಿ ಡಾ.ಆರ್.ಸಿ.ಜಗದೀಶ್ ಅಧ್ಯಕ್ಷ ನುಡಿಗಳನ್ನಾಡಿದರು.

ಈ ವೇಳೆ ವಿಶ್ವವಿದ್ಯಾಲಯದ ಅತ್ಯುತ್ತಮ ಶಿಕ್ಷಕ, ಸಂಶೋಧಕ, ವಿಸ್ತರಣಾ ವಿಜ್ಞಾನಿ ಹಾಗೂ ಬಾಹ್ಯ ಅನುದಾನಿ ಯೋಜನೆಗಳನ್ನು ಪಡೆದ ವಿಜ್ಞಾನಿಗಳಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಕಾರ್ಯಕ್ರದಲ್ಲಿ ಕುಲಸಚಿವ ಡಾ.ಜಿ.ಕೆ. ಗಿರಿಜೇಶ್, ಪ್ರಗತಿಪರ ರೈತರುಗಳು, ಕೃಷಿ ಉದ್ದಿಮೆದಾರರು, ವಿವಿಧ ಕೃಷಿ ಕಾಲೇಜಿನ ಅಧಿಕಾರಿಗಳ ಹಾಗೂ ಸಿಬ್ಬಂದಿ ವರ್ಗದವರು ಹಾಜರಿದ್ದರು.

## ಮಿಲಿಟರಿ ಶಾಲೆಯಲ್ಲಿ ಅಸಿಸ್ಟೆಂಟ್ ಮಾಸ್ಟರ್ ಹುದ್ದೆ

**ಚಿಕ್ಕಮಗಳೂರು:** ಬೆಂಗಳೂರಿನ ರಾಷ್ಟ್ರೀಯ ಮಿಲಿಟರಿ ಶಾಲೆಯಲ್ಲಿ ಖಾಲಿ ಇರುವ ಒಂದು (ಇಡಬ್ಲ್ಯುಎಸ್) ಅಸಿಸ್ಟೆಂಟ್ ಮಾಸ್ಟರ್ (ಇಂಗ್ಲೀಷ್) ಹುದ್ದೆಗೆ ಆನ್‌ಲೈನ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ.

ಅಭ್ಯರ್ಥಿ ಮಾನ್ಯತೆ ಪಡೆದ ವಿಶ್ವ ವಿದ್ಯಾಲಯದಿಂದ ಸಂಬಂಧಿತ ವಿಷಯದಲ್ಲಿ ಪದವಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಇಂಗ್ಲೀಷ್ ಓದುವಲ್ಲಿ ಮತ್ತು ಬರೆಯುವಲ್ಲಿ ಪ್ರಾವೀಣ್ಯತೆ ಹೊಂದಿರಬೇಕು. 18 ರಿಂದ 30 ವಯೋಮಿತಿಯ ಆಸಕ್ತರು ಅಕ್ಟೋಬರ್ 6 ರ ಬೆಳಿಗ್ಗೆ 11 ಗಂಟೆಯೊಳಗೆ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯನ್ನು ಸಂಪರ್ಕಿಸಬಹುದು. ದೂರವಾಣಿ ಸಂಖ್ಯೆ 08262-295538 ಮತ್ತು ವೆಬ್‌ಸೈಟ್ ವಿಳಾಸ(www. rashtriyamilitary schools.edu.in <http://schools. edu.in/>)ವನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಪ್ರಕಟಣೆಯಲ್ಲಿ ತಿಳಿಸಲಾಗಿದೆ.


## ಕುಂದು-ಕೊರತೆ ಪರಿಹಾರ ಕಾರ್ಯಕ್ರಮ

**ಚಿಕ್ಕಮಗಳೂರು:** ಬೆಳಗಾವಿ, ಶಿವಾಜಿ ಕ್ರೀಡಾಂಗಣದಲ್ಲಿ ಮಾಜಿ ಸೈನಿಕರು, ವೀರನಾರಿ ಮತ್ತು ಮೃತ ಮಾಜಿ ಸೈನಿಕರ ಪತ್ನಿಯರಿಗಾಗಿ ಮರಾಠ ಲೈಟ್ ಇನಫೆಂಟ್ರಿಯವರು ಅಕ್ಟೋಬರ್ 19 ರಂದು ಬೆಳಿಗ್ಗೆ 08:30 ರಿಂದ ಸಂಜೆ 4 ಗಂಟೆಯವರೆಗೆ ಕುಂದು-ಕೊರತೆ ಪರಿಹರಿಸಲು ಸಂಪರ್ಕ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ : 0831-2402821, ವಾಟ್ಸ್‌ಆಪ್ ಸಂಖ್ಯೆ : 8317350584 ಅಥವಾ e-mail : greatgorilla@nic.in <mailto:greatgorilla@nic. in> ಅನ್ನು ಸಂಪರ್ಕಿಸಬಹುದು ಎಂದು ಹಾಸನ ಜಿಲ್ಲೆಯ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕರು (ಪ್ರಭಾರ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಾತಿ ಕಾಲಂನಲ್ಲಿ ಬಲಿಜ ಎಂದೇ ಬರೆಸಲು ಮನವಿ

**ದಾವಣಗೆರೆ:** ಬಲಿಜ ಸಮಾಜದವರು ಸರ್ಕಾರದಿಂದ ನಡೆಸುತ್ತಿರುವ ಜಾತಿಸಮೀಕ್ಷೆಯಲ್ಲಿ ಜಾತಿ ಕಾಲಂನಲ್ಲಿ 'ಬಲಿಜ' ಎಂದು ಬರೆಸುವಂತೆ ಕರ್ನಾಟಕ ಪ್ರದೇಶ ಬಲಿಜ ಸಂಘದ ಜಿಲ್ಲಾ ಘಟಕ ತಿಳಿಸಿದೆ.

# ಹೃದಯದ ಆರೋಗ್ಯ ವೃದ್ಧಿಸುವ ಮತ್ತು ಕೊಲೆಸ್ಟ್ರಾಲ್ ಕಮ್ಮಿ ಮಾಡುವ 5 ಬಗೆಯ ಹಿಟ್ಟುಗಳು



ಇತ್ತೀಚಿನ ದಿನಗಳಲ್ಲಿ ಮನುಷ್ಯ ಸಾವನ್ನಪ್ಪಲು ಪ್ರಮುಖ ಕಾರಣಗಳು ಎಂದರೆ ಅದು ಕೊಲೆಸ್ಟ್ರಾಲ್ ಮತ್ತು ರಕ್ತದ ಒತ್ತಡ. ಕೊಲೆಸ್ಟ್ರಾಲ್ ಹೆಚ್ಚಾಯಿತು ಎಂದರೆ ರಕ್ತದ ಒತ್ತಡ ಕೂಡ ಏರುಪೇರಾಗುತ್ತದೆ. ಇದು ಹೃದಯದ ತೊಂದರೆಗೆ ಪ್ರಮುಖ ಕಾರಣವಾಗುತ್ತದೆ.

ಬ್ರಿಟಿಷ್ ಹಾರ್ಟ್ ಅಸೋಸಿಯೇಷನ್ ಹೇಳುವ ಹಾಗೆ ಯಾರ ರಕ್ತದಲ್ಲಿ ಹೆಚ್ಚು ಕೊಲೆಸ್ಟ್ರಾಲ್ ಇರುತ್ತದೆ ಅವರಿಗೆ ಹೃದಯಘಾತ ಸಮಸ್ಯೆ ತಪ್ಪಿದ್ದಲ್ಲ. ಹೀಗಾಗಿ ಕೊಲೆಸ್ಟ್ರಾಲ್ ನಿರ್ವಹಣೆಗೆ ಮತ್ತು ಹೃದಯದ ಆರೋಗ್ಯವನ್ನು ಉತ್ತಮವಾಗಿ ಕಾಪಾಡಿಕೊಳ್ಳಲು ಈ ಐದು ಬಗೆಯ ಹಿಟ್ಟುಗಳು ಸಾಕಷ್ಟು ನೆರವಿಗೆ ಬರುತ್ತವೆ. ಹೀಗಾಗಿ ನಿಮ್ಮ ಆಹಾರ ಪದ್ಧತಿಯಲ್ಲಿ ಸಾಧ್ಯವಾದಷ್ಟು ಇವುಗಳನ್ನು ಸೇರಿಸಿ ಸೇವಿಸಿ.

ಬಾಜ್ರಾ ಹಿಟ್ಟು

ಪೌಷ್ಟಿಕಾಂಶಗಳ ಆಗರವಾಗಿರುವ ಬಾಜ್ರಾ ಹಿಟ್ಟು ದೇಹಕ್ಕೆ ಅವಶ್ಯಕವಾಗಿ ಬೇಕಾದ ನಾರು, ಪ್ರೊಟೀನ್, ಮೆಗ್ನೀಷಿಯಮ್ ಜೊತೆಗೆ ಫಾಸ್ಫರಸ್, ಕಬ್ಬಿಣ ಮತ್ತು ಇನ್ನಿತರ ಪೌಷ್ಟಿಕಾಂಶಗಳನ್ನು ಹೆಚ್ಚಾಗಿ ಒಳಗೊಂಡಿರುತ್ತದೆ. ಇವೆಲ್ಲವೂ ಸಹ ಹೃದಯದ ಆರೋಗ್ಯಕ್ಕೆ ಬಹಳ ಒಳ್ಳೆಯದು ಎಂದು ಹೇಳಲಾಗುತ್ತದೆ. ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಹೆಲ್ತ್ ಹೇಳುವ ಹಾಗೆ ನಮ್ಮ ಕೊಲೆಸ್ಟ್ರಾಲ್ ಪ್ರಮಾಣವನ್ನು ಕಡಿಮೆ ಮಾಡಲು ಹಿಟ್ಟಿನಲ್ಲಿರುವ ಪೌಷ್ಟಿಕಾಂಶಗಳು ಮತ್ತು ಫೈಟೋ ಕೆಮಿಕಲ್ ಗಳು ಬಹಳ ಸಹಾಯಕ್ಕೆ ಬರುತ್ತವೆ.

### ಅಗಸೆ ಬೀಜಗಳ ಹಿಟ್ಟು



ಅಗಸೆ ಬೀಜಗಳಲ್ಲಿ ಆಂಟಿ ಆಕ್ಸಿಡೆಂಟ್ ಸಹಿತ ಫಾಸ್ಫರಸ್, ಮೆಗ್ನೀಷಿಯಂ ಮತ್ತು ಅಪಾರವಾದ ನಾರಿನ ಅಂಶ ಅಡಗಿದೆ. ಹೀಗಾಗಿ ಅಗಸೆ ಬೀಜಗಳಿಂದ ರೊಟ್ಟಿ ತಯಾರಿಸಿಕೊಂಡು ಸೇವನೆ ಮಾಡುವುದರಿಂದ ನೈಸರ್ಗಿಕವಾಗಿ ಕೆಟ್ಟ ಕೊಲೆ ಸ್ಟ್ರಾಲ್ ಅನ್ನು ಕಟ್ಟಿ ಹಾಕಬಹುದು ಮತ್ತು ಹೃದಯವನ್ನು ಕಾಪಾಡಿಕೊಳ್ಳ ಬಹುದು.

### ಗೋಧಿ ಹಿಟ್ಟು



ಗೋಧಿ ಹಿಟ್ಟಿನಲ್ಲಿ ಕೂಡ ನಾರಿನ ಪ್ರಮಾಣ ಕಂಡುಬರುತ್ತದೆ. ಜೊತೆಗೆ ಫಾಸ್ಫರಸ್, ಮ್ಯಾಂಗನೀಸ್, ತಾಮ್ರದ ಅಂಶಗಳು ಕೂಡ ಇವೆ. ವೈಜ್ಞಾನಿಕ ಅಧ್ಯಯನ ಹೇಳಿರುವ ಹಾಗೆ ಆಗಾಗ ಗೋಧಿ ಹಿಟ್ಟಿನಿಂದ ಆಹಾರ ಪದಾರ್ಥಗಳನ್ನು ತಯಾರಿಸಿ ಸೇವನೆ ಮಾಡುತ್ತಿದ್ದರೆ ಕೊಲೆಸ್ಟ್ರಾಲ್ ಕಂಟ್ರೋಲ್ ಆಗುತ್ತದೆ ಮತ್ತು ಹೃದಯದ ಆರೋಗ್ಯ ವೃದ್ಧಿಸುತ್ತದೆ.

### ಸೋಯಾ ಹಿಟ್ಟು



ಆರೋಗ್ಯಕರವಾದ ಹೃದಯಕ್ಕೆ ಸೋಯಾ ಹಿಟ್ಟು ಬಹಳ ಒಳ್ಳೆಯದು. ಇದು ಕೆಟ್ಟ ಕೊಲೆಸ್ಟ್ರಾಲ್ ಅನ್ನು ನಿಯಂತ್ರಿಸುತ್ತದೆ ಮತ್ತು ತನ್ನಲಿನ ಕಡಿಮೆ ಕೊಬ್ಬಿನ ಅಂಶದ ಕಾರಣದಿಂದ ಹೃದಯದ ಆರೋಗ್ಯವನ್ನು ಕಾಪಾಡುತ್ತದೆ.

ಹೃದಯ ಸ್ನೇಹಿ ಆಗಿರುವ ಅನೇಕ ಪೌಷ್ಟಿಕ ಸತ್ವಗಳು ಸೋಯಾ ಹಿಟ್ಟಿನಲ್ಲಿ ಹೆಚ್ಚಾಗಿ ಕಂಡುಬರುತ್ತವೆ. ಉದಾಹರಣೆಗೆ ಮೆಗ್ನೀಷಿಯಂ, ಪೊಟಾಸಿಯಂ, ಕಬ್ಬಿಣ, ನಾರು ಇತ್ಯಾದಿ. ಸೋಯಾ ಹಿಟ್ಟಿನಿಂದ ಚಪಾತಿ ತಯಾರಿಸಿ ಸೇವಿಸಬಹುದು ಮತ್ತು ಇದು ಆರೋಗ್ಯಕರವಾದ ರೀತಿಯಲ್ಲಿ ಕೊಲೆಸ್ಟ್ರಾಲ್ ಅನ್ನು ನಿರ್ವಹಣೆ ಮಾಡುತ್ತದೆ.

### ಕುಟ್ಟು ಹಿಟ್ಟು



ಇದು ಕೂಡ ಕೊಲೆಸ್ಟ್ರಾಲ್ ನಿಯಂತ್ರಣ ಮಾಡುವ ಅನೇಕ ಅಂಶಗಳು ಎನ್ನಲಾದ ನಾರು, ಪ್ರೋಟೀನ್, ಕಾರ್ಬೋಹೈಡ್ರೈಟ್, ಕಬ್ಬಿಣ, ಮೆಗ್ನೀಷಿಯಂ, ತಾಮ್ರ ಮತ್ತು ಸಸ್ಯಾಧಾರಿತ ಅಂಶಗಳನ್ನು ಒಳಗೊಂಡಿದೆ. ಅಧ್ಯಯನಗಳು ಹೇಳುವಂತೆ ಈ ಹಿಟ್ಟು ರಕ್ತದ ಒತ್ತಡವನ್ನು ನಿಯಂತ್ರಣ ಮಾಡಿ ಹೃದಯವನ್ನು ಆರೋಗ್ಯಕರ ವಾಗಿ ಕಾಪಾಡುತ್ತದೆ.

### ಕೊನೆಯ ಮಾತು

ಕೊಲೆಸ್ಟ್ರಾಲ್ ಕಡಿಮೆಯಾಗಬೇಕು ಹಾಗೂ ಹೃದಯದ ಆರೋಗ್ಯ ಚೆನ್ನಾಗಿರಬೇಕು ಎಂದರೆ ಮೊದಲಿಗೆ ಆರೋಗ್ಯಕಾರಿ ಜೀವನಶೈಲಿಯನ್ನು ಅನುಸರಿಸಬೇಕು. ಉದಾಹರಣೆಗೆ ಸಂಸ್ಕರಿಸಿದ ಕೆಂಪು ಮಾಂಸಗಳು, ಸಂಸ್ಕರಿಸಿದ ಆಹಾರ ಪದಾರ್ಥಗಳು, ಎಣ್ಣೆಯಾಂಶ ಇರುವ ಆಹಾರಗಳು, ಕೃತಕ ಸಿಹಿ ತಿಂಡಿಗಳು ಹಾಗೂ ತಂಪು ಪಾನೀಯಗಳಿಂದ ದೂರವಿರಬೇಕು. ಇವೆಲ್ಲಾ ಆಹಾರಗಳು ದೇಹದ ತೂಕ ಹೆಚ್ಚು ಮಾಡಿ, ಬೊಜ್ಜಿ ನಾಂಶ ಹೆಚ್ಚು ಮಾಡುವುದು ಮಾತ್ರವಲ್ಲದೆ, ರಕ್ತದಲ್ಲಿ ಕೆಟ್ಟ ಕೊಲೆಸ್ಟ್ರಾಲ್ ಅಂಶ ಹೆಚ್ಚಾಗುವಂತೆ ಮಾಡುವುದು. ಪೊಟ್ಯಾಶಿಯಮ್, ಫೈಬರ್ ಅಂದರೆ ನಾರಿನಾಂಶ, ಫೋಲೇಟ್, ವಿಟಮಿನ್ ಕೆ, ಮಿಟಮಿನ್ ಸಿ ಹಾಗೂ ಕ್ಯಾಲ್ಸಿಯಂ ಅಂಶಗಳು ಹೇರಳವಾಗಿ ಕಂಡು ಬರುವ ಹಣ್ಣು -ತರಕಾರಿಗಳನ್ನು ಹೆಚ್ಚಾಗಿ ಸೇವನೆ ಮಾಡಬೇಕು. ಇದರಿಂದ ಹೃದಯದ ಆರೋಗ್ಯ ವೃದ್ಧಿಯಾಗುತ್ತದೆ.

# ಮುಂಜಾನೆ ಸೂರ್ಯನ ಬೆಳಕಿನಲ್ಲಿ 20 ನಿಮಿಷ ವಾಕ್ ಮಾಡಿದ್ರೆ ಇರುವ ಪ್ರಯೋಜನಗಳು



ನಮ್ಮಲ್ಲಿ ಹಲವರು ಬೆಳಿಗ್ಗೆ ವಾಕಿಂಗ್ ಮಾಡಲು ಇಷ್ಟಪಡುತ್ತಾರೆ. ವೈದ್ಯರ ಪ್ರಕಾರ, ಬೆಳಗಿನ ಸೂರ್ಯನ ಬೆಳಕಿನಿಂದ ದಿನವನ್ನು ಪ್ರಾರಂಭಿಸುವುದು ಆರೋಗ್ಯಕ್ಕೆ ಮಾತ್ರವಲ್ಲ, ಇಡೀ ದಿನವು ಉತ್ತಮವಾಗಿ ಕಳೆಯುತ್ತದೆ. ನಿಮ್ಮ ಆರೋಗ್ಯವನ್ನು ಸುಧಾರಿಸಲು ಇದು ಉತ್ತಮ ಮಾರ್ಗವಾಗಿದೆ. ಸೂರ್ಯನ ಬೆಳಗಿನ ಕಿರಣಗಳು ನಿಮ್ಮ ದೇಹ ಮತ್ತು ಮನಸ್ಸಿಗೆ ಅನೇಕ ಪ್ರಯೋಜನಗಳನ್ನು ನೀಡುತ್ತವೆ, ಆದ್ದರಿಂದ ನಾವು ಪ್ರತಿದಿನ ಬೆಳಿಗ್ಗೆ ಸೂರ್ಯನಲ್ಲಿ ಕೆಲವು ನಿಮಿಷಗಳನ್ನು ಕಳೆಯಬೇಕು.

ಬೆಳಗಿನ ಸೂರ್ಯನ ಬೆಳಕು ನೈಸರ್ಗಿಕ ವಿಟಮಿನ್ ಡಿ ಯ ಅತ್ಯುತ್ತಮ ಮೂಲಗಳಲ್ಲಿ ಒಂದಾಗಿದೆ. ಇದು ದೇಹವು ಕ್ಯಾಲ್ಸಿಯಂ ಅನ್ನು ಹೀರಿಕೊಳ್ಳಲು ಸಹಾಯ ಮಾಡುವ ಅಗತ್ಯ ಪೋಷಕಾಂಶವಾಗಿದೆ, ಇದು ಮೂಳೆಗಳು ಮತ್ತು ಹಲ್ಲುಗಳನ್ನು ಬಲಪಡಿಸುತ್ತದೆ. ಆರೋಗ್ಯಕರ ಪ್ರತಿರಕ್ಷಣಾ ವ್ಯವಸ್ಥೆಗೆ ಇದು ಮುಖ್ಯವಾಗಿದೆ. ಬೆಳಗಿನ ಸೂರ್ಯನ ಬೆಳಕಿಗೆ ಕೇವಲ 15 ರಿಂದ 30 ನಿಮಿಷಗಳ ಕಾಲ ಮೈ ಒಡ್ಡುವಿಕೆಯು ನಿಮ್ಮ ದೈನಂದಿನ ಅವಶ್ಯಕತೆಗಳನ್ನು ಪೂರೈಸಲು ಸಾಕಷ್ಟು ವಿಟಮಿನ್ ಡಿ ಅನ್ನು ಒದಗಿಸುತ್ತದೆ.

ಸೂರ್ಯನ ಬೆಳಕು ಸಂತೋಷವನ್ನು ಹೆಚ್ಚಿಸುವ ಸಿರೊಟೋನಿನ್ ಎಂಬ ಹಾರ್ಮೋನ್ ಬಿಡುಗಡೆಯನ್ನು ಪ್ರಚೋದಿಸುತ್ತದೆ. ಸೂರ್ಯನ ಬೆಳಕಿನಿಂದ ನಿಮ್ಮ ದಿನವನ್ನು ಪ್ರಾರಂಭಿಸುವುದು ಆತಂಕ ಮತ್ತು ಖಿನ್ನತೆಯ ಭಾವನೆಗಳನ್ನು ನಿವಾರಿಸಲು ಸಹಾಯ ಮಾಡುತ್ತದೆ. ದಿನವಿಡೀ ನಿಮಗೆ ಉತ್ತಮ ಭಾವನೆಯನ್ನು ನೀಡುತ್ತದೆ.

ಬೆಳಗಿನ ಸೂರ್ಯನ ಬೆಳಕು ರಕ್ತದೊತ್ತಡವನ್ನು ಕಡಿಮೆ ಮಾಡುವ ಮೂಲಕ ಸುಧಾರಿತ ಹೃದಯದ ಆರೋಗ್ಯಕ್ಕೆ ಕೊಡುಗೆ ನೀಡುತ್ತದೆ. ಯುವಿ ಕಿರಣಗಳು ಚರ್ಮದಲ್ಲಿ ನೈಟ್ರಿಕ್ ಆಕ್ಸೈಡ್ ಅನ್ನು ಉತ್ಪಾದಿಸಲು ಸಹಾಯ ಮಾಡುತ್ತದೆ. ಇದು ರಕ್ತನಾಳಗಳನ್ನು ಹಿಗ್ಗಿಸುತ್ತದೆ, ಇದರಿಂದಾಗಿ ರಕ್ತದ ಹರಿವನ್ನು ಸುಧಾರಿಸುತ್ತದೆ.ಇದು ನಮ್ಮ ರಕ್ತದೊತ್ತಡವನ್ನು ನಿಯಂತ್ರಣದಲ್ಲಿರಿಸುತ್ತದೆ ಮತ್ತು ಹೃದ್ರೋಗದ ಅಪಾಯವನ್ನು ಕಡಿಮೆ ಮಾಡಬಹುದು.

# ಬಾಳೆಕಾಯಿ ಸೇವಿಸೋದ್ರಿಂದ ಆರೋಗ್ಯಕ್ಕೆ ತುಂಬಾ ಲಾಭಗಳಿವೆಯಂತೆ!



ಬಾಳೆಕಾಯಿಗಳನ್ನು ಸಾಮಾನ್ಯವಾಗಿ ಯಾವಾಗಲು ಅದರ ಸಿಹಿ ಗುಣಗಳು ಮತ್ತು ರುಚಿಗಾಗಿ ಎಲ್ಲರೂ ಇಷ್ಟ ಪಡುತ್ತಾರೆ. ಆದರೆ ಬಾಳೆಕಾಯಿಗಳನ್ನು ತಿನ್ನಬಹುದೇ? ಹೌದು ಹಸಿ ಬಾಳೆಕಾಯಿಗಳನ್ನು ತಿಂದಲ್ಲಿ ಇದರಲ್ಲಿ ಆರೋಗ್ಯಕ್ಕೆ ಬೇಕಾದ ಹಲವಾರು ಪ್ರಯೋಜನಗಳನ್ನು ನಾವು ಪಡೆಯಬಹುದು . ಬಾಳೆಕಾಯಿಗಳು ಅವುಗಳ ಮಾಧುರ್ಯ ಮತ್ತು ಬಹುಮುಖ ಪ್ರಯೋಜನಗಳಿಂದ ಹೆಚ್ಚಾಗಿ ಪ್ರೀತಿಸಲ್ಪಡುತ್ತವೆ, ಆದರೆ ಅವು ಕಚ್ಚಾ ಅಥವಾ ಹಸಿ ಕಾಯಿಗಳನ್ನು ನಿಮ್ಮ ಆಹಾರದಲ್ಲಿ ಸೇರಿಸುವುದರಿಂದ ಹಲವಾರು ಪೌಷ್ಟಿಕಾಂಶಗಳು ಮತ್ತು ಆರೋಗ್ಯಕರ ಬದಲಾವಣೆಗಳನ್ನು ನಿಮ್ಮ ದೇಹದಲ್ಲಿ ಮಾಡಬಹುದು .ಬಾಳೆಕಾಯಿ ಅವಶ್ಯಕ ವಿಟಮಿನ್ ಗಳು ಮತ್ತು ಖನಿಜಾಂಶಗಳ ಕಣಜವಾಗಿದೆ. ಇವು. ಬಾಳೆಕಾಯಿ ವಿಟಮಿನ್ ಸಿ , ವಿಟಮಿನ್ ಬಿ6, ಮತ್ತು ಪೊಟ್ಯಾಷಿಯಂಗಳ ಉತ್ತಮ ಮೂಲವಾಗಿದೆ. ವಿಟಮಿನ್ ಸಿ ಯು ವಿಟಮಿನ್ ಸಿ ಪ್ರತಿರಕ್ಷಣಾ ಕಾರ್ಯಕ್ಕೆ ನಿರ್ಣಾಯಕವಾಗಿದೆ ಮತ್ತು ಆಹಾರವನ್ನು ಶಕ್ತಿಯ ರೂಪದಲ್ಲಿ ಪರಿವರ್ತಿಸಲು ಸಹಾಯ ಮಾಡುತ್ತದೆ. ಇದರಲ್ಲಿರುವ ಪೊಟ್ಯಾಸಿಯಂ ಹೃದಯದ ಆರೋಗ್ಯ ಮತ್ತು ಸ್ನಾಯುಗಳ ಕಾರ್ಯ ನಿರ್ವಹಿಸಲು ಸಹಾಯ ಮಾಡುತ್ತದೆ. ರೆಸಿಸ್ಟೆಂಟ್ ಸ್ಟಾರ್ಚ್ ಅಥವಾ ನಿರೋಧಕ ಪಿಷ್ಟವನ್ನು ಬಾಳೆಕಾಯಿ ಅಧಿಕ ಮಟ್ಟದಲ್ಲಿ ಹೊಂದಿರುತ್ತದೆ. ಪಿಷ್ಟವು ಗ್ಲೂಕೋಸ್ ನ ಹೀರುವಿಕೆಯನ್ನು ನಿಧಾನಗೊಳಿಸುವ ಮೂಲಕ ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ. ಮಧುಮೇಹವನ್ನು ನಿರ್ವಹಿಸಲು ಮತ್ತು ಒಟ್ಟಾರೆ ಚಯಾಪಚಯ ಆರೋಗ್ಯವನ್ನು ಸುಧಾರಿಸುವಲ್ಲಿ ಉತ್ತಮವಾಗಿದೆ.

# ಮೆಂತ್ಯ ಮತ್ತು ದಾಸವಾಳವನ್ನು ಈ ರೀತಿ ಕೂದಲಿಗೆ ಬಳಸಿದ್ರೆ ಕೂದಲು ದಟ್ಟವಾಗಿ ಬೆಳೆಯುತ್ತೆ



ಉದ್ದವಾದ, ದಟ್ಟವಾದ ಕೂದಲು ಯಾರಿಗೆ ಇಷ್ಟವಿರಲ್ಲ ಹೇಳಿ... ಕೂದಲು ಮಹಿಳೆಯರ ಸೌಂದರ್ಯವನ್ನು ಮತ್ತಷ್ಟು ಹೆಚ್ಚಿಸುತ್ತದೆ. ಹಾಗಾಗಿ ಆರೋಗ್ಯಕರ ಕೂದಲನ್ನು ಹೊಂದಲು ಮಹಿಳೆಯರು ಹಲವಾರು ಬಗೆಯ ದುಬಾರಿ ಹೇರ್ ಪ್ರೊಡಕ್ಟ್ಗಳನ್ನು ಬಳಸುತ್ತಾರೆ. ಆದರೆ ಇದರಿಂದ ಉತ್ತಮ ಫಲಿತಾಂಶ ಸಿಕ್ಕಿದರೂ ಕೂಡ ಅದು ಹೆಚ್ಚು ಕಾಲ ಉಳಿಯುವುದಿಲ್ಲ. ಹಾಗಾಗಿ ನಿಮ್ಮ ಕೂದಲು ದಟ್ಟವಾಗಿ ಉದ್ದವಾಗಿ, ಆರೋಗ್ಯಕರವಾಗಿ ಬೆಳೆಯಲು ಆಯುರ್ವೇದದಲ್ಲಿ ತಿಳಿಸಿದಂತೆ ಮೆಂತ್ಯ ಮತ್ತು ದಾಸವಾಳವನ್ನು ಈ ರೀತಿಯಲ್ಲಿ ಬಳಸಿ. ಮೆಂತ್ಯ ಮತ್ತು ದಾಸವಾಳ ಆರೋಗ್ಯಕರ ಕೂದಲನ್ನು ಹೊಂದಲು ಆಯುರ್ವೇದದಲ್ಲಿ ಬಳಸುವ ಎರಡು ಪ್ರಮುಖ ಪದಾರ್ಥಗಳಾಗಿವೆ. ನೆತ್ತಿಯ ಪೋಷಣೆ, ಕೂದಲಿನ ಬೆಳವಣಿಗೆ, ಕೂದಲಿನ ಬುಡವನ್ನು ಗಟ್ಟಿಗೊಳಿಸುವುದು ಹೀಗೆ ಒಟ್ಟಾರೆ ಕೂದಲಿನ ಆರೋಗ್ಯಕ್ಕಾಗಿ ಅವುಗಳನ್ನು ಬಹಳ ಹಿಂದಿನಿಂದಲೂ ಬಳಸಲಾಗುತ್ತಿದೆ.

ಮೆಂತ್ಯಭಾರತದಲ್ಲಿ ಸಾಂಬಾರು ಪದಾರ್ಥಗಳಲ್ಲಿ ಹೆಚ್ಚಾಗಿ ಬಳಸುವಂತಹ ಮೆಂತ್ಯ ಬೀಜಗಳು ಪ್ರೋಟೀನ್ಗಳು, ಜೀವಸತ್ವಗಳು ಮತ್ತು ಖನಿಜಗಳಿಂದ ಸಮೃದ್ಧವಾಗಿದೆ, ಇದು ಕೂದಲಿಗೆ ಹಲವಾರು ರೀತಿಯಲ್ಲಿ ಪ್ರಯೋಜನವನ್ನು ನೀಡುತ್ತದೆ. ಮೆಂತ್ಯವು ಪ್ರೋಟೀನ್ಗಳು ಮತ್ತು ನಿಕೋಟಿನಿಕ್ ಆಮ್ಲವನ್ನು ಹೊಂದಿರುತ್ತದೆ, ಇದು ಕೂದಲಿನ ಕಿರುಚೀಲಗಳನ್ನು ಬಲಪಡಿಸಲು ಸಹಾಯ ಮಾಡುತ್ತದೆ, ಕೂದಲು ಉದುರುವುದನ್ನು ಕಡಿಮೆ ಮಾಡುತ್ತದೆ ಮತ್ತು ಕೂದಲಿನ ತುದಿ ಒಡೆಯುವುದನ್ನು ತಡೆಯುತ್ತದೆ.ಇದು ನೆತ್ತಿಯ ರಕ್ತದ ಹರಿವನ್ನು ಹೆಚ್ಚಿಸುವುದರ ಮೂಲಕ ಕೂದಲು ಬೆಳೆಯಲು ಸಹಾಯ ಮಾಡುತ್ತದೆ ಮತ್ತು ಇದರಿಂದ ಕೂದಲುದುರುವುದು ಸಹ ಕಡಿಮೆಯಾಗುತ್ತದೆ.

# ಗುಲಾಬಿ ರಂಗಿನ ತುಟಿಯಲಿಪ್ ಬಾಮ್‌ಗಳು

**ಗುಲಾಬಿ ಅಥವಾ ಕೆಂಪು ತುಟಿಗಳು ಮುಖದ ಅಂದವನ್ನು ಹೆಚ್ಚಿಸುತ್ತವೆ. ಮುಖಕ್ಕೆ ಎಷ್ಟೇ ಮೇಕಪ್ ಬಳಿದರೂ ಕೂಡ ಮುಖ ಸುಂದರವಾಗಿ ಕಾಣುವುದು ತುಟಿಗಳಿಗೆ ಲಿಪ್ ಸ್ಟಿಕ್ ಹಚ್ಚಿದ ಮೇಲೆಯೇ. ಹಾಗಾಗಿ ತುಟಿಗಳನ್ನು ಆರೋಗ್ಯಕರವಾಗಿ ನೋಡಿಕೊಳ್ಳಬೇಕು. ಇದರಿಂದ ತುಟಿಗಳು ಕೆಂಪು ಅಥವಾ ಗುಲಾಬಿ ಬಣ್ಣದಲ್ಲಿರುತ್ತದೆ. ಆದರೆ ತುಟಿಗಳಿಗೆ ಲಿಪ್ಸ್ಟಿಕ್ ಅನ್ನು ಹೆಚ್ಚಾಗಿ ಬಳಸುವುದರಿಂದ ಅದರಲ್ಲಿರುವ ರಾಸಾಯನಿಕಗಳು ತುಟಿಗಳ ಚರ್ಮಕ್ಕೆ ಹಾನಿ ಮಾಡಿ ತುಟಿ ಕಪ್ಪಾಗುವಂತೆ ಮಾಡುತ್ತವೆ. ಹಾಗಾಗಿ ತುಟಿಗಳ ಬಗ್ಗೆ ಕಾಳಜಿವಹಿಸು ವುದು ಅತ್ಯಗತ್ಯ.ಈ ಒಳ್ಳೆಯ ಲಿಪ್ ಬಾಮ್ಗಳಲ್ಲಿ ತುಟಿಗಳನ್ನು ಆರೈಕೆ ಮಾಡುವಂತಹ ಈ 5 ಪದಾರ್ಥಗಳು ಇರುತ್ತದೆ. ಆ 5 ಪದಾರ್ಥಗಳು ಯಾವುದೆಂಬುದನ್ನು ನೋಡೋಣ.**



**ವಿಟಮಿನ್ ಇ**

ವಿಟಮಿನ್ ಇ' ಉತ್ಕರ್ಷಣ ನಿರೋಧಕಗಳು ಒರಟು ತುಟಿಗಳನ್ನು ಗುಣಪಡಿಸಲು ಉತ್ತಮವಾಗಿ ಕಾರ್ಯನಿರ್ವಹಿಸುತ್ತವೆ. ಇದು ಹೈಪರ್ಪಿಗ್ಮೆಂಟೇಶನ್ ಅನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ವಿಟಮಿನ್ ಇ ಹೊಂದಿರುವ ಲಿಪ್ ಬಾಮ್ ಗಳು ತುಟಿಗಳಿಗೆ ತೇವಾಂಶ ನೀಡುತ್ತದೆ ಮತ್ತು ತುಟಿಗಳ ಚರ್ಮ ಹಾನಿಯಾಗದಂತೆ ವಿಟಮಿನ್ ಇ ಹೊಂದಿರುವ ಲಿಪ್ ಬಾಮ್ ಗಳು ತುಟಿಗಳಿಗೆ ತೇವಾಂಶ ನೀಡುತ್ತದೆ ಮತ್ತು ತುಟಿಗಳ ಚರ್ಮ ಹಾನಿಯಾಗದಂತೆ ತಡೆಯುತ್ತದೆ. ಆದ್ದರಿಂದ ನೀವು ಒಣ ಮತ್ತು ಕಿರಿಕಿರಿಯ ತುಟಿಗಳನ್ನು ಹೊಂದಿದ್ದರೆ, ವಿಟಮಿನ್ ಇ ಸಂಯುಕ್ತವನ್ನು ಹೊಂದಿರುವ ಲಿಪ್ ಬಾಮ್ ಅನ್ನು ಖರೀದಿಸಿ ಬಳಸಿ

**ಶಿಯಾ ಬೆಣ್ಣೆ**

ಶಿಯಾ ಬೆಣ್ಣೆ ತುಟಿಗಳಿಗೆ ನೈಸರ್ಗಿಕವಾಗಿ ಮಾಯಿಶ್ಚರೈಸರ್ ಮಾಡುತ್ತದೆ. ವಿಟಮಿನ್ ಎ ಮತ್ತು ಇ ಎರಡನ್ನೂ ಒಳಗೊಂಡಿರುವ ಶಿಯಾ ಬೆಣ್ಣೆ ತುಟಿಗಳ ಮೇಲಿನ ಹಾನಿಗೊಳಗಾದ ಚರ್ಮವನ್ನು ಸರಿಪಡಿಸಲು ಸಹಾಯ ಮಾಡುತ್ತದೆ.ಇದರ ಉತ್ಕರ್ಷಣ ನಿರೋಧಕಗಳು ಮತ್ತು ಉರಿಯೂತದ ಗುಣಲಕ್ಷಣಗಳು ತುಟಿಯ ಊತವನ್ನು ಕಡಿಮೆ ಮಾಡುತ್ತದೆ. ಮತ್ತು ತುಟಿ ದಪ್ಪವಾಗಿ ಕಾಣುವಂತೆ ಮಾಡುತ್ತದೆ. ಹಾಗಾಗಿ ತುಟಿಗಳು ಯಾವಾಗಲೂ ಶುಷ್ಕ ಮತ್ತು ಚಪ್ಪಟೆಯಾಗಿದ್ದರೆ ಶಿಯಾ ಬೆಣ್ಣೆ ಇರುವಂತಹ ಲಿಪ್ ಬಾಮ್ ಬಳಸಿ ಆಶ್ಚರ್ಯಕರ ಫಲಿತಾಂಶವನ್ನು ಪಡೆಯಿರಿ.

**ತೆಂಗಿನ ಎಣ್ಣೆ**

ತೆಂಗಿನ ಎಣ್ಣೆ ನೈಸರ್ಗಿಕ ಮಾಯಿಶ್ಚರೈಸಿಂಗ್ ಏಜೆಂಟ್ ಆಗಿದೆ. ಇದು ಚರ್ಮದ ಆರೋಗ್ಯಕ್ಕೆ ಪ್ರಯೋಜನಕಾರಿಯಾಗಿದೆ. ತುಟಿಗಳಂತಹ ತೆಳುವಾದ ಚರ್ಮವನ್ನು ಹೊಂದಿರುವ ಭಾಗಗಳಿಗೆ ತೆಂಗಿನ ಎಣ್ಣೆ ಹಚ್ಚುವುದರಿಂದ ಸಮಸ್ಯೆಗಳು ಬೇಗನೆ ವಾಸಿಯಾಗುತ್ತದೆ. ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಹೆಲ್ತ್ ನಡೆಸಿದ ಅಧ್ಯಯನದ ಪ್ರಕಾರ, ತೆಂಗಿನ ಎಣ್ಣೆಯ ಆಂಟಿಮೈಕ್ರೊಬಿಯಲ್ ಗುಣಲಕ್ಷಣಗಳು ಚರ್ಮದ ಸೋಂಕನ್ನು ತಡೆಯುತ್ತವೆ. ಇದರ ಎಮೋಲಿಯಂಟ್ ಅಂಶ ತುಟಿಗಳನ್ನು ಯಾವಾಗಲೂ ಹೈಡ್ರೇಟ್ ಮತ್ತು ತೇವಾಂಶದಿಂದ ಕೂಡಿರುವಂತೆ ಮಾಡುತ್ತದೆ.

**ಜೊಜೊಬಾ ಎಣ್ಣೆ**

ಜೊಜೊಬಾ ಎಣ್ಣೆ ವಿಟಮಿನ್ ಇ ಯ ಜೊತೆಗೆ ಇತರ ಪೋಷಕಾಂಶಗಳನ್ನು ಹೊಂದಿದೆ. ಇದರ ನೈಸರ್ಗಿಕ ಮಾಯಿಶ್ಚರೈಸಿಂಗ್ ಗುಣವು ತುಟಿಯ ಚರ್ಮವನ್ನು ಮೃದುವಾಗಿಸಿ ಹೊಳೆಯುವಂತೆ ಮಾಡುತ್ತದೆ.

ಇದು ತುಟಿಗಳನ್ನು ಸೂರ್ಯನ ಹಾನಿಕಾರಕ ಕಿರಣಗಳಿಂದ ರಕ್ಷಿಸುತ್ತದೆ ಮತ್ತು ಹೈಪರ್ಪಿಗ್ಮೆಂಟೇಶನ್ ಅನ್ನು ಕಡಿಮೆ ಮಾಡಲು ಒಳ್ಳೆಯದು ಎಂದು ಪರಿಗಣಿಸಲಾಗಿದೆ. ಜೊಜೊಬಾ ಎಣ್ಣೆ ಇರುವಂತಹ ಲಿಪ್ ಬಾಮ್ ಗಳು ನಿಮ್ಮ ತುಟಿಯ ಅನೇಕ ಸಮಸ್ಯೆಗಳನ್ನು ಪರಿಹಾರ ಮಾಡುತ್ತವೆ.

# ಕೊಲೆಸ್ಟ್ರಾಲ್, ಶುಗರ್ ಇರೋರು ಬೆಳಗ್ಗೆ ಒಂದು ಹಿಡಿ ಮೊಳಕೆಯೊಡೆದ ಈ ಕಾಳು ತಿನ್ನಬೇಕು



ಬೆಳಿಗ್ಗೆ ಖಾಲಿ ಹೊಟ್ಟೆಯಲ್ಲಿ 1 ಹಿಡಿ ಮೊಳಕೆಯೊಡೆದ ಮೆಂತ್ಯವನ್ನು ಸೇವಿಸಿದರೆ ಕೊಲೆಸ್ಟ್ರಾಲ್ ಮತ್ತು ಮಧುಮೇಹದಿಂದ ಮುಕ್ತಿ ಸಿಗುತ್ತದೆ. ಮೊಳಕೆಯೊಡೆದ ಮೆಂತ್ಯವು ಪೋಷಕಾಂಶಗಳಿಂದ ಸಮೃದ್ಧವಾಗಿದೆ. ಇದರ ಸೇವನೆಯು ಆರೋಗ್ಯಕ್ಕೆ ಹೆಚ್ಚಿನ ಪ್ರಮಾಣದಲ್ಲಿ ಪ್ರಯೋಜನಕಾರಿ ಎಂದು ಸಾಬೀತುಪಡಿಸುತ್ತದೆ. ಮೆಂತ್ಯ ಬೀಜಗಳನ್ನು ನೀರಿನಲ್ಲಿ ನೆನೆಸಿದ ನಂತರ ಮೊಳಕೆ ಭರಿಸಿ.

ಮೊಳಕೆಯೊಡೆಯುವುದರಿಂದ ಮೆಂತ್ಯದಲ್ಲಿನ ಅನೇಕ ಪೋಷಕಾಂಶಗಳ ಪ್ರಮಾಣವು ಹೆಚ್ಚಾಗುತ್ತದೆ. ಇದು ಆರೋಗ್ಯಕ್ಕೆ ಇನ್ನಷ್ಟು ಪ್ರಯೋಜನಕಾರಿಯಾಗಿದೆ.

ಮೊಳಕೆಯೊಡೆದ ಮೆಂತ್ಯದ ಪ್ರಯೋಜನಗಳು

ಮೊಳಕೆಯೊಡೆದ ಮೆಂತ್ಯದಲ್ಲಿ ಇರುವ ಫೈಬರ್ ಮತ್ತು ಇತರ ಪೋಷಕಾಂಶಗಳು ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ. ಇದು ಇನ್ಸುಲಿನ್ ಸೂಕ್ಷ್ಮತೆಯನ್ನು ಹೆಚ್ಚಿಸುವ ಮೂಲಕ ಮತ್ತು ದೇಹದಲ್ಲಿ ಸಕ್ಕರೆಯ ಹೀರಿಕೊಳ್ಳುವಿಕೆಯನ್ನು ನಿಧಾನಗೊಳಿಸುವ ಮೂಲಕ ಮಧುಮೇಹ ರೋಗಿಗಳಿಗೆ ಪ್ರಯೋಜನಕಾರಿಯಾಗಿದೆ.

ಮೊಳಕೆಯೊಡೆದ ಮೆಂತ್ಯದಲ್ಲಿರುವ ಲೆಕ್ಟಿನ್ ಎಂಬ ಅಂಶವು ಕೆಟ್ಟ ಕೊಲೆಸ್ಟ್ರಾಲ್ ಅನ್ನು ಕಡಿಮೆ ಮಾಡಲು ಮತ್ತು ಉತ್ತಮ ಕೊಲೆಸ್ಟ್ರಾಲ್ ಅನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ.

ಇದು ಹೃದಯ ಕಾಯಿಲೆಗಳ ಅಪಾಯವನ್ನು ಕಡಿಮೆ ಮಾಡುತ್ತದೆ.ಕೂದಲನ್ನು ಬಲವಾಗಿ ಮತ್ತು ಹೊಳೆಯುವಂತೆ ಮಾಡಲು ಸಹಾಯ ಮಾಡುತ್ತದೆ. ಕೂದಲು ಉದುರುವುದನ್ನು ತಡೆಯಲು ಮತ್ತು ಕೂದಲಿನ ಬೆಳವಣಿಗೆಯನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ.

ಇದರಲ್ಲಿರುವ ಫೈಬರ್ ಜೀರ್ಣಾಂಗ ವ್ಯವಸ್ಥೆಯನ್ನು ಆರೋಗ್ಯಕರವಾಗಿಡಲು ಸಹಾಯ ಮಾಡುತ್ತದೆ.ಇದು ಮಲಬದ್ಧತೆ, ಆಮ್ಲೀಯತೆ ಮತ್ತು ಅಜೀರ್ಣದಂತಹ ಸಮಸ್ಯೆಗಳಿಂದ ಪರಿಹಾರವನ್ನು ನೀಡುತ್ತದೆ. ಇದು ಕಡಿಮೆ ಕ್ಯಾಲೋರಿ ಅಂಶವನ್ನು ಹೊಂದಿದೆ ಮತ್ತು ದೀರ್ಘಕಾಲದವರೆಗೆ ಹೊಟ್ಟೆಯನ್ನು ತುಂಬಿರುವಂತೆ ಮಾಡುತ್ತದೆ. ಇದು ತೂಕ ನಷ್ಟಕ್ಕೆ ಸಹಾಯ ಮಾಡುತ್ತದೆ.ಮೊಳಕೆಯೊಡೆದ ಮೆಂತ್ಯವು ಆಂಟಿಆಕ್ಸಿಡೆಂಟ್ಗಳನ್ನು ಹೊಂದಿದ್ದು ಅದು ಫ್ರೀ ರಾಡಿಕಲ್ಗಳಿಂದ ಚರ್ಮವನ್ನು ರಕ್ಷಿಸುತ್ತದೆ ಮತ್ತು ಆರೋಗ್ಯಕರವಾಗಿರುತ್ತದೆ. ಇದು ಮೊಡವೆ ಮತ್ತು ಕಲೆಗಳನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.

# ಕಿಡ್ನಿಸ್ಟೋನ್ ನಿವಾರಿಸಲು ಬೆಸ್ಟ್ ಅಂತೆ ಈ ಪುಟ್ಟ ಗಿಡ



ನೆಲನೆಲ್ಲಿಯನ್ನು ನೀವು ನೋಡಿರಬಹುದು, ಕೆಲವೊಮ್ಮೆ ಇದು ರಸ್ತೆ ಬದಿಯಲ್ಲಿ, ಗದ್ದೆ ಬದಿಯಲ್ಲೂ, ತೋಟದಲ್ಲೂ ಬೆಳೆದಿರುತ್ತದೆ. ಇದೊಂದು ಪುಟ್ಟ ಸಸ್ಯವಾಗಿದ್ದು, ಸಾಕಷ್ಟು ಆಯುರ್ವೇದಿಕ್ ಗುಣಗಳನ್ನು ಹೊಂದಿದೆ. ನೆಲನೆಲ್ಲಿಯನ್ನು ಕಷಾಯ ಮಾಡಿ ಕುಡಿಯುವುದರಿಂದ ಹಲವಾರು ರೋಗಗಳಿಂದ ಪಾರಾಗಬಹುದು. ನಾವಿಂದು ಈ ಪುಟ್ಟ ಗಿಡದಿಂದ ಯಾವೆಲ್ಲಾ ಆರೋಗ್ಯ ಸಮಸ್ಯೆಗಳಿಂದ ಪಾರಾಗಬಹುದು ಎನ್ನುವುದನ್ನು ತಿಳಿಯೋಣ.ನೆಲನೆಲ್ಲಿಯನ್ನು "ಸ್ಟೋನ್ ಬ್ರೇಕರ್" ಎಂದೂ ಕರೆಯುತ್ತಾರೆ ಏಕೆಂದರೆ ಇದು ಮೂತ್ರಪಿಂಡದ ಕಲ್ಲುಗಳಿಗೆ ಚಿಕಿತ್ಸೆ ನೀಡಬಲ್ಲದು. ಈ ಗಿಡ ಮೂಲಿಕೆಯು ಕ್ಷಾರೀಯ ಗುಣಗಳನ್ನು ಹೊಂದಿದೆ, ಇದು ಮೂತ್ರಪಿಂಡದ ಕಲ್ಲುಗಳು ಮತ್ತು ಪಿತ್ತಗಲ್ಲುಗಳ ಬೆಳವಣಿಗೆಯನ್ನು ತಡೆಯಲು ಸಹಾಯ ಮಾಡುತ್ತದೆ. ಆಯುರ್ವೇದ ಔಷಧದ ಪ್ರಕಾರ, ಮೂತ್ರಪಿಂಡದ ಕಲ್ಲು ಉತ್ಪಾದನೆಗೆ ನೆಲನೆಲ್ಲಿ ಅತ್ಯಂತ ಭರವಸೆಯ ಚಿಕಿತ್ಸೆಯಾಗಿದೆ.

ಪಿತ್ತಗಲ್ಲುಗಳು ಪಿತ್ತಕೋಶದಲ್ಲಿ ರೂಪುಗೊಳ್ಳುವ ಜೀರ್ಣಕಾರಿ ದ್ರವದ ಸಣ್ಣ, ಗಟ್ಟಿಯಾದ ನಿಕ್ಷೇಪಗಳಾಗಿವೆ. ಅವು ಸಾಮಾನ್ಯವಾಗಿ ಕೊಲೆಸ್ಟ್ರಾಲ್ ಅಥವಾ ಬೈಲಿರುಬಿನ್ನಿಂದ ಕೂಡಿರುತ್ತವೆ ಮತ್ತು ಗಾತ್ರ ಮತ್ತು ಪ್ರಮಾಣದಲ್ಲಿರುತ್ತವೆ. ಪಿತ್ತಗಲ್ಲು ಹೊಂದಿರುವ ಹೆಚ್ಚಿನ ಜನರು ರೋಗಲಕ್ಷಣಗಳನ್ನು ಅನುಭವಿಸುವುದಿಲ್ಲ ಅಥವಾ ಚಿಕಿತ್ಸೆಯ ಅಗತ್ಯವಿರುವುದಿಲ್ಲ. ಒಂದು ವೇಳೆ ನೀವು ತೊಡಕುಗಳನ್ನು ಅನುಭವಿಸಿದರೆ ಔಷಧಿ ಅಥವಾ ಶಸ್ತ್ರಚಿಕಿತ್ಸೆಯ ಅಗತ್ಯವಿರುತ್ತದೆ.

ಇದು ಹೊಟ್ಟೆಯ ಹುಣ್ಣುಗಳಿಗೆ ಕಾರಣವಾಗಿದೆ. ಜನರಲ್ಲಿ ಹೊಟ್ಟೆಯ ಹುಣ್ಣುಗಳಿಗೆ ಚಿಕಿತ್ಸೆ ನೀಡಲು ನೆಲನೆಲ್ಲಿಯನ್ನು ಹೊಂದಿರುವ ಮೌಖಿಕ ಪೂರಕವು ಉಪಯುಕ್ತವಾಗಿದೆಯೇ ಎಂದು ನಿರ್ಧರಿಸಲು ಹೆಚ್ಚಿನ ಸಂಶೋಧನೆಯ ಅಗತ್ಯವಿದೆ.ನೆಲನೆಲ್ಲಿಯ ಪೂರಕಗಳು ಕಾರ್ಯನಿರ್ವಹಿಸುವ ವಿಧಾನವು ಟೆಸ್ಟ್-ಟ್ಯೂಬ್ ಸಂಶೋಧನೆಯಲ್ಲಿ ಬಳಸಲಾಗುವ ಅತ್ಯಂತ ಕೇಂದ್ರೀಕೃತ ಸಾರಗಳಿಗಿಂತ ಭಿನ್ನವಾಗಿದೆ, ಇವುಗಳನ್ನು ನೇರವಾಗಿ ಬ್ಯಾಕ್ಟೀರಿಯಾದ ಜೀವಕೋಶಗಳಿಗೆ ನೀಡಲಾಗುತ್ತದೆ.ನೆಲನೆಲ್ಲಿಯಲ್ಲಿ ಒಳಗೊಂಡಿರುವ ಉತ್ಕರ್ಷಣ ನಿರೋಧಕಗಳು ಕೆಲವು ಪ್ರಾಣಿಗಳ ರಕ್ತದಲ್ಲಿನ ಸಕ್ಕರೆಯ ಪ್ರಮಾಣವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತವೆ. ಆದಾಗ್ಯೂ, ಹೆಚ್ಚಿನ ಮಾನವ ಅಧ್ಯಯನಗಳು ಅಗತ್ಯವಿದೆ.ಸಾಂಪ್ರದಾಯಿಕ ಚೀನೀ ಔಷಧದ ಪ್ರಕಾರ, ನೆಲನೆಲ್ಲಿ ಯಕೃತ್ತಿನ ಕಾರ್ಯವನ್ನು ಹೆಚ್ಚಿಸುವ ಮೂಲಿಕೆಯಾಗಿದೆ. ನೆಲನೆಲ್ಲಿ ಹೆಪಟೈಟಿಸ್ ಬಿ ವೈರಸ್ನ ಹರಡುವಿಕೆ ಮತ್ತು ಬೆಳವಣಿಗೆಯನ್ನು ತಡೆಯುತ್ತದೆ, ವೈರಸ್ನ ರಕ್ತದ ಮಟ್ಟವನ್ನು ಕಡಿಮೆಗೊಳಿಸುತ್ತದೆ, ಮತ್ತು ಯಕೃತ್ತಿನ ಕಾರ್ಯವನ್ನು ಪುನಃಸ್ಥಾಪಿಸಿತು.

# ಶುಂಠಿ ಜ್ಯೂಸ್ ಕುಡಿಯೋದ್ರಿಂದ ಎಷ್ಟೆಲ್ಲಾ ಲಾಭಗಳಿವೆ ನೋಡಿ



ಶುಂಠಿಯು ಸಾಕಷ್ಟು ಆಯುರ್ವೇದಿಕ್ ಗುಣಗಳನ್ನು ಹೊಂದಿರುವ ಗಿಡಮೂಲಿಕೆಗಳಾಗಿದೆ. ಶುಂಠಿ ರಸವನ್ನು ಸೇವಿಸುವುದರಿಂದ ಹಲವಾರು ಸಣ್ಣ ಪುಟ್ಟ ರೋಗಗಳನ್ನು ದೂರವಿಡಬಹುದು. ನೀವು ಇದನ್ನು ಹಸಿಯಾಗಿಯೂ ಸೇವಿಸಬಹುದು ಅಥವಾ ಒಣ ಶುಂಠಿಯನ್ನಾದರೂ ಸೇವಿಸಬಹುದು.ಶುಂಠಿ ರಸವು ಉತ್ಕರ್ಷಣ ನಿರೋಧಕಗಳಲ್ಲಿ ಸಮೃದ್ಧವಾಗಿದೆ, ಇದು ಆಕ್ಸಿಡೇಟಿವ್ ಒತ್ತಡ ಮತ್ತು ಸೆಲ್ಯುಲಾರ್ ಹಾನಿಗೆ ಕಾರಣವಾಗುವ ಫ್ರೀ ರಾಡಿಕಲ್ಗಳನ್ನು ಎದುರಿಸುವ ಮೂಲಕ ಪ್ರತಿರಕ್ಷಣಾ ವ್ಯವಸ್ಥೆಯನ್ನು ಬೆಂಬಲಿಸುತ್ತದೆ. ಒಟ್ಟಾರೆ ಆರೋಗ್ಯ ಮತ್ತು ಸೋಂಕುಗಳ ವಿರುದ್ಧ ಸ್ಥಿತಿಸ್ಥಾಪಕತ್ವವನ್ನು ಕಾಪಾಡಿಕೊಳ್ಳಲು ಇದು ಅತ್ಯಗತ್ಯ.ಶುಂಠಿ ರಸವು ಅದರ ಜೀರ್ಣಕಾರಿ ಪ್ರಯೋಜನಗಳಿಗಾಗಿ ಹೆಸರುವಾಸಿಯಾಗಿದೆ. ಇದು ನೈಸರ್ಗಿಕ ಕಿಣ್ವಗಳನ್ನು ಹೊಂದಿದ್ದು, ಇದು ಆಹಾರವನ್ನು ಒಡೆಯಲು ಸಹಾಯ ಮಾಡುತ್ತದೆ ಮತ್ತು ಜೀರ್ಣಾಂಗವ್ಯೂಹದ ಸುಗಮ ಕಾರ್ಯನಿರ್ವಹಣೆಯನ್ನು ಬೆಂಬಲಿಸುತ್ತದೆ. ಇದು ಹೊಟ್ಟೆ ಉಬ್ಬುವುದು ಮತ್ತು ಅಜೀರ್ಣದಂತಹ ರೋಗಲಕ್ಷಣಗಳನ್ನು ನಿವಾರಿಸಲು ಸಹಾಯ ಮಾಡುತ್ತದೆ.

ಶುಂಠಿಯನ್ನು ಸೇವಿಸುವುದರಿಂದ ವಾಕರಿಕೆ, ಬೆಳಗಿನ ಬೇನೆ ಮತ್ತು ಮಲ ಬದ್ಧತೆ ಸೇರಿದಂತೆ ಹೊಟ್ಟೆಯ ಇನ್ನಿತರ ಸಮಸ್ಯೆಯನ್ನು ನಿವಾರಿಸಲು ಸಹಾಯ ಮಾಡುತ್ತದೆ. ಅಸ್ಥಿರತೆಯ ಭಾವನೆಗಳನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ, ಸಾಂಪ್ರದಾಯಿಕ ಔಷಧಿಗಳಿಗೆ ನೈಸರ್ಗಿಕ ಪರ್ಯಾಯವನ್ನು ನೀಡುತ್ತದೆ

